ಬೆಂಗಳೂರು ಸಂಪುಟ: 16 ಸಂಚಿಕೆ: 32 ಪುಟ: 06 ಮಂಗಳವಾರ 2–12–2024

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಮೇಕಪ್ ಇಲ್ಲದೆ ನಟಿಸಿದ್ದ ಐಶ್ವರ್ಯಾ

ಟೀಂ ಇಂಡಿಯಾಗೆ ಎಂಟ್ರಿಕೊಟ್ಟ ಕನ್ನಡಿಗ!

ಸಾವಿನ ಕದ ತಟ್ಟಿದ್ದ ಹೃತಿಕ್ ರೋಷನ್ ↘ ಪುಟ 6

## ಪ್ರಕರಣ ದಾರಿ ತಪ್ಪಲು ಬಿಡುವುದಿಲ್ಲ: ಗೃಹ ಸಚಿವ ಜಿ.ಪರಮೇಶ್ವರ್

# ಸಿಐಡಿ ತನಿಖೆಗೆ



**ಹುಬ್ಬಳ್ಳಿ:** ಬೆಳಗಾವಿ ಅಧಿವೇಶನದಲ್ಲಿ ನಡೆದ ಗಲಾಟೆ ಪ್ರಕರಣವನ್ನು ಸರ್ಕಾರ ಸಿಐಡಿ ತನಿಖೆಗೆ ವಹಿಸಿದೆ.

ಸಿಟಿ ರವಿ ಹಾಗೂ ಲಕ್ಷ್ಮೀ ಹೆಬ್ಬಾಳ್ಕರ್ ನಡುವೆ ನಡೆದ ವಾಕ್ಸಮರದ ಪ್ರಕರಣ ದಿನೇ ದಿನೇ ತಾರಕಕ್ಕೇರುತ್ತಿದ್ದು, ದಿಕ್ಕು ಬದಲಿಸುತ್ತಿರುವ ಹಿನ್ನೆಲೆಯಲ್ಲಿ ಈ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಇಂದಿಲ್ಲಿ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಪ್ರಕರಣ ದಾರಿ ತಪ್ಪಲು ಬಿಡುವುದಿಲ್ಲ. ಸಿಟಿ ರವಿ ಆಡಿರುವ ಮಾತುಗಳ ಬಗ್ಗೆ ಸರ್ಕಾರದ ಬಳಿ ಆಡಿಯೋ–ವಿಡಿಯೋ ಎಲ್ಲವೂ ಇದೆ. ಅವುಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಈಗಾಗಲೇ ಪ್ರಕರಣವನ್ನು ಸಿಐಡಿ ತನಿಖೆಗೆ ಒಪ್ಪಿಸಲಾಗಿದ್ದು, ಪ್ರಕರಣದ ಬಗ್ಗೆ ಹೆಚ್ಚು ವ್ಯಾಖ್ಯಾನ ಮಾಡಲ್ಲ. ತನಿಖೆ ನಡೆಯುವಾಗ ನಾವು ಹೇಳಿಕೆಗಳನ್ನು ನೀಡುವುದು ಸರಿಯಲ್ಲ ಎಂದು ಹೇಳಿದರು.

ಸ್ಪೀಕರ್ ಅವರು ತಮ್ಮ ಕೆಲಸ ತಾವು ಮಾಡುತ್ತಿದ್ದಾರೆ. ಪೊಲೀಸರು ತಮ್ಮ ಕರ್ತವ್ಯ ನಿರ್ವಹಿಸುತ್ತಾರೆ. ಅಲ್ಲಿಯ ಸಾಧಕ ಬಾಧಕಗಳನ್ನು ನೋಡಿಕೊಂಡು ಹೇಳಿಕೆ ಕೊಟ್ಟಿರಬಹುದು. ಕಾನೂನು ಪ್ರಕ್ರಿಯೆ ನಡೆಯುವಾಗ ಕೆಲವು ವಿಳಂಬವಾಗಬಹುದು. ಆದರೆ, ತನಿಖೆಯನ್ನು ಸರಿಯಾಗಿ ಮಾಡಬೇಕಾಗುತ್ತೆ. ಪ್ರಕರಣದ ಸತ್ಯಾಸತ್ಯತೆ ನೋಡಬೇಕಿದೆ ಎಂದರು.

ಸಿ ಟಿ ರವಿ ಅವರು ಲಕ್ಷ್ಮಿ ಹೆಬ್ಬಾಳ್ಕರ್‌ಗೆ ಆ ರೀತಿ ಹೇಳಿಲ್ಲ ಅಂತಾರೆ. ಹೆಬ್ಬಾಳ್ಕರ್ ಪಕ್ಕದಲ್ಲಿದ್ದವರು ಆ ಮಾತು ಆಡಿದ್ದಾರೆ ಅಂತ ಹೇಳುತ್ತಾರೆ. ಈ ಎಲ್ಲಾ ವಿಚಾರಗಳ ಬಗ್ಗೆ ತನಿಖೆ ಆಗಲೆಂದು ಸಿಐಡಿಗೆ ಹಸ್ತಾಂತರ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

ಸಿ ಟಿ ರವಿ ಮೇಲೆ ಹಲ್ಲೆ ಮಾಡಿದವರ ವಿರುದ್ಧ ಪ್ರಕರಣ ವಿಳಂಬ ವಿಚಾರವಾಗಿ ಉತ್ತರಿಸಿದ ಅವರು, ಕೆಲವೊಂದು ಕಾರಣಕ್ಕೆ ವಿಳಂಬವಾಗಿರಬಹುದು ಎಂದರು. ಗೃಹ ಇಲಾಖೆಯಲ್ಲಿ ಹಸ್ತಕ್ಷೇಪ ಆರೋಪ ವಿಚಾರ ಸಂಬಂಧಿಸಿದಂತೆ ಪೊಲೀಸ್ ಪುಟ 2

## ಸುತ್ತಾಡಿಸಲು ಭದ್ರತೆ ಕಾರಣ: ಸ್ಪಷ್ಟನೆ

ಬೆಳಗಾವಿ:ಭದ್ರತಾ ಕಾರಣಗಳಿಗಾಗಿ ಮತ್ತು ಸಾರ್ವಜನಿಕರಿಗೆ ಅಡ್ಡಿಯಾಗುವುದನ್ನು ತಪ್ಪಿಸಲು ಬಿಜೆಪಿ ಮುಖಂಡ ಸಿ.ಟಿ ರವಿ ಅವರನ್ನು ವಿವಿಧ ಸ್ಥಳಗಳಿಗೆ ಸ್ಥಳಾಂತರಿಸಲಾಗಿತ್ತು ಎಂದು ಬೆಳಗಾವಿ ಪೊಲೀಸರು ಮಂಗಳವಾರ ಸ್ಪಷ್ಟಪಡಿಸಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಅಶ್ಲೀಲ ಪದ ಬಳಕೆ ಸಂಬಂಧ ಬಿಜೆಪಿ ಶಾಸಕರನ್ನು ಬಂಧಿಸಿದ ಪೊಲೀಸರು ರಾತ್ರಿಯಿಡಿ ಅವರನ್ನು ಸುತ್ತಾಡಿಸಿದ ವಿಚಾರವಾಗಿ ಚರ್ಚೆಗೆ ಕಾರಣವಾಗಿತ್ತು. ತಾವು ಸಿಟಿ ರವಿ ಅವರನ್ನು ರಾತ್ರಿಯಿಡಿ ಸುತ್ತಾಡಿಸಿದ್ದೇಕೆ ಎಂಬ ಬಗ್ಗೆ ಸ್ವತಃ ಬೆಳಗಾವಿ ಪೊಲೀಸರು ಸ್ಪಷ್ಟನೆ ನೀಡಿದ್ದಾರೆ. ಡಿಸೆಂಬರ್ 19 ರಂದು ವಿಧಾನ ಪರಿಷತ್ ಸಭಾಂಗಣದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅವಹೇಳನಕಾರಿ ಪದ ಬಳಸಿದ ಆರೋಪದ ಮೇಲೆ ಬೆಳಗಾವಿಯ ಸುವರ್ಣ ವಿಧಾನಸೌಧದ ಆವರಣದಲ್ಲಿ ರವಿ ಅವರನ್ನು ಪೊಲೀಸರು ಬಂಧಿಸಲಾಗಿತ್ತು.

ಹಿರೇಬಾಗೇವಾಡಿ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆಯ ಕಲಂ 75 (ಲೈಂಗಿಕ ಕಿರುಕುಳ) ಮತ್ತು 79 (ಮಹಿಳೆಯರ ಮರ್ಯಾದೆಗೆ ಧಕ್ಕೆ ತರುವ ಮಾತು, ಹಾವಭಾವ ಅಥವಾ ಕೃತ್ಯ) ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ರವಿಯನ್ನು ವಶಕ್ಕೆ ಪಡೆಯಲಾಗಿತ್ತು. ಆದರೆ ಸಿಟಿ ರವಿ ರವರ ಭದ್ರತಾ ಅಂಶವನ್ನು ಪರಿಗಣಿಸಿ ಹಾಗೂ ಹಿರೇಬಾಗೇವಾಡಿ ಪೊಲೀಸ್ ಠಾಣೆಯ ಬಳಿ ಅಪಾರ ಜನಸ್ತೋಮ ಸೇರಿದ್ದರಿಂದ ಅವರನ್ನು ಪುಟ 2




ಬೆಳಗಾವಿಯ ಖ್ಯಾತ ವೈದ್ಯರು ಹಾಗೂ ಲೇಕ್ ವ್ಯೂ ಸಮೂಹ ಆಸ್ಪತ್ರೆಗಳ ನಿರ್ದೇಶಕರಾದ ಡಾ. ಗಿರೀಶ್ ಕೆ. ಸೊನ್ವಾಲ್ಕರ್ ಅವರ ನಿವಾಸಕ್ಕೆ ಇಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಭೇಟಿ ನೀಡಿ, ಕುಶಲೋಪರಿ ವಿಚಾರಿಸಿದರು. ಈ ವೇಳೆ ಸ್ಮರಣಿಕೆ ನೀಡಿ ಶಿವಕುಮಾರ್ ಅವರನ್ನು ಸನ್ಮಾನಿಸಲಾಯಿತು.

## ಸಿಐಡಿಯಿಂದ ನ್ಯಾಯ ಸಿಗಲ್ಲ



ಚಿಕ್ಕಮಗಳೂರು: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಬಗ್ಗೆ ಆಕ್ಷೇಪಾರ್ಹ ಪದ ಬಳಕೆ ಪ್ರಕರಣವನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಸಿಐಡಿ ತನಿಖೆಗೆ ನೀಡಿದ್ದು ಇದಕ್ಕೆ ವಿಧಾನಪರಿಷತ್ ಬಿಜೆಪಿ ಸದಸ್ಯ ಸಿ.ಟಿ ರವಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಈ ಕುರಿತು ಮಾತನಾಡಿರುವ ಸಿ.ಟಿ ರವಿ, ಸಿಐಡಿ ತನಿಖೆಯಿಂದ ನಮಗೆ ನ್ಯಾಯ ಸಿಗಲ್ಲ, ಈ ಬಗ್ಗೆ ನ್ಯಾಯಾಂಗ ತನಿಖೆಯಾಗಲಿ ಎಂದು ಒತ್ತಾಯಿಸಿದ್ದಾರೆ. ಒತ್ತಡವಿಲ್ಲದೇ ಕೆಲಸ ಮಾಡಿದರೆ ರಕ್ಷಣೆ ಸಿಗಬಹುದು. ಅದನ್ನು ಸಿಐಡಿ ಅಲ್ಲ, ಓರ್ವ ಕಾನ್ಸ್ ಟೇಬಲ್ ಕೂಡ ಮಾಡಬಹುದಾಗಿದೆ. ಪುಟ 2

## ಮೋದಿ ಸರ್ಕಾರ ಕುಂಭಕರ್ಣನಂತೆ ನಿದ್ರಿಸುತ್ತಿದೆ: ರಾಗಾ ಟೀಕೆ



ನವದೆಹಲಿ: ಬೆಲೆ ಏರಿಕೆಯಿಂದ ತತ್ತರಿಸಿರುವ ಜನರು ದಿನನಿತ್ಯದ ಅಗತ್ಯ ವಸ್ತುಗಳನ್ನು ಕೊಳ್ಳಲು ಸಂಕಷ್ಟಪಡುತ್ತಿದ್ದರೆ, ಮೋದಿ ಸರ್ಕಾರ ಕುಂಭಕರ್ಣನಂತೆ ನಿದ್ರೆ ಮಾಡುತ್ತಿದೆ ಎಂದು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಮಂಗಳವಾರ ಟೀಕಿಸಿದ್ದಾರೆ.

ಇಲ್ಲಿನ ಗಿರಿನಗರದ ತರಕಾರಿ ಮಾರುಕಟ್ಟೆಗೆ ಇತ್ತೀಚೆಗೆ ಭೇಟಿ ನೀಡಿ, ಗೃಹಿಣಿಯೊಂದಿಗೆ ಸಂವಾದ ನಡೆಸಿದ್ದನ್ನು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಹಂಚಿಕೊಂಡಿರುವ ರಾಹುಲ್ ಗಾಂಧಿ, ಸಾಮಾನ್ಯ ಜನರ ಬಜೆಟ್ ಹೇಗೆ ಕ್ಷೀಣಿಸುತ್ತಿದೆ ಮತ್ತು ಹಣದುಬ್ಬರ ಪ್ರತಿಯೊಬ್ಬರಿಗೂ ಸಮಸ್ಯೆಯಾಗಿದೆ ಎಂಬುದನ್ನು ತಿಳಿಯಲು ಮಾರಾಟಗಾರರೊಂದಿಗೆ ಮಾತನಾಡಿದ್ದಾಗಿ ಹೇಳಿದ್ದಾರೆ. ಬೆಲೆ ಏರಿಕೆಯಿಂದ ಜನರು ತತ್ತರಿಸಿದ್ದು, ದೈನಂದಿನ ಅಗತ್ಯಗಳ ಖರೀದಿಯಲ್ಲಿ ರಾಜಿ ಮಾಡಿಕೊಳ್ಳಬೇಕಾದ ಸಂದರ್ಭವಿದೆ ಎಂದು ಅವರು ಪೋಸ್ಟ್ ಮಾಡಿದ್ದಾರೆ. ಬೆಳ್ಳುಳ್ಳಿ, ಬಟಾಣಿ, ಅಣಬೆ ಮತ್ತು ಇತರ ತರಕಾರಿಗಳ ಬೆಲೆಗಳ ಕುರಿತು ಚರ್ಚಿಸಿದ್ದು, ಜನರ ನೈಜ ಅನುಭವಗಳನ್ನು ಕೇಳಿದ್ದೇವೆ. ಒಂದು ಕಾಲದಲ್ಲಿ 40 ರೂ. ಇದ್ದ ಬೆಳ್ಳುಳ್ಳಿ ಈಗ ಕೆಜಿಗೆ 400 ರೂ. ಮತ್ತು ಬಟಾಣಿ 120 ರೂ.ಗೆ ಏರಿಕೆಯಾಗಿದೆ. ಜನರು ಏನು ತಿನ್ನುತ್ತಾರೆ ಮತ್ತುಹೇಗೆ ಉಳಿಸುತ್ತಾರೆ ಎಂದು ಅವರು ಅಶ್ಚರ್ಯ ವ್ಯಕ್ತಪಡಿಸಿದ್ದಾರೆ. ಚಹಾ ಕುರಿತು ಮಾತನಾಡುವಾಗ ಗೃಹಣಿಯರ ಬದುಕಿನ ಪುಟ 2

## ವಿಚಾರಣೆಗೆ ಹಾಜರಾದ ಅಲ್ಲು ಅರ್ಜುನ್

**ಹೈದರಾಬಾದ್:** ಸಂಧ್ಯಾ ಥಿಯೇಟರ್‌ನಲ್ಲಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ಅಲ್ಲು ಅರ್ಜುನ್ ಇಂದು ಚಿಕ್ಕಡಪಲ್ಲಿ ಪೊಲೀಸ್ ಠಾಣೆಗೆ ವಿಚಾರಣೆಗೆ ಹಾಜರಾಗಿದ್ದಾರೆ. ಬೆಳಗ್ಗೆ 10.30ರ ಸುಮಾರಿಗೆ ಜುಬಿಲಿ ಹಿಲ್ಸ್ ರಸ್ತೆಯಲ್ಲಿರುವ ತಮ್ಮ ನಿವಾಸದಿಂದ ಹೊರಟ ಅಲ್ಲು ಅರ್ಜುನ್, ತಂದೆ ನಿರ್ಮಾಪಕ ಅಲ್ಲು ಅರವಿಂದ್ ಅವರೊಂದಿಗೆ ಚಿಕ್ಕಡಪಲ್ಲಿ ಠಾಣೆಗೆ ಹಾಜರಾದರು. ದಿ ರೈಸ್ ಪ್ರೀಮಿಯರ್ ಶೋ ಸಮಯದಲ್ಲಿ ಕಾಲ್ತುಳಿತದಿಂದ 35 ವರ್ಷದ ಮಹಿಳೆ ರೇವತಿ ಸಾವನ್ನಪ್ಪಿದ್ದರೆ, ಅವರ 8 ವರ್ಷದ ಮಗ ಪುಟ

## ಲೋಕಾ ಬಲೆಗೆ ಬಿದ್ದ ಪಿಡಿಒ

ಶಿವಮೊಗ್ಗ: ಇ–ಖಾತೆ ಮಾಡಿಕೊಡಲು 5 ಸಾವಿರ ರೂಪಾಯಿ ಲಂಚ ಪಡೆಯುವಾಗ ಸೊರಬ ತಾಲೂಕು ಇಂಡುವಳ್ಳಿಯ ಪ್ರಭಾರ ಪಿಡಿಒ ಈಶ್ವರಪ್ಪ ಅವರು ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಮಹಮ್ಮದ್ ಗೌಸ್ ಎಂಬುವರು ಇಂಡುವಳ್ಳಿಯಲ್ಲಿ ಜಮೀನು ಹೊಂದಿದ್ದು, ಇದರಲ್ಲಿ ಒಂದು ಮನೆಯನ್ನು ಕಟ್ಟಿಕೊಂಡಿದ್ದಾರೆ. ಈ ಮನೆಯ ಮೇಲೆ ಬ್ಯಾಂಕ್‌ನಲ್ಲಿ ಸಾಲ ಪಡೆಯಲು ಇ–ಖಾತೆ ಬೇಕಾಗಿರುವುದರಿಂದ ಗ್ರಾಮ ಪಂಚಾಯತಿಯಲ್ಲಿ ಅರ್ಜಿ ಸಲ್ಲಿಸಿದ್ದರು. ಈ ಸಂಬಂಧ ಪ್ರಭಾರ ಪಿಡಿಒ ಅವರು ಮಹಮ್ಮದ್ ಗೌಸ್ ಅವರ ಮನೆ ಪುಟ 2

## ಕೈ ಶಕ್ತಿ ಏನು ಎಂಬುದು ಬಿಜೆಪಿಯವರಿಗೂ ಗೊತ್ತಿದೆ

**ಬೆಳಗಾವಿ:** "ಕಾಂಗ್ರೆಸ್ ಪಕ್ಷದ ಶಕ್ತಿ ಏನು ಎಂಬುದು ನಮಗೂ ಗೊತ್ತಿದೆ, ನಮಗಿಂತ ಚನ್ನಾಗಿ ಬಿಜೆಪಿ ಯವರಿಗೂ ಗೊತ್ತಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಬೆಳಗಾವಿ ಸರ್ಕಿಟ್ ಹೌಸ್‌ನಲ್ಲಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಮಂಗಳವಾರ ಪ್ರತಿಕ್ರಿಯೆ ನೀಡಿದರು.

ಬಿಜೆಪಿಯ ಬೆಳಗಾವಿ ಚಲೋ ಬಗ್ಗೆ ಕೇಳಿದಾಗ, "ಈಗ ಆ ಮಾತು ಏಕೆ. ಯಾರಾದರೂ ಕೆಡಿಸುವ ಪ್ರಯತ್ನ ಮಾಡಲಿ. ಕಾಂಗ್ರೆಸ್ ಪಕ್ಷದ ಶಕ್ತಿ ಅವರಿಗೂ ಗೊತ್ತಿದೆ. ನಮಗೂ ಗೊತ್ತಿದೆ. ಮೊದಲು ಐತಿಹಾಸಿಕ ಕಾರ್ಯಕ್ರಮ ಮಾಡುವ ಮೂಲಕ ಇತಿಹಾಸದ ಪುಟ ಸೇರೋಣ" ಎಂದು ತಿಳಿಸಿದರು.

"ಬೆಳಗಾವಿಯು ಐತಿಹಾಸಿಕ ಕಾರ್ಯಕ್ರಮಕ್ಕೆ ಸಾಕ್ಷಿಯಾಗುತ್ತಿದೆ. ಹೀಗಾಗಿ ಬೆಳಗಾವಿಯಲ್ಲಿ ದೀಪಾಲಂಕಾರ ಮಾಡಲಾಗಿದ್ದು, ಸಾರ್ವಜನಿಕರು ಈ ವೈಭವವನ್ನು ಕಣ್ತುಂಬಿಕೊಳ್ಳಬೇಕು" ಎಂದು ತಿಳಿಸಿದರು. ಪುಟ 2

## 'ಒಂದು ರಾಷ್ಟ್ರ ಒಂದು ಚುನಾವಣೆ'

### ಜ.8ಕ್ಕೆ ಜಂಟಿ ಸದನ ಸಮಿತಿ ಮೊದಲ ಸಭೆ



**ನವದೆಹಲಿ:** ಲೋಕಸಭೆ ಹಾಗೂ ರಾಜ್ಯ ವಿಧಾನಸಭೆಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಸುವ ಉದ್ದೇಶದ ಚುನಾವಣಾ ಸುಧಾರಣೆಯ ಮಸೂದೆ ಕುರಿತು ಚರ್ಚಿಸಲು ಜನವರಿ 8 ರಂದು 39 ಸದಸ್ಯರ ಮೊದಲ ಜಂಟಿ ಸಂಸದೀಯ ಸಮಿತಿಯ ಸಭೆ ನಡೆಯಲಿದೆ.

ಬಿಜೆಪಿ ಸದಸ್ಯ ಪಿ ಪಿ ಚೌಧರಿ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ ಅಧಿಕಾರಿಗಳು ಮಸೂದೆ ಕುರಿತು ವಿವರ ನೀಡಲಿದ್ದಾರೆ.

ಸಂವಿಧಾನ (129 ನೇ ತಿದ್ದುಪಡಿ) ಮಸೂದೆ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳ (ತಿದ್ದುಪಡಿ) ಮಸೂದೆಯನ್ನು ಕಳೆದ ವಾರ ಲೋಕಸಭೆಯಲ್ಲಿ ಮಂಡಿಸಲಾಗಿತ್ತು. ಚಳಿಗಾಲದ ಅಧಿವೇಶನದ ಕೊನೆಯ ದಿನವಾದ ಶುಕ್ರವಾರ ಸಂಸತ್ತಿನ ಜಂಟಿ ಸದನ ಸಮಿತಿಗೆ ಒಪ್ಪಿಸಲಾಗಿತ್ತು.

ಏಕಕಾಲದಲ್ಲಿ ಚುನಾವಣೆ ನಡೆಸುವ ಎರಡು ಕರಡು ಶಾಸನಗಳನ್ನು ಪರಿಶೀಲಿಸುವ ಭಾಗವಾಗಲು ಹೆಚ್ಚಿನ ರಾಜಕೀಯ ಪಕ್ಷಗಳು ಇಚ್ಛೆ ವ್ಯಕ್ತಪಡಿಸಿದ್ದರಿಂದ ಸಮಿತಿಯ ಸದಸ್ಯರ ಸಂಖ್ಯೆಯನ್ನು 31 ರಿಂದ 39 ಕ್ಕೆ ಹೆಚ್ಚಿಸಲು ಸರ್ಕಾರ ನಿರ್ಧರಿಸಿತ್ತು.

ಸಮಿತಿಯಲ್ಲಿ ಮಾಜಿ ಕೇಂದ್ರ ಸಚಿವರಾದ ಅನುರಾಗ್ ಠಾಕೂರ್, ಪುರುಷೋತ್ತಮ್ ರೂಪಾಲಾ ಮತ್ತು ಮನೀಶ್ ತಿವಾರಿ ಹಾಗೂ ಹೊಸದಾಗಿ ಸಂಸದರಾಗಿರುವ ಪ್ರಿಯಾಂಕಾ ಗಾಂಧಿ ವಾದ್ರಾ, ಬಾನ್ಸುರಿ ಸ್ವರಾಜ್ ಮತ್ತು ಸಂಬಿತ್ ಪಾತ್ರ ಸೇರಿದಂತೆ ಹಲವು ಮಂದಿ ಸದಸ್ಯರಾಗಿದ್ದಾರೆ. ಲೋಕಸಭೆಯಿಂದ 27 ಮತ್ತು ರಾಜ್ಯಸಭೆಯಿಂದ 12 ಸದಸ್ಯರನ್ನು ಸಮಿತಿ ಹೊಂದಿದೆ.

## ಧರ್ಮಸ್ಥಳಕ್ಕೆ ಬಂದು ಪ್ರಮಾಣ ಮಾಡಲಿ

**ಬೆಂಗಳೂರು:** ಬಿಜೆಪಿ ನಾಯಕ ಸಿ ಟಿ ರವಿಯವರು ನನ್ನ ಬಗ್ಗೆ ಅವಾಚ್ಯ ಶಬ್ದ ಬಳಸಿಲ್ಲವೆಂದಾದರೆ ಧರ್ಮಸ್ಥಳಕ್ಕೆ ಬಂದು ಆಣೆ ಪ್ರಮಾಣ ಮಾಡಲಿ ನೋಡೋಣ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಖಾತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸವಾಲು ಹಾಕಿದ್ದಾರೆ.

ಮಾಧ್ಯಮಗಳಿಗೆ ನೀಡಿದ ಸಂದರ್ಶನ ವೇಳೆ ಮಾತನಾಡಿದ ಅವರು ಹಲವು ವಿಚಾರಗಳನ್ನು ಹೇಳಿದ್ದಾರೆ. ರಾಮಾಯಣ, ಮಹಾಭಾರತ ಆಗಿದ್ದು, ಮಹಿಳೆಯನ್ನು ಅಪಮಾನ ಮಾಡಿದ್ದಕ್ಕೆ. ಅಲ್ಲಿ ಅಪಮಾನ ಮಾಡಿದ ಎಲ್ಲರಿಗೂ ಶಿಕ್ಷೆ ಆಗಿದೆ. ಇಲ್ಲಿಯೂ ಆಗುತ್ತೆ. ಸಿ.ಟಿ ರವಿ ಅವರು ಆ ರೀತಿ ಹೇಳಿಲ್ಲ ಅನ್ನೋದಾದ್ರೆ, ಧರ್ಮಸ್ಥಳಕ್ಕೆ ಬಂದು ಆಣೆ, ಪ್ರಮಾಣ ಮಾಡಲಿ. ಆಣೆ ಮಾಡಲಿಕ್ಕೆ ನಾನೂ ನನ್ನ ಕುಟುಂಬ ಸಮೇತವಾಗಿ ಬರ್ತೀನಿ ಎಂದರು.ಡಿ.19ರಂದು ಬೆಳಗಾವಿ ಸುವರ್ಣಸೌಧದ ಪರಿಷತ್ ಕಲಾಪದಲ್ಲಿ ಪುಟ 2

## ಶೀಘ್ರದಲ್ಲೇ ಆಟೋ ದರಲ್ಲೂ ಏರಿಕೆ!



ಬೆಂಗಳೂರು: ಹೊಸ ವರ್ಷಕ್ಕೆ ಜನ ಸಾಮಾನ್ಯರಿಗೆ ಆಟೋ ದರ ಏರಿಕೆ ಶಾಕ್ ಸಿಗುವ ಸಾಧ್ಯತೆ ದಟ್ಟವಾಗುತ್ತಿದೆ. ಪ್ರತಿ ಒಂದು ಕಿಲೋ ಮೀಟರ್ ಗೆ 5 ರೂಪಾಯಿವರೆಗೆ ಏರಿಕೆಯಾಗಲಿದೆ ಎಂದು ಹೇಳಲಾಗುತ್ತಿದೆ.

ತೈಲಬೆಲೆ ಏರಿಕೆ, ಬಿಡಿಭಾಗಗಳ ಬೆಲೆ ಏರಿಕೆ, ದೈನಂದಿನ ಪದಾರ್ಥಗಳ ಬೆಲೆ ಏರಿಕೆಯಿಂದಾಗಿ, ಆಟೋ ಮಿನಿಮಮ್ ದರವನ್ನು ಏರಿಸಬೇಕೆಂದು ಆಟೋ ರಿಕ್ಷಾ ಡ್ರೈವರ್ಸ್ ಯೂನಿಯನ್ ಆಗ್ರಹಿಸುತ್ತಿದ್ದಾರೆ.

ಪ್ರತಿ ಒಂದು ಕಿಲೋ ಮೀಟರ್ ದೂರಕ್ಕೆ 15 ರೂಪಾಯಿಂದ 20 ರೂಪಾಯಿಗೆ ಮತ್ತು 2 ಕಿಲೋ ಮೀಟರ್ ದೂರಕ್ಕೆ 30 ರೂಪಾಯಿಯಿಂದ 40 ರೂಪಾಯಿಗೆ ದರ ಪರಿಷ್ಕರಿಸುವಂತೆ ಒತ್ತಾಯಿಸಿದ್ದಾರೆ.

ದರ ಪರಿಷ್ಕರಣೆ ಕುರಿತು ಸೋಮವಾರ ರಾಜ್ಯ ಸಾರಿಗೆ ಇಲಾಖೆ ಹಾಗೂ ಆಟೋ ಯೂನಯನ್ ಗಳು ಸಭೆ ನಡೆಯಬೇಕಿತ್ತು. ಆದರೆ, ಕಾರಣಾಂತರಗಳಿಂದ ಸಭೆಯನ್ನು ಮುಂದೂಡಲಾಗಿದ್ದು, ಪ್ರಯಾಣ ದರ ಹೆಚ್ಚಳ ಬೇಡಿಕೆ ಪರಿಗಣನೆಯಾಗುವ ಸಾಧ್ಯತೆ ಎಂದು ಸಾರಿಗೆ ಇಲಾಖೆ ಮೂಲಗಳು ತಿಳಿಸಿವೆ.

ಆಟೋರಿಕ್ಷಾ ಚಾಲಕರ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ರುದ್ರ ಮೂರ್ತಿ ಮಾತನಾಡಿ, 2021 ರಲ್ಲಿ ದರಗಳನ್ನು ಪರಿಷ್ಕರಿಸಲಾಗಿತ್ತು. ಆಟೋಗಳ ಕಾರ್ಯಾಚರಣೆಯ ವೆಚ್ಚವು ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದೆ. ಇಂಧನ, ಬಿಡಿಭಾಗಗಳು ಮತ್ತು ಟೈರ್‌ಗಳ ಬೆಲೆ, ಕಾರ್ಯಾಚರಣೆಯ ವೆಚ್ಚವು ಹೆಚ್ಚುತ್ತಿದೆ. ಆದರೆ, ದರ ಮಾತ್ರ ಎಂದಿನಂತೆಯೇ ಇದೆ ಎಂದು ಹೇಳಿದ್ದಾರೆ.


ಆದರ್ಶ ಆಟೋ ಮತ್ತು ಟ್ಯಾಕ್ಸಿ ಚಾಲಕರ ಸಂಘದ ಅಧ್ಯಕ್ಷ ಎಂ.ಮಂಜುನಾಥ್ ಮಾತನಾಡಿ, ಎಲ್ಲ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ. ಪುಟ 2

## ಶಾ ಹೇಳಿಕೆ ಖಂಡಿಸಿ ಕಲಬುರಗಿ ಬಂದ್

**ಕಲಬುರಗಿ:** ಸಂಸತ್‌ನಲ್ಲಿ ಗೃಹ ಸಚಿವ ಅಮಿತ್ ಶಾ ಅವರು ಡಾ.ಬಿ.ಆರ್. ಅಂಬೇಡ್ಕರ್ ಅವರಿಗೆ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿದ ವಿವಿಧ ಸಂಘಟನೆಗಳ ಮುಖಂಡರು ಮಂಗಳವಾರ ಕಲಬುರಗಿ ಮತ್ತು ಗದಗ ಬಂದ್‌ಗೆ ಕರೆ ನೀಡಿದ್ದು, ಈ ವೇಳೆ ಅಮಿತ್ ಶಾ ಅವರ ಪ್ರತಿಕೃತಿಯನ್ನು ಸುಟ್ಟು ಹಾಕಿದರು.

ದಲಿತ ಸಂಘಟನೆಗಳ ಮುಖಂಡರು, ಪ್ರತಿಭಟನಾಕಾರರು ಕೇಂದ್ರ ಬಸ್ ನಿಲ್ದಾಣದಲ್ಲಿ ಜಮಾಯಿಸಿದರು. ಹತ್ತಾರು ಟೈರ್‌ಗಳಿಗೆ ಬೆಂಕಿ ಹಚ್ಚಿದರು. ಕೂಡಲೇ ಸಚಿವ ಸ್ಥಾನಕ್ಕೆ ರಾಜೀನಾಮೆ ಕೊಟ್ಟು, ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು. ನಗರದಲ್ಲಿ ಬೆಳ್ಳಂಬೆಳಗ್ಗೆ ಬಸ್, ಆಟೊ ಸಂಚಾರ ಸ್ಥಗಿತವಾಗಿತ್ತು. ರಸ್ತೆಗೆ ಇಳಿದಿದ್ದ ಆಟೊಗಳನ್ನು ಪ್ರತಿಭಟನಾ ಕಾರರು ತಡೆದು ವಾಪಸ್ ಕಳುಹಿಸಿದರು. ನಿಲ್ದಾಣದ ಎದುರು ಬ್ಯಾರಿಕೇಡ್‌ಗಳನ್ನು ಹಾಕಿ, ಆಟೊಗಳನ್ನು ನಿಲ್ಲಿಸಿ ಸಂಚಾರ ತಡೆದರು. ಪುಟ 2

# ಶಿಕ್ಷಣವೇ ಶಕ್ತಿ, ಚೆನ್ನಾಗಿ ಓದಿದರೆ ಮೇಷ್ಟ್ರಾಗಬಹುದು





ಚಿಕ್ಕಬಳ್ಳಾಪುರ: ಶಿಕ್ಷಣ ಎಂಬ ಅಸ್ತ್ರದಿಂದ ಮಾತ್ರವೇ ಸಮಾಜದಲ್ಲಿ ಸುಧಾರಣೆ ತರಲು ಸಾಧ್ಯ.ಯಾರು ಎಲ್ಲಾ ವಿಷಯಗಳಿಗೂ ಸಮಾಜ ಆಸಕ್ತಿ ನೀಡಿ ಓದುತ್ತಾರೋ ಅವರು ಮೇಷ್ಟ್ರಾಗುತ್ತಾರೆ.ಯಾರು ಚೆನ್ನಾಗಿ ಮಾತನಾಡಲು ಕಲಿಯುತ್ತಾರೋ ಅವರು ನನ್ನಂತೆ ಶಾಸಕರಾಗುತ್ತಾರೆ ಎನ್ನುವ ಮೂಲಕ ಓದಿಗೆ ಆಸಕ್ತಿ,ಬದುಕಿಗೆ ಭಾಷಾಕೌಶಲ್ಯ ಬೇಕೆ ಬೇಕು ಎಂಬುದನ್ನು ಕೆಲವೇ ನಿಮಿಷಗಳಲ್ಲಿ ಮಕ್ಕಳಿಗೆ ಮನವರಿಕೆ ಮಾಡಿದವರು ಬೇರಾರು ಅಲ್ಲ ಅವರೇ ಶಾಸಕ ಪ್ರದೀಪ್ ಈಶ್ವರ್.

ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಾದೇನಹಳ್ಳಿ ಗ್ರಾಮಕ್ಕೆ ಸೋಮವಾರ ಭೇಟಿ ನೀಡಿದ್ದ ಶಾಸಕ ಪ್ರದೀಪ್ ಈಶ್ವರ್ ಅಲ್ಲಿನ ಗ್ರಾಮಭೇಟಿಯ ವೇಳೆ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಕೂಡ ಭೇಟಿ ನೀಡಿದ್ದರು.ಹೌದು ನಮ್ಮ ಶಾಸಕ ನಮ್ಮ ಊರಿಗೆ ಕಾರ್ಯಕ್ರಮದ ಅಂಗವಾಗಿ ಸಾದೇನಹಳ್ಳಿ ಗ್ರಾಮಕ್ಕೆ ಬಂದಿದ್ದ ಶಾಸಕ ಪ್ರದೀಪ್ ಈಶ್ವರ್‌ಗೆ ಅಲ್ಲಿನ ಸರಕಾರಿ ಶಾಲಾ ಮಕ್ಕಳು ಹೂಮಳೆ ಸುರಿಸುವ ಮೂಲಕ ಆಧರದ ಸ್ವಾಗತ ಕೋರಿದರು. ಇದರಿಂದ ಸಂತೋಷಗೊಂಡ ಅವರು ನೇರವಾಗಿ ಅಲ್ಲಿನ ಕ್ಲಾಸ್ ರೂಮ್‌ಗೆ ತೆರಳಿ ಕೈಯಲ್ಲಿ ಸೀಮೆಸುಣ್ಣ ಹಿಡಿದು ಪಾಠಕ್ಕೆ ನಿಂತಬ ಅವರು ಸುಮಾರು 15 ನಿಮಿಷಗಳ ಕಾಲ ಪಾಠಬೋಧನೆ ಮಾಡಿ ಸೈಎನಿಸಿಕೊಂಡರು.

ಮಕ್ಕಳಿಗೆ ನಾನಾ ಪ್ರಶ್ನೆಳನ್ನು ಕೇಳಿ ಉತ್ತರ ಪಡೆದ ನಂತರ ಮಕ್ಕಳಿಂದಲೇ ವಿಜ್ಞಾನದ ಪುಸ್ತಕ ಪಡೆದು ಧ್ಯುತಿ ಸಂಶ್ಲೇಷಣೆ ಕ್ರಿಯೆ ಬಗ್ಗೆ ಸರಳವಾಗಿ ಪಾಠ ಬೋಧನೆ ಮಾಡಿದ ಅವರು ನುರಿತ ವೃತ್ತಿಪರ ಶಿಕ್ಷಕರಂತೆ ಹಲವು ಉದಾಹರಣೆ ಮೂಲಕ ಪರಿಣಾಮಕಾರಿಯಾಗಿ ವಿಜ್ಞಾನದ ಪಾಠ ಮಾಡಿ ಮಕ್ಕಳಷ್ಟೇ ಅಲ್ಲದೆ ಶಿಕ್ಷಕರೂ ಹುಬ್ಬೇರುವಂತೆ ಮಾಡಿದರು.

ಇದರ ಜತೆಗೆ ಇವತ್ತಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಭಾಷಾ ಶುದ್ಧತೆ ಮತ್ತು ಭಾಷಾ ಕೌಶಲ್ಯ ಎಷ್ಟು ಮುಖ್ಯ ಎಂಬುದನ್ನು ಮಕ್ಕಳಿಗೆ ಮನಗಾಣಿಸಿದ ಶಾಸಕ ಪ್ರದೀಪ್ ಈಶ್ವರ್ ವಿಲ್ ಪದವನ್ನು ಹೇಗೆ? ಯಾವಾಗ ಬಳಸಬೇಕು, ಶಲ್ ಪದವನ್ನು ಹೇಗೆ? ಯಾವ ಸಂದರ್ಭದಲ್ಲಿ ಬಳಸಬೇಕು ಎಂದು ತಿಳಿಸಿದರಲ್ಲದೆ ನಾನು ನಮ್ಮವರಿಗೆ ಏನಾದರೂ ತಿಳಿಸುವಾಗ ಶಲ್, ನೀವು ನಿಮ್ಮವರಿಗೆ ತಿಳಿಸುವಾಗ ವಿಲ್ ಬಳಸಬೇಕು ಎನ್ನುತ್ತಾ ಎರಡೂ ಸಂದರ್ಭಗಳನ್ನು ಬೋರ್ಡ್ ಮೇಲೆ ಬರೆದು ಮಕ್ಕಳಿಗೆ ಅರ್ಥ ಮಾಡಿಸಿ ಅವರಿಂದ ಚಪ್ಪಾಳೆಯ ಉಡುಗೊರೆ ಪಡೆದು ಶಾಲೆಯಿಂದ ಹೊರನಡೆದರು. ಈ ವೇಳೆ ಮಾಧ್ಯಮದೊಂದಿಗೆ ಮಾತಾಡಿದ ಅವರು ನನಗೆ ಸರಕಾರಿ ಶಾಲೆ ಆಸ್ಪತ್ರೆಗಳೇ ದೇವಾಲಯಗಳು.ಇಲ್ಲಿ ಗುಣಮಟ್ಟದ ಶಿಕ್ಷಣ ಮತ್ತು ಔಷದೋಪಚಾರ ದೊರೆತು ಸುಧಾರಣೆ ಆದರೆ ಬಡವರಿಗೆ ಸಹಾಯ ಆಗುತ್ತದೆ. ಬಡಮಕ್ಕಳ ಬದುಕು ಹಸನಾಗುತ್ತದೆ. ಹೀಗಾಗಿಯೇ ಶಾಲೆಗಳು ಎದುರಿಸುತ್ತಿರುವ ಸಮಸ್ಯೆಗಳ ನಿವಾರಣೆಗೆ ಮೊದಲ ಆಧ್ಯತೆ ನೀಡುತ್ತಿದ್ದೇನೆ.ಇಂದು ನಾನು ಏನಾಗಿದ್ದೇನೋ ಅದಕ್ಕೆ ಕಾರಣ ನನ್ನ ಪಾಠ ಪ್ರವಚನವೇ ಆಗಿದೆ.ಅದು ಪ್ರಾಥಮಿಕ ಶಾಲೆಯ ಮಕ್ಕಳಿರಲಿ, ಎಸ್‌ಎಸ್‌ಎಲ್‌ಸಿ, ಪಿಯುಸಿ ಮಕ್ಕಳೇ ಆಗಿರಲಿ ಅವರ ಲೆವೆಲ್‌ಗೆ ಇಳಿದು ಪಾಠಮಾಡುವುದು ನನಗೆ ಗೊತ್ತಿದೆ. ನಾನು ಎಂದಿಗೂ ನಡೆದು ಬಂದ ಹಾದಿಯನ್ನು ಮರೆಯಲಾರೆ ಎನ್ನುವ ಮೂಲಕ ನಾನು ಶಾಸಕನಾಗಿದ್ದರೂ ಮೊದಲು ಮೇಷ್ಟು ಎಂಬುದನ್ನು ಮನಗಾಣಿಸಿದರು.

**ಅಂಬೇಡ್ಕರ್ ಪುತ್ಥಳಿ ಅನಾವರಣ:** ಮಂಚೇನಹಳ್ಳಿ ತಾಲೂಕು ಗುಯ್ಯಲಹಳ್ಳಿ ಗ್ರಾಮದ ನೂತನವಾಗಿ ನಿರ್ಮಿಸಿರುವ ಅಂಬೇಡ್ಕರ್ ತದ್ರೂಪದ ಸುಂದರ ಪುತ್ಥಳಿಯನ್ನು ಅನಾವರಣ ಮಾಡಿದ ಶಾಸಕರು ಈ ಪುತ್ಥಳಿ ಗಾಳಿ ಮಳೆಗಾಳಿಗೆ ಸಿಲುಕಿ ಹಾಳಾಗದಂತೆ ಸುತ್ತಲೂ ಬೇಲಿ ಮೇಲೆ ಛಾವಣಿ ಮಾಡಿಸಿಕೊಡುವ ಮೂಲಕ ಅಂಬೇಡ್ಕರ್ ಬಗೆಗೆ ತಮಗಿರುವ ಸಾಮಾಜಿಕ ಬದ್ಧತೆಯನ್ನು ತೋರಿಸಿಕೊಟ್ಟರು.ದಲಿತ ಸಮುದಾಯ ಅಂಬೇಡ್ಕರ್ ಪುತ್ಥಳಿಗೆ ನೀಡುವಷ್ಟೇ ಮಹತ್ವವನ್ನು ಅವರ ಬರಹ ಭಾಷಣ, ಆದರ್ಶಗಳಿಗೂ ನೀಡಬೇಕು.ಶಿಕ್ಷಣ ಪಡೆದು ಸಂಘಟಿತರಾಗಿ ಹಕ್ಕುಗಳಿಗಾಗಿ ಹೋರಾಟವನ್ನು ಮಾಡಬೇಕು ಎಂದು ಕರೆ ನೀಡಿದರು.

ನಾನು ಇಂದು ಶಾಸಕ ಆಗಿರಲು ಕಾರಣ ಅಂಬೇಡ್ಕರ್ ಬರೆದ ಸಂವಿಧಾನವೇ ಕಾರಣ.ಅವರ ಹೆಸರಿನಲ್ಲಿಯೇ ನಾನು ಪ್ರಮಾಣವಚನ ಸ್ವೀಕರಿಸಿದ್ದೇನೆ. ಅಂಬೇಡ್ಕರ್ ನಿಧನರಾದಾಗ ನಾಗುಪುರದಿಂದ ಅಮರಾವತಿ ಗ್ರಾಮದ ಹುಡುಗ ಮಣ್ಣು ತಂದು ಊರಲ್ಲಿ ಇಟ್ಟಿರುತ್ತಾರೆ.ಈ ವಿಚಾರ ಊರಲ್ಲಿ ತಿಳಿದು ಗಲಾಟೆ ಮಾಡುತ್ತಾರೆ. ಆಹುಡುಗ ಮಣ್ಣು ಬಚ್ಚಿಟ್ಟಿದ್ದ ಜಾಗದಲ್ಲಿಯೇ ಅಂಬೇಡ್ಕರ್ ಸಮಾಧಿ ನಿರ್ಮಿಸಿ ಪ್ರತಿವರ್ಷ ಅಲ್ಲಿ ಪೂಜೆ ಮಾಡುತ್ತಾರೆ. ಇದೇ ಪುಣ್ಯಭೂಮಿಯಲ್ಲಿ ನಾನು ಪರಿನಿಬ್ಬಾಣದ ದಿನ ಭಾಗವಹಿಸಿ ಅವರ ಬಗ್ಗೆ ಮಾತನಾಡಿದ್ದೇನೆ.ನನಗೆ ಅಂಬೇಡ್ಕರ್ ಅವರೇ ನಿಜವಾದ ದೇವರು.ಅಂತಹ ದೇವರ ಮೂರ್ತಿಯನ್ನು ಇಲ್ಲಿ ಲೋಕಾರ್ಪಣೆ ಮಾಡುತ್ತಿರುವುದು ಅತ್ಯಂತ ಸಂತೋಷ ತಂದಿದೆ ಎಂದರು.

ನಮ್ಮ ಶಾಸಕ ನಮ್ಮೂರಿಗೆ ಕಾರ್ಯಕ್ರಮದ ಅಂಗವಾಗಿ ಶಾಂಪುರ ಪಂಚಾಯಿತಿಯ ಗುಯ್ಯಲಹಳ್ಳಿ ಕಾಲೋನಿ, ಗ ುಯ್ಯಲಹಳ್ಳಿ,ಕಾಮಗಾನಹಳ್ಳಿ,ಸಾದೇನಹಳ್ಳಿ , ಗುಣಿಬೀಳು, ಶ್ಯಾಂಪುರ ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಜನರಿಂದ ಅಹವಾಲು ಸ್ವೀಕರಿಸಿದಲ್ಲದೆ ಸ್ಥಳದಲ್ಲಿಯೇ ಶೇ.70ರಷ್ಟು ಸಮಸ್ಯೆಗಳಿಗೆ ಅಧಿಕಾರಿಗಳ ಮುಖೇನ ಪರಿಹಾರ ಕಾಣಿಸಿದ್ದೇನೆ

.ಬಸ್ ನಿಲುಗಡೆ, ಸ್ಮಶಾನಕ್ಕೆ ದಾರಿ ಸಮಸ್ಯೆ,ತಂದೆ ತಾಯಿ ಇಲ್ಲದ ಮಕ್ಕಳಿಗೆ 1 ಲಕ್ಷ ಡೆಪಾಸಿಟ್ ಇಡಲು ಮುಂದಾಗಿದ್ದೇನೆ.ಭೂಮಿ ಸಮಸ್ಯೆಗಳೇ ಸಾಕಷ್ಟು ಇವೆ.ಸರ್ವೆ ಇಲಾಖೆಗೆ ಸೂಚಿಸಿ ಸಮಸ್ಯೆ ಪರಿಹಾರಕ್ಕೆ ಸೂಚನೆ ನೀಡಲಾಗಿದೆ.

ಇಂದು ರಾಷ್ಟ್ರೀಯ ರೈತ ದಿನಾಚರಣೆ ಆಗಿರುವುದರಿಂದ ರೈತರಿಗೆ ಕೈಮುಗಿದು ಮನವಿ ಮಾಡುತ್ತೇನೆ.ಸಾಲಕ್ಕೆ ಹೆಸರಿ ಯಾವ ರೈತರೂ ಸಾವನ್ನು ಆಯ್ಕೆ ಮಾಡಿಕೊಳ್ಳಬಾರದು. ನಿಮಗೆ ಸಾಲಕೊಟ್ಟವರು ಭಯಪಡಬೇಕೇ ವಿನಃ ನೀವಲ್ಲ. ಏನೇ ಆಗಲಿ ರೈತರೊಂದಿಗೆ ನಿಮ್ಮ ಶಾಸಕ ಇರುತ್ತಾನೆ ಎಂಬ ವಿಶ್ವಾಸ ನಿಮಗಿರಲಿ. ಎಲ್ಲರಿಗೂ

ರಾಷ್ಟ್ರೀಯ ರೈತ ದಿನಾಚರಣೆಯ ಶುಭಾಶಯಗಳನ್ನು ಸಲ್ಲಿಸುತ್ತಿದ್ದೇನೆ ಎಂದರು.ಈ ಸಂಧರ್ಭದಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೇಶವರೆಡ್ಡಿ,ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಪ್ರಕಾಶ್, ಪೆರೆಸಂದ್ರ ಪ್ರಕಾಶ್, ನಾಗಭೂಷಣ್, ಶ್ಯಾಂಪುರ ಪಿಡಿಓ ರಾಮಸ್ವಾಮಿ ಮತ್ತು ಇತರರು ಉಪಸ್ಥಿತರಿದ್ದರು.

# ಸಭಾಪತಿ ನಡೆ ಪಕ್ಷಪಾತ ರೀತಿ ಕಾಣುತ್ತಿದೆ




**ಬೆಂಗಳೂರು:** ಬೆಳಗಾವಿಯ ಅಧಿವೇಶನದಲ್ಲಿ ಎಂಎಲ್ ಸಿ ಸಿ.ಟಿ .ರವಿ ಅವರು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಬಗ್ಗೆ ಆಕ್ಷೇಪಾರ್ಹ ಪದ ಬಳಕೆ ಪ್ರಕರಣ ಸಂಬಂಧ ಸಭಾಪತಿ ಬಸವರಾಜ ಹೊರಟ್ಟಿ ಅವರ ನಡೆ ಪಕ್ಷಪಾತ ರೀತಿಯ ಅನುಮಾನ ಕಾಡುತ್ತಿದೆ ಎಂದು ಆಮ್ ಆದ್ಮಿ ಪಕ್ಷದ ಬೆಂಗಳೂರು ನಗರ ಪ್ರಧಾನ ಕಾರ್ಯದರ್ಶಿ ಜಗದೀಶ್ ಚಂದ್ರ ಅಸಮಾಧಾನ ವ್ಯಕ್ತಪಡಿಸಿದರು.

ಸಿಟಿ ರವಿ ಪ್ರಕರಣ ಸಂಬಂಧ " ಸದನದ ಗೌರವ ಕಾಪಾಡಿ " ಎಂಬ ಘೋಷವಾಕ್ಯದೊಂದಿಗೆ ಆಮ್ ಆದ್ಮಿ ಪಕ್ಷದ ಕಾರ್ಯಕರ್ತರು ಪಕ್ಷದ ಕಚೇರಿಯ ಮುಂಭಾಗದಲ್ಲಿ ಇಂದು ಬೆಳಗ್ಗೆ ಕಪ್ಪು ಪಟ್ಟಿ ಧರಿಸಿ ಖಂಡನಾ ಸಭೆ ನಡೆಸಿದರು. ಈ ವೇಳೆ ಮಾತನಾಡಿದ, ಪಕ್ಷದ ಬೆಂಗಳೂರು ನಗರ ಪ್ರಧಾನ ಕಾರ್ಯದರ್ಶಿ ಜಗದೀಶ್ ಚಂದ್ರ "ಸಿ.ಟಿ. ರವಿ ಅವರ ಸ್ತ್ರೀನಿಂದನೆ, ನಂತರದಲ್ಲಿ ನಡೆದ ಎಲ್ಲಾ ಘಟನೆಗಳು ಶಾಂತಿಪ್ರಿಯ ಕರ್ನಾಟಕಕ್ಕೆ ಕಪ್ಪುಮಸಿ ಬಳಿದಂತಾಗಿದೆ. ಸದನದಲ್ಲಿಯೇ ಮಹಿಳೆ ಅದರಲ್ಲಿಯೂ ಪ್ರಮುಖ ಮಂತ್ರಿಯೊಬ್ಬರಿಗೆ ಈ ರೀತಿಯ ನಿಂದನೆ ಆಗುವುದಿದ್ದರೆ , ಮಹಿಳೆಯರಿಗೆ ಕರ್ನಾಟಕವು ಎಷ್ಟು ಸುರಕ್ಷಿತ ಎಂಬ ಅನುಮಾನ ಕಾಡುತ್ತದೆ. ಸಿ.ಟಿ. ರವಿ ವರ್ತನೆ ಯಾವುದೇ ನಾಗರೀಕ ಸಮಾಜ ಕ್ಷಮಿಸುವುದಿಲ್ಲ" ಎಂದು ಕಳವಳ ವ್ಯಕ್ತಪಡಿಸಿದರು.

ಸಭಾಪತಿಗಳು ತೆಗೆದುಕೊಂಡಿರುವ ರೂಲಿಂಗ್ ಸಹ ಪಕ್ಷಪಾತ ರೀತಿಯ ಅನುಮಾನ ರಾಜ್ಯದ ಜನತೆಗೆ ಕಾಡಲು ಆರಂಭಿಸಿದೆ. ಘಟನೆ ನಡೆದ ದಿನವೇ ರವಿಗೆ ಕ್ಲೀನ್ ಚಿಟ್ ನೀಡುವಂತಹ ಪ್ರಕ್ರಿಯೆಗಳು ಬಸವರಾಜ ಹೊರಟ್ಟಿ ಅವರಿಂದ ಆಗಿದೆ. ನಂತರದ ದಿನಗಳಲ್ಲಿ ಸಭಾಪತಿಗಳ ನೇತೃತ್ವದಲ್ಲಿ ಅಲ್ಲಿದ್ದ ಎಲ್ಲಾ ಶಾಸಕರುಗಳನ್ನು ಕರೆಸಿ ವಿಚಾರಣೆ ನಡೆಸದೆ ಪಕ್ಷಪಾತ ಎನ್ನುವ ರೀತಿಯಲ್ಲಿ ತಮ್ಮ ರೂಲಿಂಗ್ ನೀಡಿರುವುದು ಅನುಮಾನ ಮೂಡುವಂತಿದೆ " ಎಂದು ಜಗದೀಶ್ ಚಂದ್ರ ಕಿಡಿಕಾರಿದರು. ಕೋಟ್ಯಾಂತರ ರೂಪಾಯಿಗಳ ಜನತೆಯ ತೆರಿಗೆ ಹಣವನ್ನು ಅನವಶ್ಯಕವಾಗಿ ಈ ರೀತಿ ಸದನದ ಗೌರವ ಹಾಳು ಮಾಡುವ ರೀತಿಯಲ್ಲಿ ದುರ್ವಿನಿಯೋಗವಾದರೆ ಆಮ್ ಆದ್ಮಿ ಪಕ್ಷ ಎಂದಿಗೂ ಸಹಿಸುವುದಿಲ್ಲ , ಶಾಸಕರುಗಳು ತಮ್ಮ ವೈಯಕ್ತಿಕ ದ್ವೇಷಗಳನ್ನು ಸಾಧಿಸಲು ಚಿಂತಕರ ಚಾವಡಿಯಂತಹ ಮೇಲ್ಮನೆಯನ್ನು ಬಳಸಿಕೊಳ್ಳುತ್ತಿರುವುದು ನಿಜಕ್ಕೂ ದುರದೃಷ್ಟಕರ . ಇಂತಹ ಚಾರಿತ್ರ್ಯ ಹೀನ, ಭ್ರಷ್ಟ ವ್ಯಕ್ತಿಗಳು ಮೇಲ್ಮನೆಗೆ ಆಕಸ್ಮಿಕವಾಗಿ ಬರುತ್ತಿರುವುದನ್ನು ಎಲ್ಲ ಪಕ್ಷಗಳು ತಡೆಗಟ್ಟಬೇಕು " ಎಂದು ಜಗದೀಶ್ ಚಂದ್ರ ತಿಳಿಸಿದರು.

ಪಕ್ಷದ ಅನೇಕ ಮುಖಂಡರುಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

## ಪರಿಹಾರ ನೀಡಲು ಎಲ್ಲ ಪ್ರಯತ್ನ



**ಹುಬ್ಬಳ್ಳಿ:** ಸಿಲಿಂಡರ್ ಸ್ಫೋಟದಿಂದ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು ಗಂಭೀರ ಗಾಯಗೊಂಡ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಅಯ್ಯಪ್ಪ ಮಾಲಾಧಾರಿಗಳ ಘಟನೆ ಬಗ್ಗೆ ವಿಷಾದ ವ್ಯಕ್ತಪಡಿಸುತ್ತೇನೆ. ಘಟನೆಯಲ್ಲಿ ಗಾಯಗೊಂಡವರಿಗೆ ಪರಿಹಾರ ನೀಡಲು ಎಲ್ಲ ಪ್ರಯತ್ನ ಮಾಡುತ್ತೇನೆ ಎಂದರು.

ಇಂದು ಕಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಮಾತನಾಡಿದ ಗೃಹ ಸಚಿವ ಡಾ. ಜಿ.ಪರಮೇಶ್ವರ್, 9 ಜನರಲ್ಲಿ ಬಹುತೇಕರಿಗೆ 80 ರಿಂದ 90 ಶೇಕಡ ಸುಟ್ಟ ಗಾಯವಾಗಿವೆ. ವೈದ್ಯರು ಎಲ್ಲ ಪ್ರಯತ್ನ ಮಾಡುತ್ತಿದ್ದಾರೆ. ವೈದ್ಯರಿಗೆ ನಿರ್ಲಕ್ಷ್ಯ ಮಾಡದಂತೆ ಸೂಚನೆ ಕೊಟ್ಟಿದ್ದೇವೆ. 20 ರಷ್ಟು ಸುಟ್ಟಗಾಯವಾಗಿರೋ ವಿನಾಯಕ್ ಮೇಲೆ ನಿಗಾ ಇಡಲು ಸೂಚನೆ ನೀಡಲಾಗಿದೆ. ಉಳಿದವರನ್ನ ಕ್ರಿಟಿಕಲ್ ಅಂತಾ ಹೇಳುತ್ತಿದ್ದಾರೆ, ಕಾಯ್ದು ನೋಡಬೇಕಾಗಿದೆ. ಗಾಯಾಳುಗಳನ್ನ ಬರ್ನಿಂಗ್ ವಾರ್ಡ್ ಗೆ ಶಿಫ್ಟ್ ಮಾಡಲು ಸೂಚನೆ ನೀಡಲಾಗಿದೆ. ಅವರನ್ನು ಉಳಿಸೋ ಪ್ರಯತ್ನ ಮಾಡಬೇಕಿದೆ. ಆಮೇಲೆ ಪರಿಹಾರದ ಯೋಚನೆ ಮಾಡೋಣ ಎಂದರು.

ಇದೊಂದು ವಿಶೇಷ ಕೇಸ್ ಎಂದು ಪರಿಗಣಿಸಿ, ಮುಖ್ಯಮಂತ್ರಿಗಳ ಪರಿಹಾರದ ನಿಧಿಯಿಂದ ಪರಿಹಾರ ಘೋಷಣೆ ಮಾಡಲಾಗುವುದು. ಇವತ್ತೇ ಡಿಸಿ ಅವರು ವರದಿ ಸಲ್ಲಿಸುತ್ತಾರೆ. ಪರಿಹಾರ ನೀಡಲು ಎಲ್ಲ ಪ್ರಯತ್ನ ಮಾಡುತ್ತಿದ್ದೇವೆ ಎಂದು ಪರಮೇಶ್ವರ್ ತಿಳಿಸಿದರು.

ಕಿಮ್ಸ್ ನಲ್ಲಿ ನಿರ್ಲಕ್ಷ್ಯ ಆಗಿರೋ ಮಾಹಿತಿ ಇದೆ. ಅದನ್ನು ಆಂತರಿಕ ವಿಚಾರಣೆ ಮಾಡುತ್ತೇವೆ. ಆಗಿರುವ ತಪ್ಪುಗಳ ಬಗ್ಗೆ ವಿಚಾರಣೆ ಮಾಡುತ್ತೇವೆ. ಇದೀಗ ನಿರ್ಲಕ್ಷ್ಯದ ಪೋಸ್ಟ್ ಮಾರ್ಟಂ ಕ್ಕಿಂತ ಅವರ ಆರೋಗ್ಯ ಮುಖ್ಯ ಎಂದರು.

ಮೊದಲ ಪುಟದಿಂದ

### ಬಿಜೆಪಿಯವರಿಗೂ ಗೊತ್ತಿದೆ

"ಮಹಾತ್ಮಾ ಗಾಂಧೀಜಿ ಅವರ ಅಧ್ಯಕ್ಷತೆಯಲ್ಲಿ ನಡೆದ ಬೆಳಗಾವಿ ಅಧಿವೇಶನದ ಬಗ್ಗೆಯೂ ಮಾಹಿತಿ ನೀಡಲಾಗಿದೆ. ಈ ಕಾರ್ಯಕ್ರಮವನ್ನು ಪಕ್ಷದ ದೃಷ್ಟಿಯಿಂದ ನೋಡಬೇಡಿ. ಕಾಂಗ್ರೆಸ್ ಪಕ್ಷ ಯಾವುದೇ ಕಾರ್ಯಕ್ರಮ ಮಾಡಿದರು, ಪಕ್ಷದ ಕಾರ್ಯಕ್ರಮವನ್ನಾಗಿ ಮಾಡುವುದಿಲ್ಲ. ದೇಶದ ಇತಿಹಾಸ ಹಾಗೂ ದೇಶವನ್ನು ಯಾವ ದಿಕ್ಕಿನಲ್ಲಿ ಮುನ್ನಡೆಸಬೇಕು ಎನ್ನುವುದನ್ನು ಗಮನದಲ್ಲಿಟ್ಟು ಕೊಂಡು ಕಾರ್ಯಕ್ರಮ ಮಾಡುತ್ತದೆ. ಹೀಗಾಗಿ ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಕರೆ ನೀಡುತ್ತೇನೆ" ಎಂದು ಹೇಳಿದರು. "ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಾಯಕರು ಎಂದು ಎನಿಸಿಕೊಂಡವರು ಈ ಕಾರ್ಯಕ್ರಮಕ್ಕೆ ಆಗಮಿಸಬೇಕು. ರಾಜ್ಯದ ವಿವಿಧ ಮೂಲೆಗಳಿಂದ ಸಾವಿರಾರು ಜನರನ್ನು ಕರೆತನ್ನಿ ಎಂದು ಹೇಳುವುದಿಲ್ಲ. ನೂರು ಜನರನ್ನು ಕರೆದುಕೊಂಡು ಬಂದರೂ ಸಾಕು. ಕಾರ್ಯಕ್ರಮ ನಡೆಯುವ ಜಾಗಗಳಿಗೆ ಭೇಟಿ ನೀಡಿ ಪೂರ್ವ ಸಿದ್ಧತೆ ಪರಿಶೀಲನೆ ಮಾಡುತ್ತಿದ್ದೇನೆ. ಮಂಗಳವಾರ (ಇಂದು) ಎಲ್ಲಾ ಸಿದ್ಧತೆ ಪೂರ್ಣಗೊಳ್ಳಲಿದೆ" ಎಂದು ತಿಳಿಸಿದರು.

ಕಾರ್ಯಕ್ರಮಗಳ ವಿವರದ ಬಗ್ಗೆ ಕೇಳಿದಾಗ, "26ರಿಂದ ಅಧಿಕೃತ ಕಾರ್ಯಕ್ರಮ ಆರಂಭವಾಗಲಿದೆ. 26ರಂದು ಬೆಳಗ್ಗೆ ಕೆಲವು ಸ್ಥಳಗಳಲ್ಲಿ ಉದ್ಘಾಟನಾ ಕಾರ್ಯಕ್ರಮಗಳಿವೆ. 1924ರಲ್ಲಿ ಮಹಾತ್ಮಾ ಗಾಂಧೀಜಿಯವರ ನೇತೃತ್ವದಲ್ಲಿ ಬೆಳಗಾವಿ ಅಧಿವೇಶನ ಡಿ. 26ರ ಮಧ್ಯಾಹ್ನ 3 ಗಂಟೆಗೆ ನಡೆದಿತ್ತು. 26ರಂದು ಅದೇ ಸಮಯಕ್ಕೆ ಪಕ್ಷದ ಕಾರ್ಯಕಾರಿ ಸಮಿತಿ ಸಭೆ ನಡೆಯಲಿದೆ. 27ರಂದು ಬೆಳಗ್ಗೆ 10.30ಕ್ಕೆ ಸರ್ಕಾರದ ವತಿಯಿಂದ ಸುವರ್ಣಸೌಧ ಆವರಣದಲ್ಲಿ ಗಾಂಧಿ ಪ್ರತಿಮೆ ಅನಾವರಣ ಮಾಡಲಾಗುವುದು. ಅಂದು ಸುವರ್ಣ ಸೌಧದಲ್ಲಿ ಫೋಟೋ ಸೆಷನ್, ಭೋಜನ ಕೂಟವಿದೆ. 27ರಂದು ಮಧ್ಯಾಹ್ನ 12 ಗಂಟೆಗೆ ಸಾರ್ವಜನಿಕ ಸಭೆ ನಡೆಯಲಿದೆ" ಎಂದು ತಿಳಿಸಿದರು.

### ಸಿಐಡಿ ತನಿಖೆಗೆ

ಇಲಾಖೆ ಜವಾಬ್ದಾರಿಯುತ ಇಲಾಖೆ. ಸಿಎಂ ಅಥವಾ ಗೃಹ ಸಚಿವರ ಆದೇಶವನ್ನು ಮಾತ್ರ ಪೊಲೀಸರು ಪಾಲನೆ ಮಾಡುತ್ತಾರೆ. ಬೇರೆ ಯಾರೇ ಆದೇಶ ಮಾಡಿದ್ರೂ ಅದನ್ನು ಪಾಲನೆ ಮಾಡಲ್ಲ. ಅವರಿವರು ಆರೋಪ ಮಾಡುತ್ತಾರೆ ಅಂತಾ ನಾವು ಇಲಾಖೆ ನಡೆಸೋಲ್ಲ. ಕಾನೂನು ಚೌಕಟ್ಟಿನಲ್ಲಿ ನಾವು ಕೆಲಸ ಮಾಡುತ್ತೇವೆ ಎಂದು ಜಿ ಪರಮೇಶ್ವರ್ ಹೇಳಿದ್ರು.

ಜಿ. ಪರಮೇಶ್ವರ್ ಅಸಮರ್ಥ ಗೃಹ ಸಚಿವ ಎಂಬ ಜೋಶಿಯವರ ಲೇವಡಿ ವಿಚಾರವಾಗಿ ತಿರುಗೇಟು ನೀಡಿ, ಪ್ರಲ್ಹಾದ್ ಜೋಶಿಯವರು ಅಸಮರ್ಥ ಕೇಂದ್ರ ಸಚಿವ ಎಂದರೆ ಒಪ್ಪಿಕೊಳ್ಳುತ್ತಾರಾ? ಅವರಿಗೆ ನನ್ನ ಸಾಮರ್ಥ್ಯ ಗೊತ್ತಿಲ್ಲ. ಹಾಗಾಗಿ ಅವರು ಹಾಗೆ ಹೇಳಿದ್ದಾರೆಂದರು.

ಹಳೇ ಹುಬ್ಬಳ್ಳಿ ಪೊಲೀಸ್ ಇನ್ಸ್‌ಪೆಕ್ಟರ್ ಸುರೇಶ ಯಳ್ಳೂರ ಮೇಲೆ ಲೈಂಗಿಕ ಕಿರುಕುಳ ಆರೋಪ ವಿಚಾರವಾಗಿ, ಈ ಬಗ್ಗೆ ಪೊಲೀಸ್ ಆಯುಕ್ತರಿಂದ ಮಾಹಿತಿ ಪಡೆದುಕೊಳ್ಳುತ್ತೇನೆ. ಮಾಹಿತಿ ಪಡೆದು ಪೊಲೀಸ್ ಇನ್ಸ್‌ಪೆಕ್ಟರ್ ತಪ್ಪು ಎಸಗಿದ್ದರೆ, ಅವರ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಹುಬ್ಬಳ್ಳಿ–ಧಾರವಾಡ ಅವಳಿನಗರದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟ ವಿಚಾರವಾಗಿ ಪ್ರತಿಕ್ರಿಯಿಸಿ, ಈ ಬಗ್ಗೆ ರಿವ್ಯೂವ್ ಮಾಡುತ್ತೇನೆ. ಅದರಲ್ಲಿ ತಪ್ಪುಗಳು ಕಂಡುಬಂದಲ್ಲಿ ಸರಿ ಮಾಡುವೆ ಎಂದು ತಿಳಿಸಿದರು.

### ಸುತ್ತಾಡಿಸಲು ಭದ್ರತೆ ಕಾರಣ

ಖಾನಾಪೂರ ಪೊಲೀಸ್ ಠಾಣೆಗೆ ಸ್ಥಳಾಂತರಿಸಲಾಯಿತು. ಖಾನಾಪೂರದಲ್ಲಿಯೂ ಕೂಡ ಹೆಚ್ಚಿನ ಪ್ರಮಾಣದ ಮಾಧ್ಯಮ ಪ್ರತಿನಿಧಿಗಳು, ಬೆಂಬಲಿಗರು ಮತ್ತು ಪಕ್ಷದ ಕಾರ್ಯಕರ್ತರು ಸೇರಿ ಗೊಂದಲದ ವಾತಾವರಣ ನಿರ್ಮಾಣ ಮಾಡಿದರು. ಅಲ್ಲದೇ ಹೆಚ್ಚುವರಿ ಬೆಂಬಲಿಗರು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಆಗಮಿಸುವ ಸಾಧ್ಯತೆ ಇದ್ದು. ಈ ಎಲ್ಲ ಅಂಶಗಳು ಸಹ ಸಾರ್ವಜನಿಕ ಸುವ್ಯವಸ್ಥೆ ಹಾಳು ಮಾಡುವ ಸಾಮರ್ಥ್ಯ ಹೊಂದಿದ್ದವು ಎಂದು ಪೊಲೀಸರು ತಿಳಿಸಿದ್ದಾರೆ.

ಸಿಟಿ ರವಿ ರವರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಖಾನಾಪೂರದಿಂದ ಅವರನ್ನು ರಾಮದುರ್ಗಕ್ಕೆ ಸ್ಥಳಾಂತರಿಸಲಾಯಿತು. ಎಲ್ಲ ಮುನ್ನೆಚ್ಚರಿಕೆಗಳ ಹೊರತಾಗಿಯೂ ಮಾಧ್ಯಮಗಳು ಹಾಗೂ ಇನ್ನಿತರ ವ್ಯಕ್ತಿಗಳು ಬೆಂಗಾವಲು ಪಡೆಯನ್ನು ಹಿಂಬಾಲಿಸಿದರು. ಸಿಟಿ ರವಿ ಅವರ ಸುರಕ್ಷತೆ ಗಮನದಲ್ಲಿಟ್ಟುಕೊಂಡು ಬೆಂಗಾವಲು ಪಡೆಯು ಅವರೆಲ್ಲರಿಂದ ತಪ್ಪಿಸಿಕೊಳ್ಳುವ ಕ್ರಮಗಳನ್ನು ಕೈಗೊಳ್ಳಲಾಗಿತ್ತು. ಈ ಪ್ರಕ್ರಿಯೆಯುದ್ದಕ್ಕೂ ಪೊಲೀಸರು ಸಿಟಿ ರವಿ ಅವರಿಗೆ ಆಹಾರ ಮತ್ತು ವೈದ್ಯಕೀಯ ಸೇವೆ ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ಒದಗಿಸಲಾಗಿತ್ತು. ಮರುದಿನ ರವಿ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು ಎಂದು ವಿವರಣೆ ನೀಡಿದ್ದಾರೆ. ತಮ್ಮ ಬಂಧನದ ಸಮಯದಲ್ಲಿ ಮಾನವ ಹಕ್ಕುಗಳನ್ನು ಉಲ್ಲಂಘನೆಯಾಗಿದೆ ಎಂದು ಸಿಟಿ ರವಿ ಆರೋಪಿಸಿದ ಕೆಲವು ದಿನಗಳ ನಂತರ ಪೊಲೀಸರು ಸ್ಪಷ್ಟನೆ ನೀಡಿದ್ದಾರೆ

### ಕುಂಭಕರ್ಣನಂತೆ ನಿದ್ರಿಸುತ್ತಿದೆ

ಸಂಕಷ್ಟಗಳನ್ನು ಹತ್ತಿರದಿಂದ ಅರ್ಥ ಮಾಡಿಕೊಂಡಿದ್ದೇವೆ. ಆಹಾರದ ಬೆಲೆ ಹೆಚ್ಚಳದಿಂದ ಆಟೋ ರಿಕ್ಷಾ ದರ ರೂ.10ನ್ನು ಭರಿಸಲು ಸಾಧ್ಯವಾಗುತ್ತಿಲ್ಲ. ಹೀಗಿರುವಾಗ ಹೇಗೆ ಹಣ ಉಳಿಸಲು ಸಾಧ್ಯ ಎಂದು ಅವರು ಹೇಳಿರುವುದಾಗಿ ತಿಳಿಸಿದರು. ಐದು ನಿಮಿಷಗಳ ವಿಡಿಯೋದಲ್ಲಿ ತರಕಾರಿ ಖರೀದಿಸುತ್ತಿರುವ ಕೆಲವು ಮಹಿಳೆಯರೊಂದಿಗೆ ರಾಹುಲ್ ಗಾಂಧಿ ಇದ್ದಾರೆ.

ಮೋದಿ ಸರ್ಕಾರ ಘೋಷಿಸಿದ್ದ ಬುಲೆಟ್ ರೈಲು ಇನ್ನೂ ಬಂದಿಲ್ಲ. ಆದರೆ, ಹಣದುಬ್ಬರ ಬುಲೆಟ್ ರೈಲಿಗಿಂತ ವೇಗವಾಗಿ ಹೆಚ್ಚಾಗುತ್ತಿದ್ದು, ಜನ ಸಾಮಾನ್ಯರ ಬದುಕು ದುಸ್ತರವಾಗಿದೆ ಎಂದು ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದಾರೆ.

ವಿಚಾರಣೆಗೆ ಹಾಜರಾದ ಅಲ್ಲು

ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಘಟನೆ ನಂತರ ಭಾರತೀಯ ದಂಡ ಸಂಹಿತೆಯ ಹಲವಾರು ನಿಬಂಧನೆಗಳ ಅಡಿ ಅಲ್ಲು ಅರ್ಜುನ್, ಅವರ ಭದ್ರತಾ ತಂಡ ಮತ್ತು ಥಿಯೇಟರ್ ನಿರ್ವಹಣೆಯ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು. ಅಲ್ಲದೇ ಮೃತ ಮಹಿಳೆಯ ಕುಟುಂಬ ನಿರ್ಲಕ್ಷ್ಯ ಮತ್ತು ಅಸಮರ್ಪಕ ನಿರ್ವಹಣೆ ಎಂದು ಆರೋಪಿಸಿ ದೂರು ದಾಖಲಿಸಿತ್ತು.

ಹಾಗಾಗಿ ಅಲ್ಲು ಅರ್ಜುನ್ ಅವರು ವಿಚಾರಣೆಗೆ ಹಾಜರಾವಗುವಂತೆ ಸೋಮವಾರ ಚಿಕ್ಕಡಪಲ್ಲಿ ಪೊಲೀಸರು ನೋಟಿಸ್ ಜಾರಿ ಮಾಡಿದ್ದರು. ಆರಂಭದಲ್ಲಿ ಡಿ. 13ರಂದು ಪೊಲೀಸರಿಂದ ಬಂಧಿಸಲ್ಪಟ್ಟಿದ್ದ ಅಲ್ಲು ಅರ್ಜುನ್ ಅವರಿಗೆ ತೆಲಂಗಾಣ ಹೈಕೋರ್ಟ್ ನಾಲ್ಕು ವಾರಗಳ ಮಧ್ಯಂತರ ಜಾಮೀನು ಮಂಜೂರು ಮಾಡಿತ್ತು. ಡಿ.14 ರಂದು ಅಲ್ಲು ಅರ್ಜುನ್ ಜೈಲಿನಿಂದ ಬಿಡುಗಡೆಗೊಂಡಿದ್ದರು.

### ಲೋಕಾ ಬಲೆಗೆ ಬಿದ್ದ ಪಿಡಿಒ

ಬಳಿ ಬಂದು ಅಳತೆ ಮಾಡಿಕೊಂಡಿದ್ದರು. ಇದಾದ ನಂತರ ಹಲವು ಬಾರಿ ಪ್ರಭಾರಿ ಪಿಡಿಒ ಈಶ್ವರಪ್ಪ ಅವರ ಬಳಿ ಬಂದು ಕೇಳಿದಾಗ ಅವರು ಇ–ಖಾತೆ ನೀಡದೆ ಸತಾಯಿಸಿದ್ದರು. ಈ ಕುರಿತು ಮೊನ್ನೆ ಪಿಡಿಒ ಈಶ್ವರಪ್ಪ ಅವರ ಬಳಿ ಬಂದಾಗ ಅವರು 5 ಸಾವಿರ ರೂ. ಲಂಚದ ಬೇಡಿಕೆ ಇಟ್ಟಿದ್ದರು. ಅಂದು ಲಂಚ ನೀಡದ ಗೌಸ್, ಲೋಕಾಯುಕ್ತ ಅಧಿಕಾರಿಗಳ ಬಳಿ ತೆರಳಿ ದೂರು ನೀಡಿದ್ದರು. ಇಂದು ಸೊರಬ ಪಟ್ಟಣದ ಪೋಸ್ಟ್ ಆಫೀಸ್ ಬಳಿ ಪ್ರಭಾರ ಪಿಡಿಒ ಈಶ್ವರಪ್ಪ ಗೌಸ್ ಕಡೆಯಿಂದ ಲಂಚ ಪಡೆಯುವಾಗ ಲೋಕಾಯುಕ್ತ ಅಧಿಕಾರಿಗಳು ರೆಡ್ ಹ್ಯಾಂಡ್ ಆಗಿ ಹಿಡಿದಿದ್ದಾರೆ. ಈ ಕುರಿತು ಲೋಕಾಯುಕ್ತ ಪೊಲೀಸ್ ಇನ್ಸಪೆಕ್ಟರ್ ಹೆಚ್. ಎಸ್. ಸುರೇಶ್ ಅವರು ಪ್ರಕರಣವನ್ನು ದಾಖಲಿಸಿಕೊಂಡು ತನಿಖೆ ನಡೆಸಿದ್ದಾರೆ.

ಕಾರ್ಯಾಚರಣೆಯನ್ನು ಲೋಕಾಯುಕ್ತ ಎಸ್ಪಿ ಮಂಜುನಾಥ ಚೌಧರಿ ನೇತೃತ್ವದಲ್ಲಿ ನಡೆಸಲಾಗಿದೆ. ದಾಳಿಯ ವೇಳೆ ಸಿಬ್ಬಂದಿಗಳಾದ ಯೋಗೀಶ್, ಮಂಜುನಾಥ್, ಸುರೇಂದ್ರ, ಪ್ರಶಾಂತ್ ಕುಮಾರ್, ಚನ್ನೇಶ್, ದೇವರಾಜ್ ಅರುಣ್ ಕುಮಾರ್, ಅಂಜಲಿ, ಜಯಂತ್ ಪ್ರದೀಪ್ ಹಾಜರಿದ್ದರು.

### ಸಿಐಡಿಯಿಂದ ನ್ಯಾಯ ಸಿಗಲ್ಲ

ಆದರೆ ಒತ್ತಡವಿದ್ದಾಗ ಸಿಐಡಿಯಿಂದ ನ್ಯಾಯ ಸಿಗುವ ಸಾಧ್ಯತೆ ಇಲ್ಲ. ನ್ಯಾಯ ಸಮ್ಮತವಾಗಿದ್ದರೆ ಸಿಐಡಿಗೆ ನೀಡಬೇಕಿರುವ ಅಗತ್ಯವಿಲ್ಲ ಪ್ರಕರಣ ಕುರಿತು ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ನಿಖೆಯಾಗಲಿ ಎಂದು ಆಗ್ರಹಿಸಿದರು.

### ಪ್ರಮಾಣ ಮಾಡಲಿ

ಎಂಎಲ್‌ಸಿ ಸಿ.ಟಿ ರವಿ ಅವರು ಅಸಂವಿಧಾನಿಕ ಪದ ಬಳಸಿ ನಿಂದಿಸಿದ್ದಾರೆ ಎಂದು ನಾನು ನಾಟಕ ಮಾಡೋದಕ್ಕೆ ಆಗುತ್ತಾ? ಸದನದಲ್ಲಿ ನಿಂತು ಸುಳ್ಳು ಆರೋಪ ಮಾಡೋದಕ್ಕೆ ಆಗುತ್ತಾ? ಸುಳ್ಳು ಹೇಳೋದಕ್ಕೆ ನನಗೇನು ಹುಚ್ಚಾ? ನಾಟಕವಾಡಿ ರಾಜಕಾರಣದಲ್ಲಿ ನಾನು ಏನಾದ್ರೂ ಗಳಿಸೋದು ಇದ್ಯಾ? ಎಂದು ಲಕ್ಷ್ಮಿ ಹೆಬ್ಬಾಳ್ಕರ್ ಕೇಳಿದರು.ಫ್ರೆಸ್ಟ್ರೇಟ್ ಎಂದು ಉಚ್ಚಾರ ಮಾಡಿರುವುದಾಗಿ ಸಿ.ಟಿ ರವಿ ಹೇಳ್ತಾರಲ್ಲಾ ಎಂಬ ಪ್ರಶ್ನೆಗೆ, ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಫ್ರಸ್ಟೇಟ್ ಅನ್ನೋದಕ್ಕೂ ಆ ಪದಕ್ಕೂ ವ್ಯತ್ಯಾಸ ಇರಲ್ವಾ? ಅವರು ಹೇಳಿರೋದಕ್ಕೆ ಆಡಿಯೋ, ವಿಡಿಯೋ ಎಲ್ಲವೂ ನನ್ನತ್ರ ಸಾಕ್ಷಿ ಇದೆ. ಲಕ್ಷ್ಮಿ ಹೆಬ್ಬಾಳ್ಕರ್‌ನ ನೋಡಿ ಸಾವಿರಾರು ಜನ ರಾಜಕಾರಣಕ್ಕೆ ಬರಲು ಮುಂದಾಗಿದ್ದಾರೆ. ಈಗ ಹೋರಾಟ ಮಾಡಲಿಲ್ಲ ಅಂದ್ರೆ, ನನ್ನ ಆತ್ಮಸಾಕ್ಷಿಗೆ ವಂಚನೆ ಮಾಡಿದಂತೆ ಆಗುತ್ತದೆ. ನಾನು ಸಂಘರ್ಷ ಅಪಮಾನ ಮೆಟ್ಟಿನಿಂತು ಬೆಳೆದಿದ್ದೇನೆ. ಆದರೆ ಈ ಘಟನೆಯಿಂದ ನನ್ನ ಮನಸ್ಸಿಗೆ ಆಘಾತ ಉಂಟಾಗಿದೆ ಎಂದರು.

ಕೊಲೆಗಾರ ಎನ್ನುವಂತಹ ಪ್ರಶ್ನೆ ಯಾಕೆ ಬಂತು ಎಂದು ಕೇಳಿದಾಗ ಸಿ.ಟಿ ರವಿ ಆಕ್ಸಿಡೆಂಟ್ ಮಾಡಿರುವ ವೀಡಿಯೋ ನನ್ನ ಬಳಿಯಿದೆ. ನಾನು "ಕೊಲೆಗಾರ" ಅಂದಿಲ್ಲ ಅಂತ ಹೇಳ್ತಿಲ್ಲ.. ಅವರ ಹಾಗೆ ನನಗೆ ಚಪಲಾನಾ, ಪ್ರತಿಯೊಂದಕ್ಕೆ ಎದ್ದು ನಿಂತು ಮಾತಾಡೋದಕ್ಕೆ ನಾನು ಗಾಂಧಿ ಹಾಕಿಕೊಟ್ಟಂತಹ ಮಾರ್ಗದಲ್ಲಿ ನಡೆಯುತ್ತಿರುವವಳು, ಗೋಡ್ಸೆ ಮಾರ್ಗದಲ್ಲಿ ನಡೆಯುವಂತಹವರಲ್ಲ ಎಂದರು.

ಆ ರೀತಿಯ ಯಾವುದೇ ವಿಡಿಯೋ ಇಲ್ಲ, ಅದು ನಕಲಿ ಎಂಬ ಸಭಾಪತಿಗಳ ಹೇಳಿಕೆ ಕುರಿತು ಮಾತನಾಡಿದ ಲಕ್ಷ್ಮಿ ಹೆಬ್ಬಾಳ್ಕರ್, ಸುಮಾರು ಸಂದರ್ಭದಲ್ಲಿ ನನಗೆ ಮಾರ್ಗದರ್ಶನ ಕೊಟ್ಟವರು ಸಭಾಪತಿಗಳು. ನನಗೆ ಫೋನ್ ಮಾಡಿ ಸಾಂತ್ವನ ಹೇಳಿದ್ದಾರೆ. ಅವರು ಯಾಕೆ ಈ ರೀತಿ ಹೇಳಿದ್ದಾರೋ ನನಗೆ ಗೊತ್ತಿಲ್ಲ, ಅವರ ರೂಲಿಂಗ್ ಬಗ್ಗೆ ಮಾತಾಡುವಷ್ಟು ಹಿರಿಯಳೂ ನಾನಲ್ಲ ಎಂದು ಸ್ಪಷ್ಟಪಡಿಸಿದರು.

### ಕಲಬುರಗಿ ಬಂದ್

ಅಂಗಡಿ–ಮುಂಗಟ್ಟುಗಳನ್ನು ತೆರೆಯದಂತೆ ಮನವಿ ಮಾಡಿದರು. ಕೆಲವೆಡೆ ತೆರೆದಿದ್ದ ಅಂಗಡಿ ಗಳನ್ನೂ ಬಲವಂತವಾಗಿಮುಚ್ಚಿಸಿದರು. ಅನಾಹುತ ನಡೆದರೆ ಹೇಗೆ ಎಂದು ಹೆದರಿ ವ್ಯಾಪಾರಿಗಳು ಅಂಗಡಿಯ ಬಾಗಿಲು ತೆರೆಯದೇ ವಾಪಸ್ ತೆರಳಿದರು. ಬಂದ್ ಬಗ್ಗೆ ತಿಳಿಯದೆ ಬಂದಿದ್ದ ಪ್ರಯಾಣಿಕರು ಪರದಾಡಿದರು. ನಗರದಲ್ಲಿ ಬಸ್ ಸಂಚಾರ ಸ್ಥಗಿತಗೊಂಡಿದ್ದರಿಂದ ತೀವ್ರ ತೊಂದರೆ ಅನುಭವಿಸುವಂತಾಯಿತು.

ಹೊರ ರಾಜ್ಯ, ಹೊರ ಊರುಗಳಿಂದ ಬಂದ ಬಸ್‌ಗಳು ರಿಂಗ್ ರಸ್ತೆಯಲ್ಲೇ ಪ್ರಯಾಣಿಕರನ್ನು ಇಳಿಸಿ ಹೋದವು. ಅಲ್ಲಿಂದ ಕೇಂದ್ರ ಬಸ್ ನಿಲ್ದಾಣ, ಸಿಟಿ ಬಸ್ ನಿಲ್ದಾಣ, ರೈಲು ನಿಲ್ದಾಣಕ್ಕೆ ಕಾಲ್ನಡಿಗೆಯಲ್ಲಿ ತೆರಳಿದರು. ಬಸ್ ನಿಲ್ದಾಣಗಳಲ್ಲಿ ಬಸ್‌ಗಳ ಸಂಚಾರ ಸ್ಥಗಿತಗೊಂಡಿದ್ದರಿಂದ ನಿರಾಸೆಯಿಂದ ರಸ್ತೆ ಬದಿಯಲ್ಲೇ ಕುಳಿತರು. ಇನ್ನೂ ಗದಗ–ಬೆಟಗೇರಿ ಅವಳಿ ನಗರದಲ್ಲೂ ಸಂಪೂರ್ಣ ಬಂದ್ ಕರೆ ಕೊಟ್ಟಿವೆ. ಗದಗ ಜಿಲ್ಲಾ ಕಾಂಗ್ರೆಸ್ ಕಮಿಟಿ, ಲಿಂಗಾಯತ ಪ್ರಗತಿಶೀಲ ಸಂಘ, ಕನ್ನಡಪರ ಸಂಘಟನೆಗಳು, ವ್ಯಾಪಾರಿ ಸಂಘಟನೆಗಳು ಬಂದ್ ಗೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿವೆ. ಅಮಿತ್ ಶಾ ಅವರ ವಿರುದ್ಧ ವಿವಿಧ ಸಂಘಟನೆಗಳು ನಗರದಲ್ಲಿ ಪ್ರತಿಭಟನೆ ನಡೆಸಿದ್ದು ಸಂಜೆ 6 ಗಂಟೆಯವರೆಗೆ ಅವಳಿ ನಗರ ಬಂದ್ ಇರಲಿದೆ. ಸಂಘಟನೆಗಳು ಅಮಿತ್ ಶಾ ಅವರ ರಾಜಿನಾಮೆ ಆಗ್ರಹಿಸಿವೆ. ಗದಗ ನಗರದ ಮುಳಗುಂದ ನಾಕಾ ಬಳಿ ಹುಬ್ಬಳ್ಳಿ ರಸ್ತೆಯಲ್ಲಿ ಮತ್ತು ಬೆಟಗೇರಿಯಲ್ಲಿ ರೋಣ ರಸ್ತೆ ತಡೆದು ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿದವು. ಬಂದ್ ಹಿನ್ನೆಲೆ ಗದಗ–ಬೆಟಗೇರಿ ನಗರದ ತರಕಾರಿ ಮಾರುಕಟ್ಟೆ ಸ್ಥಬ್ದವಾಗಿದೆ. ವಿವಿಧ ಸಂಘಟನೆಗಳು ಬಸ್ ಡಿಪೋ ಮುತ್ತಿಗೆ ಹಾಕಿ ಪ್ರತಿಭಟಿಸಿದವು. ಬಸ್ ಸಂಚಾರಕ್ಕೆ ಅಣಿಯಾಗುತ್ತಿದ್ದ ಸಿಬ್ಬಂದಿ ವಿರುದ್ಧ ಆಕ್ರೋಶ ವ್ಯಕ್ತವಾಯಿತು. ಇದರಿಂದ ಪ್ರಯಾಣಿಕರು ಪರದಾಡಿದರು. ಶಾಲಾ–ಕಾಲೇಜು ವಿದ್ಯಾರ್ಥಿಗಳು, ಪ್ರಯಾಣಿಕರಿಗೆ ಬಂದ್ ಬಿಸಿ ತಟ್ಟಿದೆ. ಬಂದ್ ಹಿನ್ನೆಲೆಯಲ್ಲಿ ಗದಗ–ಬೆಟಗೇರಿ ನಗರದ ಶಾಲೆಗಳಿಗೆ ರಜೆ ನೀಡಲಾಗಿದೆ.

### ಆಟೋ ದರದಲ್ಲೂ ಏರಿಕೆ!

ಶಾಲಾ ಶುಲ್ಕ, ಆಸ್ಪತ್ರೆ ವೆಚ್ಚ ಹೀಗೆ ಎಲ್ಲದರಲ್ಲೂ ಏರಿಕೆಯಾಗಿದೆ. ಆಟೋ ಚಾಲಕರು ತಮ್ಮ ಕುಟುಂಬವನ್ನು ಹೇಗೆ ನಡೆಸಬೇಕು? ಹಲವಾರು ಚಾಲಕರು ಸಾಲದ ಸುಳಿಯಲ್ಲಿ ಸಿಲುಕಿದ್ದಾರೆ. ಬಡ್ಡಿ ಪಾವತಿಸಲು ಹೆಣಗಾಡುತ್ತಿದ್ದಾರೆ. ಸರ್ಕಾರಿ ಮತ್ತು ಖಾಸಗಿ ಕಂಪನಿಗಳ ನೌಕರರ ವೇತನವನ್ನು ನಿಯಮಿತವಾಗಿ ಪರಿಷ್ಕರಿಸಲಾಗುತ್ತದೆ. ಆಟೋ ಚಾಲಕರು ಕೇವಲ ಮೀಟರ್ ದರವನ್ನು ಅವಲಂಬಿಸಿರುತ್ತಾರೆ. ಹೆಚ್ಚುತ್ತಿರುವ ವೆಚ್ಚಗಳಿಗೆ ಅನುಗುಣವಾಗಿ ದರಗಳ ನಿಯಮಿತ ಪರಿಷ್ಕರಣೆಯನ್ನು ಪರಿಗಣಿಸಬೇಕು ಎಂದು ಆಗ್ರಹಿಸಿದ್ದಾರೆ.

ಈ ಹಿಂದೆ ಆಟೋ ಚಾಲಕರು ತಮ್ಮ ಗೃಹಿಣಿಯರಿಗೆ ಪ್ರತಿದಿನ 100 ರೂಪಾಯಿ ನೀಡಿ ಸ್ವಲ್ಪ ಹಣವನ್ನು ಉಳಿಸುತ್ತಿದ್ದರು. ಆದರೆ, ಈಗ ಹೆಚ್ಚುತ್ತಿರುವ ದೈನಂದಿನ ವೆಚ್ಚದಿಂದ ಕುಟುಂಬದವರ ಅಗತ್ಯಗಳನ್ನು ಪೂರೈಸಲು ಸಾಧ್ಯವಾಗದಂತಾಗಿದೆ ಎಂದು ತಿಳಿಸಿದ್ದಾರೆ.

ಮಂಗಳೂರು, ಉಡುಪಿ ಮತ್ತು ಶಿವಮೊಗ್ಗದಲ್ಲಿ ಆಟೋ ದರವನ್ನು ಪರಿಷ್ಕರಿಸಲಾಗಿದೆ. ಬೈಕ್ ಟ್ಯಾಕ್ಸಿ ಕಾರ್ಯಾಚರಣೆಗಳು ಆಟೋ ಚಾಲಕರ ಮೇಲೆ ತೀವ್ರ ಪರಿಣಾಮ ಬೀರಿದೆ. ಬೈಕ್ ಟ್ಯಾಕ್ಸಿ ವಿಚಾರ ಹೈಕೋರ್ಟ್ ಅಂಗಳದಲ್ಲಿದೆ. ರಾಜ್ಯದಲ್ಲಿ ಬೈಕ್ ಟ್ಯಾಕ್ಸಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದ ನಂತರ ದರವನ್ನು ಪರಿಷ್ಕರಿಸಬೇಕು ಎಂದು ಕೆಲ ಆಟೋ ಚಾಲಕರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ಮಕ್ಕಳ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ:ಕವಿತಾ

ಚಾಮರಾಜನಗರ: ಅದಮ್ಯ ಚೈತನ್ಯವುಳ್ಳ ಭೂಮಿಯಲ್ಲಿರುವ ಮಿನುಗುವ ನಕ್ಷತ್ರದಂತಿರುವ ಮಕ್ಕಳ ರಕ್ಷಣೆ ಮಾಡುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಅವರು ತಿಳಿಸಿದರು.

ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್, ಶಾಲಾ ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದಲ್ಲಿ 'ಶಾಲೆಯಲ್ಲಿದೆ ಶಿಕ್ಷಣದ ಜತೆ ರಕ್ಷಣೆ' ಶೀರ್ಷಿಕೆಯಡಿ ಆರ್.ಟಿ.ಇ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನ ಕುರಿತ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.




ಮಕ್ಕಳು ಭೂಮಿಯಲ್ಲಿನ ಮಿನುಗುವ ನಕ್ಷತ್ರಗಳಿದ್ದಂತೆ. ಪ್ರಸ್ತುತ ಶಾಲೆ, ಮನೆ, ಸಮಾಜದಲ್ಲಿ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯಗಳು ಆಗುತ್ತಿರುವ ಪ್ರಕರಣಗಳು ವರದಿಯಾಗುತ್ತಿವೆ. ಮಕ್ಕಳ ರಕ್ಷಣೆಗೆ ಹೆಚ್ಚು ಒತ್ತು ನೀಡಬೇಕಾದ ಅಗತ್ಯವಿದೆ. ಮಕ್ಕಳ ಸುರಕ್ಷತೆಯ ಬಗ್ಗೆ ಖಾತರಿ ಪಡಿಸಿಕೊಳ್ಳಬೇಕಿದೆ. ಈ ದಿಸೆಯಲ್ಲಿ ಪ್ರತಿಯೊಬ್ಬರು ಮಕ್ಕಳ ಪೋಷಣೆ ರಕ್ಷಣೆ ಬಗ್ಗೆ ಆದ್ಯತೆ ನೀಡಬೇಕಿದೆ ಎಂದರು.

ಹುಟ್ಟುವಾಗಲೇ ಮಕ್ಕಳಿಗೆ ಹಕ್ಕುಗಳು ಜತೆಯಾಗಿಯೇ ಬರುತ್ತವೆ. ಮಕ್ಕಳು ಸಹಜವಾಗಿ ಬಾಲ್ಯ ಅನುಭವಿಸಲು ಅವಕಾಶ ಕೊಡಬೇಕು. ದಾವಂತದಲ್ಲಿ ಮಕ್ಕಳನ್ನು ಸಹಜವಾಗಿ ಬೆಳೆಯಲು ಬಿಡಲಾಗುತ್ತಿಲ್ಲ. ಅವರ ಮೇಲೆ ಯಾವುದೇ ಒತ್ತಡ ಹೇರದೆ ಪೂರ್ಣ ಪ್ರಮಾಣದಲ್ಲಿ ಸಾಮರ್ಥ್ಯ ಅಭಿವೃದ್ಧಿ ಬೆಳವಣಿಗೆಯಾಗುವಂತೆ ನೋಡಿಕೊಳ್ಳುವ ಹೊಣೆಗಾರಿಕೆ ನಮ್ಮ ಮೇಲಿದೆ ಎಂದು ಹೇಳಿದರು.

ಮಕ್ಕಳ ರಕ್ಷಣೆ ಬಗ್ಗೆ ಸಹಾನುಭೂತಿ ಹಾಗೂ ಸಕ್ರಿಯವಾಗಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಮುಗ್ಧ ಮನಸ್ಸಿನ ಮಕ್ಕಳ ಸ್ವಾತಂತ್ರಹರಣವಾಗದಂತೆ ಜಾಗೃತರಾಗಿರಬೇಕು. ಯಾವುದೇ ಹಂತದಲ್ಲಿ ದೌರ್ಜನ್ಯ ಕಂಡುಬಂದಲ್ಲಿ ನೆರವಿಗೆ ಮುಂದಾಗಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಅವರು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕರ್ನಾಟಕ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್ ಅವರು ಮಕ್ಕಳ ಕೇಂದ್ರೀಕೃತ ಅಭಿವೃದ್ಧಿ ಯೋಜನೆಗಳ ಅನುಷ್ಠಾನದಿಂದ ಸಮಾಜದ ಅಭಿವೃದ್ಧಿಯಾಗಲಿದೆ. ಮಕ್ಕಳ ರಕ್ಷಣೆ ಪೋಷಣೆ ಕುರಿತ ಕಾರ್ಯಕ್ರಮಗಳನ್ನು ದಕ್ಷತೆಯಿಂದ ಜಾರಿಗೊಳಿಸಬೇಕು. ಪರಿಣಾಮಕಾರಿಯಾಗಿ ಗುರಿ ತಲುಪಲು ಎಲ್ಲರು ಕೈಜೋಡಿಸಬೇಕು ಎಂದರು.

ಮಕ್ಕಳ ಹಕ್ಕು, ರಕ್ಷಣೆಗಾಗಿ ಇರುವ ಕಾನೂನು ಕಾಯ್ದೆಗಳ ಬಗ್ಗೆ ಅರಿವು ಮೂಡಿಸಬೇಕಿದೆ. ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಹೊರಡಿಸಲಾಗುವ ಆದೇಶಗಳು ಮಾರ್ಗಸೂಚಿಗಳನ್ನು ಪಾಲನೆ ಮಾಡಿದಾಗ ನಿರೀಕ್ಷಿತ ಪ್ರಗತಿ ಸಾಧ್ಯವಾಗಲಿದೆ. ಮಕ್ಕಳ ಸ್ನೇಹಿ ವಾತಾವರಣ ಮೂಡಿಸುವ ಕಾರ್ಯದಲ್ಲಿ ಜಿಲ್ಲೆ ಮಾದರಿಯಾಗಬೇಕು ಎಂದು ವೆಂಕಟೇಶ್ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷೀ ಅವರು ಮಾತನಾಡಿ ಮಕ್ಕಳನ್ನು ಬಾಲ್ಯದಲ್ಲಿಯೇ ಸೂಕ್ಷ್ಮವಾಗಿ ಗಮನಿಸಿ ಅವರಲ್ಲಿರುವ ಪ್ರತಿಭೆಯನ್ನು ಗುರುತಿಸಬೇಕು. ಮಕ್ಕಳ ರಕ್ಷಣೆ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಮಕ್ಕಳ ಗ್ರಾಮ ಸಭೆಗಳನ್ನು ಎಲ್ಲ ಕಡೆ ಆಯೋಜಿಸಲು ಆದೇಶ ಹೊರಡಿಸಲಾಗಿದೆ. ಮಕ್ಕಳ ಆರೋಗ್ಯಕರ ಬೆಳವಣಿಗೆಗೆ ಪೂರಕವಾಗಿರುವ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಬೇಕು ಎಂದರು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಕಾಶೀನಾಥ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಚಲುವರಾಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿ ಜೆ.ಆರ್. ದಿನೇಶ್, ಸಾಂಸ್ಥಿಕ ರಕ್ಷಣಾಧಿಕಾರಿ ಕುಮಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಎ. ರಮೇಶ, ಸ್ವಯಂ ಸೇವಾ ಸಂಸ್ಥೆಯ ಗಂಗಾಧರ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.


# ವೀರಭದ್ರೇಶ್ವರ ಕಾರ್ತಿಕೋತ್ಸವದ ನಿಮಿತ್ತ ಸಾಮೂಹಿಕ ವಿವಾಹ

**ಯಲಬುರ್ಗಾ:** ಕೊಪ್ಪಳ ಜಿಲ್ಲೆಯ ಯಲಬುರ್ಗಾ ಪಟ್ಟಣದ ಶ್ರೀ ವೀರಭದ್ರೇಶ್ವರ ದೇವರ ಕಾರ್ತಿಕೋತ್ಸವದ ಅಂಗವಾಗಿ ಸಾಮೂಹಿಕ ವಿವಾಹಗಳು ಜರುಗಿದವು.

ಕಾರ್ತಿಕೋತ್ಸವದ ನಿಮಿತ್ತ ಗುಗ್ಗಳ ಉತ್ಸವ, ವಿಶೇಷ ದೀಪೋತ್ಸವ, ಸಾಮೂಹಿಕ ವಿವಾಹಗಳು ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

ಈ ಸಂದರ್ಭದಲ್ಲಿ ಶ್ರೀ ವೀರಭದ್ರೇಶ್ವರ ದೇವಸ್ಥಾನ ಸೇವಾ ಸಮಿತಿಯ ಅಧ್ಯಕ್ಷ ಸಂಗಣ್ಣ ತೆಂಗಿನಕಾಯಿ ಮಾತನಾಡಿ, ಟ್ರುಸ್ಟ್ ವತಿಯಿಂದ ಸಾವಿರಾರು ಭಕ್ತರ ಸಹಕಾರ, ಸೇವೆಯೊಂದಿಗೆ ಪ್ರತೀ ವರ್ಷವೂ ಕಾರ್ಯಕ್ರಮಗಳು ನಡೆಯುತ್ತವೆ. ಎಲ್ಲಾ ಸಮಾಜದ ಬಾಂಧವರು ನಮ್ಮ ಕಾರ್ಯಕ್ಕೆ ಕೈ ಜೋಡಿಸುತ್ತಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕುಮಾರ್ ಸರ್ಗಣಾಚಾರ, ಶರಣಬಸವರಾಜ್ ಸಾಲಿಮಠ, ಕಲ್ಲಪ್ಪ ಅಯ್ಯಪ್ಪ ಗಾಣಿಗೇರ, ಶಿವಪ್ಪ ಹಡಪದ, ಶ್ರೀಮತಿ ಅಕ್ಕಮಹಾದೇವಿ ಪಾಟೀಲ್, ಇತರ ಪ್ರಮುಖರು ಉಪಸ್ಥಿತರಿದ್ದರು.



# ಹೆಲ್ಮೆಟ್ ಕಡ್ಡಾಯ; ಸಂಚಾರಿ ನಿಯಮ ತಪ್ಪದೆ ಪಾಲಿಸಿ



ಶಿಡ್ಲಘಟ್ಟ : ದ್ವಿ ಚಕ್ರ ವಾಹನ ಚಾಲನೆ ಮಾಡುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಮತ್ತು ರಸ್ತೆ ಸಂಚಾರಿ ನಿಯಮಗಳನ್ನು ತಪ್ಪದೆ ಪಾಲಿಸಬೇಕೆಂದು ನಗರ ಪೊಲೀಸ್ ಠಾಣೆಯ ಎಸ್ಐ ವೇಣುಗೋಪಾಲ್ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ದ್ವಿಚಕ್ರ ವಾಹನ ಅಥವಾ ಯಾವುದೆ ರೀತಿಯ ವಾಹನಗಳನ್ನು ಚಾಲನೆ ಮಾಡುವಾಗ ಕಡ್ಡಾಯವಾಗಿ ರಸ್ತೆ ಸಂಚಾರಿ ನಿಯಮಗಳನ್ನು ಪಾಲಿಸಬೇಕು, ಇದರಿಂದ ನಿಮಗೂ ಒಳ್ಳೆಯದು ನಿಮ್ಮನ್ನು ನಂಬಿಕೊಂಡ ನಿಮ್ಮ ಕುಟುಂಬದವರ ಹಿತ ದೃಷ್ಟಿಯಿಂದಲೂ ಒಳ್ಳೆಯದು ಎಂದು ನಗರ ಠಾಣೆಯ ಎಸ್ಐ ವೇಣುಗೋಪಾಲ್ ತಿಳಿಸಿದರು.

ನಗರ ಠಾಣೆ ಪೊಲೀಸರಿಂದ ನಗರದ ಸಾರಿಗೆ ಬಸ್‌ನಿಲ್ದಾಣ ಬಳಿ ಶಾರದಾ ಶಾಲೆಯಲ್ಲಿ ಅಪರಾಧ ಮಾಸಾಚರಣೆ–2024 ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪಾನ ಮತ್ತರಾಗಿ ವಾಹನ ಚಲಾಯಿಸುವುದು, ನಿಗಧಿತ ಸಂಖ್ಯೆಗಿಂತಲೂ ಹೆಚ್ಚು ಪ್ರಯಾಣಿಕರನ್ನು ಕೂರಿಸಿಕೊಂಡು ಚಾಲನೆ ಮಾಡುವುದು ಕೂಡ ಕಾನೂನು ಪ್ರಕಾರ ಅಪರಾಧವಾಗಿದ್ದು ದಯಮಾಡಿ ಎಲ್ಲರೂ ರಸ್ತೆ ಸಂಚಾರಿ ನಿಯಮಗಳನ್ನು ಪಾಲಿಸಿ ಎಂದು ಕೋರಿದರು.

ಮುಖ್ಯವಾಗಿ ಅಪ್ರಾಪ್ತರು ಬೈಕ್ ಚಾಲನೆ ಮಾಡಬಾರದು, ಒಂದು ವೇಳೆ ಬೈಕ್ ಚಾಲನೆ ಮಾಡಿದಲ್ಲಿ ಅಪ್ರಾಪ್ತರು ಮತ್ತು ಅವರಿಗೆ ಬೈಕ್ ಕೊಟ್ಟ ಅವರ ಪೋಷಕರ ವಿರುದ್ದವೂ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಕಾರ್ಯಕ್ರಮದ ನಂತರ ಶಾರದಾ ಶಾಲಾ ವಿದ್ಯಾರ್ಥಿಗಳು, ಪೊಲೀಸ್ ಸಿಬ್ಬಂದಿಯು ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ವಾಹನ ಚಾಲನೆ ವೇಳೆ ಅನುಸರಿಸಬೇಕಾದ ರಸ್ತೆ ಸಂಚಾರಿ ನಿಯಮಗಳನ್ನು ಪಾಲಿಸಿ, ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ, ಕುಡಿದು ವಾಹನ ಓಡಿಸಬೇಡಿ ಎಂದು ಘೋಷಣೆಗಳನ್ನು ಕೂಗಿ ಅರಿವು ಮೂಡಿಸಿದರು. ಶಾರದಾ ಶಾಲಾ ಕಾರ್ಯದರ್ಶಿ ಸುಮನ್ ಮತ್ತಿತರರು ಹಾಜರಿದ್ದರು.

# ಶಿಕ್ಷಣದ ಜೊತೆಯಲ್ಲಿ ಮನೋರಂಜನೆ ನೀಡುವುದರಿಂದ ಮಕ್ಕಳಿಗೆ ಉತ್ಸಾಹ ಹೆಚ್ಚುತ್ತದೆ

ಚಾಮರಾಜನಗರ: ಶಿಕ್ಷಣದ ಜೊತೆಯಲ್ಲಿ ಮನೋರಂಜನೆ ನೀಡುವುದರಿಂದ ಮಕ್ಕಳಿಗೆ ಉತ್ಸಾಹ ಹೆಚ್ಚುತ್ತದೆ ಹಾಗೂ ಬುದ್ಧಿಯು ಚುರುಕಾಗುತ್ತದೆ ಎಂದು ನಾಗಸೇನಾ ಸೋಷಿಯಲ್ ಅಂಡ್ ಎಜುಕೇಷನಲ್ ಟ್ರಸ್ಟ್ ಕಾರ್ಯದರ್ಶಿ ಎಸ್.ಮಹದೇವಯ್ಯ ತಿಳಿಸಿದರು.



ನಗರದ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಭಾನುವಾರ ಸಂಜೆ ನಡೆದ ಹಿಪ್ಪೋಕ್ಯಾಂಪಸ್ ಅಂಗ್ಲ ಮಾಧ್ಯಮ ಶಾಲೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಚಿಕ್ಕ ಮಕ್ಕಳ ಮನೋರಂನೆಯನ್ನು ನೋಡಲು ಬಹಳ ಸಂತೋಷವಾಗುತ್ತದೆ.

ಪೋಷಕರು ಮಕ್ಕಳಿಗೆ ಪ್ರೋತ್ಸಾಹ ನೀಡುವುದರ ಜೊತೆಗೆ ಶಾಲೆಗಳಲ್ಲಿ ನಡೆಯುವ ಚಟುವಟಿಕೆಗಳಿಗೆ ಅವರನ್ನು ಹೋಗಲು ಬಿಡಬೇಕು. ಎಷ್ಟೋ ಕಿರಿಯ ವಯಸ್ಸಿನ ಪ್ರತಿಭೆಗಳು ಟಿವಿ ಮಾಧ್ಯಮಗಳಲ್ಲಿ ನೋಡುತ್ತಿದ್ದೇವೆ. ಮಕ್ಕಳಿಗೆ ವೇದಿಕೆಯ ಮೇಲೆ ಮಾತನಾಡುವ ಧೈರ್ಯ ಬರುವಂತೆ ಶಿಕ್ಷಕರು ಮತ್ತು ಪೋಷಕರು ಮಾಡಬೇಕು. ಎಂದು ಹೇಳಿದರು.




ಹಿಪ್ಪೋ ಕ್ಯಾಂಪಸ್ ಅಂಗ್ಲ ಮಾಧ್ಯಮ ಶಾಲೆಯು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣವನ್ನು ನೀಡುವುದರ ಜೊತೆಯಲ್ಲಿ ಸಾಂಸ್ಕೃತಿಕವಾಗಿ ಮಕ್ಕಳು ಬೆಳೆಯಲು ಸಹಕಾರ ನೀಡುತ್ತಿದೆ ಎಂದು ತಿಳಿಸಿದರು.

ಸಿದ್ಧಾರ್ಥ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಮಹದೇವಸ್ವಾಮಿ. ಎನ್ ರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಮಕ್ಕಳ ಮೇಲಿನ ಹೊರೆಯಿಂದ ನುಣಿಚಿಕೊಳ್ಳಲು ಶಿಕ್ಷಕರ ಮೇಲೆ ಹೊರೆಯಾಕಬೇಡಿ, ಶಿಕ್ಷಕರ ಪಾತ್ರ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡುವುದು, ಸಂಸ್ಕಾರಗಳನ್ನು ತಿಳಿಸಿಕೊಡುವುದು ಮಕ್ಕಳಿಗೆ ಮನೆಗಳಲ್ಲಿ ಮೊಬೈಲ್ ನಿಂದ ಆಟವಾಡುವುದು, ಕೆಟ್ಟ ಪದಗಳನ್ನು ಹಾಡುವುದರಿಂದ ಮಕ್ಕಳ ಮನಸ್ಸು ಬೇರೆಡೆಗೆ ಹೋಗಬಹುದು ಮನೆಗಳಲ್ಲಿ ಸಂಸ್ಕಾರದ ಜೊತೆಯಲ್ಲಿ ಮಕ್ಕಳಿಗೆ ನಮ್ಮ ದೇಶದ ಹಲವಾರು ಮಹಾನೀಯರ ಬಗ್ಗೆ ಸಣ್ಣ ವಯಸ್ಸಿನಲ್ಲಿ ತಿಳಿಸಿದರೆ ಮುಂದಿನ ವಿದ್ಯಾಭ್ಯಾಸಕ್ಕೆ ಸುಲಭವಾಗಲಿದೆ ಎಂದು ಹೇಳಿದರು.

ಸಿದ್ಧಾರ್ಥ ಪಿ.ಯು ಕಾಲೇಜ್ ಪ್ರಾಂಶುಪಾಲ ರಂಗಸ್ವಾಮಿ ಹಾಗೂ ಹಿಪ್ಪೋ ಕ್ಯಾಂಪಸ್ ಅಂಗ್ಲ ಶಾಲೆಯ ಮುಖ್ಯ ಶಿಕ್ಷಕಿ ಶೃತಿ.ಪಿ ಅವರು ಮಾತನಾಡಿದರು.

# ಸಮಗ್ರ ಕೃಷಿ ಪದ್ಧತಿ ಮತ್ತು ಸಾವಯವ ಕೃಷಿ ಪದ್ಧತಿಯಿಂದ ಅಭಿವೃದ್ಧಿ ಹೊಂದಿ



ಶಿರಾ: ರೈತರು ತಮ್ಮ ಹೊಲಗಳಲ್ಲಿ ಅಥವಾ ಜಮೀನುಗಳಲ್ಲಿ ಸಮಗ್ರ ಕೃಷಿ ಮತ್ತು ಸಾವಯವ ಕೃಷಿ ಪದ್ದತಿಯನ್ನ ಅಳವಡಿಸಿಕೊಳ್ಳಿ ಆರೋಗ್ಯವಂತ ಆಹಾರ ದಾನ್ಯಗಳಿಗೆ ಸಿರಿದಾನ್ಯಗಳನ್ನ ಬೆಳೆಯಿರಿ ಆ ಮೂಲಕ ಸಿರಿವಂತರಾಗಿ ಮಳೆ ಅಥವಾ ನೀರಾವರಿ ಕಡಿಮೆ ಇದ್ದರೂ ತಡೆದು ಫಲ ನೀಡುವ ಬೆಳೆಗಳನ್ನ ಬೆಳೆಯುವ ರೂಡಿ ಮಾಡಿಕೊಳ್ಳಿ ಎಂದು ರೈತರಿಗೆ ಕೃಷಿ ಇಲಾಖೆ ಉಪನಿರ್ದೇಶಕ ಡಾ ನಾಗರಾಜ್ ಕರೆನೀಡಿದರು.

ಅವರು ತಾಲ್ಲೂಕು ಕೃಷಿ ಇಲಾಖೆಯಿಂದ ರೈತ ಭವನದಲ್ಲಿ ರಾಷ್ಟ್ರೀಯ ರೈತ ದಿನಾಚರಣೆ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರೈತರು ಆರೋಗ್ಯಕರ ದಾನ್ಯ ಬೆಳೆಯಲು ಸಾವಯವ ಕೃಷಿ ಪದ್ದತಿಯನ್ನ ಅಳವಡಿಸಿಕೊಳ್ಳಿ ಅದರ ಜತೆಗೆ ಆರೋಗ್ಯ ಆಹಾರಕ್ಕಾಗಿ ಸಿರಿಧಾನ್ಯಗಳ ಬೆಳೆಯುವತ್ತು ಆಸಕ್ತಿ ವಹಿಸಬೇಕು ಎಂದು ಅವರು ರಾಷ್ಟ್ರೀಯ ರೈತರ ದಿನದ ಇತಿಹಾಸವನ್ನು ನೋಡುವುದಾದರೆ, ದೇಶದ ಐದನೇ ಪ್ರಧಾನಿ ಚೌಧರಿ ಚರಣ್ ಸಿಂಗ್ ಅವರ ಜನ್ಮ ದಿನದ ಸವಿ ನೆನಪಿಗಾಗಿ ಪ್ರತಿವರ್ಷ ಡಿಸೆಂಬರ್ 23 ರಂದು ಭಾರತದಲ್ಲಿ ರಾಷ್ಟ್ರೀಯ ರೈತರ ದಿನವನ್ನು ಆಚರಿಸಲಾಗುತ್ತದೆ. ಅವರು 1979 ರಿಂದ 1980 ರ ವರೆಗೆ ದೇಶದ ಪ್ರಧಾನಿಯಾಗಿದ್ದರು.

ತಾವು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಇವರು ರೈತರ ಶ್ರೇಯೋಭಿವೃದ್ಧಿಗಾಗಿ ಹಲವು ಕಾರ್ಯಕ್ರಮಗಳು ಮತ್ತು ಯೋಜನೆಗಳನ್ನು ಹಮ್ಮಿಕೊಂಡಿದ್ದರು. ರೈತರ ಸಬಲೀಕರಣಕ್ಕಾಗಿ ಹಲವು ಕಾನೂನು, ಕೃಷಿ ಸುಧಾರಣೆಗಳು, ನೀತಿಗಳನ್ನು ರೂಪಿಸಿದ್ದರು.

ಅನ್ನದಾತನ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿದ ಮಾಜಿ ಪ್ರಧಾನಿ ಚೌಧರಿ ಚರಣ್ ಸಿಂಗ್ ಅವರ ಗೌರವಾರ್ಥವಾಗಿ 2001 ರಲ್ಲಿ ಭಾರತ ಸರ್ಕಾವು ಡಿಸೆಂಬರ್ 23 ರಂದು ರಾಷ್ಟ್ರೀಯ ರೈತರ ದಿನವನ್ನು ಆಚರಿಸಲು ಘೋಷಿಸಿತು. ಅಂದಿನಿಂದ ಪ್ರತಿವರ್ಷ ಡಿಸೆಂಬರ್ 23 ರಂದು ದೇಶದಲ್ಲಿ ರಾಷ್ಟ್ರೀಯ ರೈತರ ದಿನವನ್ನು ಆಚರಿಸುತ್ತಾ ಬರಲಾಗುತ್ತಿದೆ.

ವೇದಿಕೆಯಲ್ಲಿ ಪ್ರಗತಿಪರ ರೈತರು ಮತ್ತಿತರ ಅಧಿಕಾರಿಗಳು ಹಾಜರಿದ್ದರು

# ಸಾವಯವ ಕೃಷಿಗೆ ಒತ್ತು ನೀಡಿ ಆರ್ಥಿಕವಾಗಿ ಸದೃಢರಾಗಿ

ಚಾಮರಾಜನಗರ: ರೈತರು ಸಾವಯವ ಕೃಷಿಗೆ ಒತ್ತು ನೀಡುವ ಮೂಲಕ ಲಾಭ ತರುವ ಬೆಳೆ ಬೆಳೆದು ಆರ್ಥಿಕವಾಗಿ ಸದೃಢರಾಗಬೇಕು ಎಂದು ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಹಾಗೂ ಕೃಷಿ ಸಂಬಂಧಿತ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ರೈತ ದಿನಾಚರಣೆ ಹಾಗೂ ಜಿಲ್ಲಾಮಟ್ಟದ ಸಿರಿಧಾನ್ಯ ಹಬ್ಬ–2024' ಕಾರ್ಯಕ್ರಮ ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿ, ರೈತನಾಯಕರಾದ ಪ್ರೊ. ನಂಜುಂಡಸ್ವಾಮಿ ಹಾಗೂ ಮಾಜಿ ಪ್ರಧಾನಿ ಚರಣ್ ಸಿಂಗ್ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ರೈತರಿಗೆ ಸಮಸ್ಯೆಗಳು ನಿರಂತರವಾಗಿದೆ. ಇದನ್ನು ಮನಗಂಡಿರುವ ಸರ್ಕಾರ ರೈತರ ಸಮಸ್ಯೆಗಳನ್ನು ಪರಿಹರಿಸಲು ಮುಂದಾಗಿದೆ. ರೈತರು ಬೆಳೆದ ಬೆಳೆಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಬೇಕು. ರೈತರು ಬೆಳೆದ ಆಹಾರ ಪದಾರ್ಥಗಳಿಗೆ ವೈಜ್ಞಾನಿಕ ಬೆಲೆ ದೊರೆಯಬೇಕು. ಸರ್ಕಾರ ರೈತರ ಪರವಾಗಿದ್ದು, ಈ ಬಗ್ಗೆ ತಜ್ಞರ ಜೊತೆ ಚರ್ಚಿಸಿ ಸಮಸ್ಯೆ ಪರಿಹರಿಸಲಿದೆ. ರೈತರು ಆಧುನಿಕ ಕೃಷಿ ಪದ್ಧತಿಗೆ ಹೊಂದಿಕೊಳ್ಳಬೇಕು ಎಂದರು.

ಇಂದಿನ ಪರಿಸ್ಥಿತಿಗೆ ಅನುಗುಣವಾಗಿ ಲಾಭ ತರುವ ಬೆಳೆ ಬೆಳೆಯಲು ಮುಂದಾಗಬೇಕು. ರೈತರು ಸಾವಯವ ಕೃಷಿಗೆ ಆದ್ಯತೆ ನೀಡಿ ಸಿರಿಧಾನ್ಯಗಳನ್ನು ಬೆಳೆದು ಆರ್ಥಿಕವಾಗಿ ಸದೃಢರಾಗಬೇಕು. ಜೊತೆಗೆ ವಿವಿಧ ಬಗೆಯ ಸೊಪ್ಪು ಬೆಳೆಯಬೇಕು. ಸಿರಿಧಾನ್ಯಗಳು ಹಾಗೂ ಸೊಪ್ಪು ಸೇವನೆಯಿಂದ ರೋಗ ನಿರೋಧಕ ಶಕ್ತಿ ಹೆಚ್ಚಾಗಿ ಆರೋಗ್ಯಯುತ ಜೀವನ ನಡೆಸಲು ಸಹಕಾರಿಯಾಗಲಿದೆ ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಮಾತನಾಡಿ ತಾವು ಬೆಳೆದ ಬೆಳೆಗೆ ನ್ಯಾಯಯುತ ಬೆಲೆ ದೊರೆಯದೇ ಸಂಕಷ್ಟದಲ್ಲಿರುವ ರೈತರಿಗೆ ನೆರವಾಗುವುದು ಸರ್ಕಾರದ ಜವಾಬ್ದಾರಿಯಾಗಿದೆ. ಸ್ವಾಮಿನಾಥನ್ ಸಮಿತಿ ವರದಿ ಜಾರಿಯಾಗಿದ್ದರೆ ರೈತರಿಗೆ ಸಾಕಷ್ಟು ಅನುಕೂಲವಾಗುವುದಿತ್ತು. ರೋಗನಿರೋಧಕ ಶಕ್ತಿ ವೃದ್ಧಿಸುವ ಸಿರಿಧಾನ್ಯಗಳ ಮಹತ್ವವನ್ನು ಪ್ರತಿಯೊಬ್ಬರು ಅರಿಯಬೇಕಾಗಿದೆ. ಸಿರಿಧಾನ್ಯಗಳು ಇಂದು ನ್ಯೂಟ್ರಿಷೀಯನ್, ಡಯಟ್ ಆಹಾರವಾಗಿ ಪರಿವರ್ತನೆ ಹೊಂದಿ ಮಾರುಕಟ್ಟೆಗೆ ಪ್ರವೇಶಿಸಿವೆ ಎಂದರು.

ಕಾವೇರಿ ಅಚ್ಚುಕಟ್ಟು ಪ್ರಾದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ ಅವರು ಮಾತನಾಡಿ ದೇಶದ ಪ್ರತಿಯೊಬ್ಬರಿಗೂ ಅನ್ನ ನೀಡುವ ರೈತರನ್ನು ನೆನೆಯಬೇಕು. ಅತಿವೃಷ್ಠಿ, ಅನಾವೃಷ್ಠಿ ಸಂದರ್ಭಗಳಲ್ಲಿ ಆಹಾರ ಪದಾರ್ಥಗಳ ಬೆಲೆಯಲ್ಲಿ ಏರುಪೇರಾಗಲಿದೆ. ಇದರಿಂದ ರೈತರು ಸಾಲದ ಸುಳಿಯಲ್ಲಿ ಸಿಲುಕಲಿದ್ದಾರೆ. ಈ ನಿಟ್ಟಿನಲ್ಲಿ ಸರ್ಕಾರ ರೈತರ ಬೆಳೆಗೆ ಬೆಂಬಲ ಬೆಲೆ ಘೋಷಿಸಿ ಅವರ ಸಂಕಷ್ಟಗಳಿಗೆ ಸ್ಪಂದಿಸಬೇಕು. ರೈತ ಹಾಗೂ ರೈತ ಮಹಿಳೆಯರಿಗೆ ನೀಡುವ ಆಧುನಿಕ ಕೃಷಿ ಯಂತ್ರೋಪಕರಣ, ಹನಿ ನೀರಾವರಿ ಸಬ್ಸಿಡಿಯನ್ನು ಹೆಚ್ಚಿಸಬೇಕು ಎಂದು ತಿಳಿಸಿದರು.

ರೈತ ಮುಖಂಡರಾದ ಹೊನ್ನೂರು ಪ್ರಕಾಶ್ ಹಾಗೂ ಭಾಗ್ಯರಾಜ್ ಅವರು ಮಾತನಾಡಿ ರೈತರ ಬೆಳೆಗೆ ಸೂಕ್ತ ಮಾರುಕಟ್ಟೆ ಒದಗಿಸಬೇಕು. ನಿಗದಿತ, ನಿಖರ ಬೆಲೆ ದೊರೆಯಬೇಕು. ಕೃಷಿಗೆ ಮೂಲಸೌಕರ್ಯ ಒದಗಿಸಲು ಸರ್ಕಾರ ಮುಂದಾಗಬೇಕು. ನಾವು ನಮಗೋಸ್ಕರ ಆಹಾರ ಪದಾರ್ಥಗಳನ್ನು ಬೆಳೆಯಬೇಕಾಗಿದೆ. ರೈತರು ನೈಸರ್ಗಿಕ ಕೃಷಿಗೆ ಹೊಂದಿಕೊಳ್ಳಬೇಕಾಗಿದೆ. ಇದರಿಂದ ಭೂಮಿ, ಪರಿಸರ ಉಳಿಯಲಿವೆ. ಪ್ರತಿಯೊಬ್ಬರು ಸಾವಯವ ಕೃಷಿಗೆ ಒಲವು ತೋರಬೇಕು. ಉತ್ಪಾದಕರು, ಗ್ರಾಹಕರು ನಾವೇ ಆಗಬೇಕು. ಆಗಮಾತ್ರ ರೈತರಿಗೆ ಉಳಿಗಾಲವಿದೆ ಎಂದರು.



ಪ್ರಾಸ್ತಾವಿಕ ನುಡಿಗಳನ್ನಾಡಿದ ಕೃಷಿ ಜಂಟಿ ನಿರ್ದೇಶಕರಾದ ಅಬೀದ್ ಅವರು ಇಂದು ಮಾಜಿ ಪ್ರಧಾನಿ ಚರಣ್‌ಸಿಂಗ್ ಜನ್ಮದಿನವಾಗಿದ್ದು, ಚರಣ್‌ಸಿಂಗ್ ಅವರು ಕೃಷಿ ಸಚಿವರು ಹಾಗೂ ಪ್ರಧಾನಿಯಾಗಿದ್ದ ಅವಧಿಯಲ್ಲಿ ರೈತರ ಶ್ರೇಯೋಭಿವೃದ್ಧಿಗೆ ಹತ್ತು–ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದರು. ಉತ್ತರಭಾರತದಲ್ಲಿ ರೈತರ ದಿನಾಚರಣೆಯನ್ನು ಚರಣ್‌ಸಿಂಗ್ ಹೆಸರಿನಲ್ಲಿ ಹಬ್ಬದ ಮಾದರಿಯಲ್ಲಿ ಆಚರಿಸುತ್ತಾರೆ. ಇಲ್ಲಿಯೂ ಅದನ್ನು ಮುಂದುವರೆಸಲಾಗಿದೆ ಎಂದು ತಿಳಿಸಿದರು.

ಇದೇ ವೇಳೆ ಕಾರ್ಯಕ್ರಮದಲ್ಲಿ ಸಿರಿಧಾನ್ಯ ಪಾಕ ಹಾಗೂ ಮರೆತುಹೋದ ಆಹಾರ, ತಿನಿಸುಗಳ ತಯಾರಿಕೆ ಸ್ಪರ್ಧೆಯಲ್ಲಿ ವಿಜೇತರಾದ ಮಹಿಳೆಯರನ್ನು ಮತ್ತು ಆತ್ಮ ಯೋಜನೆಯಡಿ ಜಿಲ್ಲಾಮಟ್ಟದ ಶ್ರೇಷ್ಠ ರೈತ ಪ್ರಶಸ್ತಿ ವಿಜೇತರಿಗೆ ಪ್ರಮಾಣಪತ್ರ ನೀಡಿ ಸನ್ಮಾನಿಸಲಾಯಿತು.

ಆರಂಭದಲ್ಲಿ ವೇದಿಕೆ ಮುಂಭಾಗದಲ್ಲಿ ಸಿರಿಧಾನ್ಯಗಳಿಂದ ಅಲಂಕೃತಗೊಳಿಸಿದ್ದ ರಾಶಿ ಪೂಜೆ ನೆರವೇರಿಸಲಾಯಿತು.

ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಕೃಷಿ ಇಲಾಖೆ ಉಪನಿರ್ದೇಶಕರಾದ ಸುಷ್ಮಾ , ರೈತ ಮುಖಂಡರಾದ ಎಂ. ಸಂಪತ್, ಎಸ್. ಮಹದೇವಪ್ಪ, ಎಚ್.ಕೆ. ಮಂಜೇಶ್, ಮಹೇಶ್ ಮೂಡ್ನಾಕೂಡು, ಆಲೂರು ಸಂತೋಷ್, ಚಿನ್ನಸ್ವಾಮಿ ಕಾಡಹಳ್ಳಿ, ಮಹದೇವಮೂರ್ತಿ, ಹೊನ್ನೂರು ಬಸವಣ್ಣ, ಹೆಬ್ಬಸೂರು ಬಸವಣ್ಣ, ಶಿವಮೂರ್ತಿ ನಾಯಕ, ನಾಗರಾಜು, ಸೋಮಣ್ಣ, ಕರಿಯಪ್ಪ, ಚಿಕ್ಕರಾಜು, ರಾಜು, ಶಿವಕುಮಾರ್, ಕೆವಿಕೆ ಮುಖ್ಯಸ್ಥರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಜಿಲ್ಲಾಮಟ್ಟದ ಸಿರಿಧಾನ್ಯ ಹಬ್ಬದ ಅಂಗವಾಗಿ ಜಿಲ್ಲಾಡಳಿತದ ಮುಂಭಾಗದಿಂದ ಭುವನೇಶ್ವರಿ ವೃತ್ತದ ಮೂಲಕ ಡಾ. ಬಿ.ಆರ್. ಅಂಬೇಡ್ಕರ್ ಭವನದವರೆಗೆ ಏರ್ಪಡಿಸಲಾಗಿದ್ದ ಸಿರಿಧಾನ್ಯ ನಡಿಗೆಗೆ ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಚಾಲನೆ ನೀಡಿದರು.

# ಕಾಲ್ತುಳಿತ; ಗರ್ಭಿಣಿಯರು ಸೇರಿ 32 ಮಂದಿ ಸಾವು!

**ಅನಂಬ್ರಾ:** ನೈಜೀರಿಯಾದಲ್ಲಿ ನಡೆದ ಎರಡು ಪ್ರತ್ಯೇಕ ಚಾರಿಟಿ ಕಾರ್ಯಕ್ರಮಗಳಲ್ಲಿ ಸಂಭವಿಸಿದ ಕಾಲ್ತುಳಿತದಿಂದ ಕನಿಷ್ಠ 32 ಜನರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಆಗ್ನೇಯ ರಾಜ್ಯವಾದ ಅನಂಬ್ರಾದ ಓಕಿಜಾ ಎಂಬ ಪಟ್ಟಣದಲ್ಲಿ ಮೊದಲ ಕಾಲ್ತುಳಿತ ಸಂಭವಿಸಿದ್ದು, 22 ಜನರು ಅಲ್ಲಿ ಪ್ರಾಣ ಕಳೆದುಕೊಂಡಿದ್ದಾರೆ. ಆಹಾರ ಅಗತ್ಯವಿರುವ ಮಹಿಳೆಯರಿಗೆ ಮೂಲ ಸೌಲಭ್ಯವಾದ ಅಕ್ಕಿಯ ಚೀಲಗಳನ್ನು ವಿತರಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಆದರೆ ನಿರೀಕ್ಷೆಗೂ ಮೀರಿದ ಜನರು ಸೇರಿದ್ದರಿಂದ ಈ ದುರಂತ ಸಂಭವಿಸಿದೆ.



ಅಕ್ಕಿ ಪಡೆಯಲು ಮುಗಿಬಿದ್ದು, ತಳ್ಳಾಟ ನೂಕಾಟ: ಅಧಿಕ ಜನರು ಸಮುದಾಯ ಕೇಂದ್ರಕ್ಕೆ ಆಗಮಿಸಿದ್ದು, ಅಕ್ಕಿ ಪಡೆಯುವ ಭರದಲ್ಲಿ ಎಲ್ಲರೂ ಒಂದೇ ಸಲಕ್ಕೆ ಸೇರಿದ್ದರಿಂದ ಗೊಂದಲ ಉಂಟಾಗಿ ಈ ದುರಂತ ಸಂಭವಿಸಿದೆ ಎಂದು ಸ್ಟೇಟ್ ಬ್ರಾಡ್‌ಕಾಸ್ಟರ್ ರೇಡಿಯೊ ನೈಜೀರಿಯಾ ವರದಿ ಮಾಡಿದೆ.

ಸಾವನ್ನಪ್ಪಿದವರಲ್ಲಿ ಮಹಿಳೆಯರು, ವೃದ್ಧರು, ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳು ಸೇರಿದ್ದಾರೆ ಎಂದು ಅನಂಬ್ರಾ ರಾಜ್ಯ ಗವರ್ನರ್‌ನ ಮುಖ್ಯ ಪತ್ರಿಕಾ ಕಾರ್ಯದರ್ಶಿ ಕ್ರಿಶ್ಚಿಯನ್ ಅಬುರಿಮ್ ಹೇಳಿದ್ದಾರೆ. ಓಬಿ ಜಾಕ್ಸನ್ ಫೌಂಡೇಶನ್ ಈ ಕಾರ್ಯಕ್ರಮವನ್ನು ಆಯೋಜಿಸಿತ್ತು. ಈ ಚಾರಿಟಿ ಹಬ್ಬದ ಸಂದರ್ಭದಲ್ಲಿ ಯಾರು ಕಡಿಮೆ ಸೌಲಭ್ಯ ಹೊಂದಿದ್ದಾರೋ ಅಂತಹ ಸಮುದಾಯದ ಸದಸ್ಯರಿಗೆ ಮೂಲ ಸೌಲಭ್ಯಗಳನ್ನು ಕಲ್ಪಿಸುವ ಗುರಿಯಲ್ಲಿ ಈ ದತ್ತಿ ಸಂಸ್ಥೆ ಹೊಂದಿದೆ.

ಇನ್ನೊಂದೆಡೆಯೂ ಕಾಲ್ತುಳಿತ: ಇನ್ನು ಇದೇ ದಿನ, ನೈಜೀರಿಯಾದ ರಾಜಧಾನಿ ಅಬುಜಾದ ಮೈಟ್ಮಾದಲ್ಲಿ ಮತ್ತೊಂದು ಜನಸಂದಣಿಯಿಂದ ಕಾಲ್ತುಳಿತ ಸಂಭವಿಸಿದೆ. ಸ್ಥಳೀಯ ಚರ್ಚ್‌ನಲ್ಲಿ ನಡೆದ ಆಹಾರ ವಿತರಣೆ ಕಾರ್ಯಕ್ರಮದಲ್ಲಿ ನಾಲ್ವರು ಮಕ್ಕಳು ಸೇರಿದಂತೆ 10 ಜನರು ಸಾವನ್ನಪ್ಪಿದ್ದಾರೆ.

ಈ ಕಾರ್ಯಕ್ರಮಕ್ಕಾಗಿ ಸಾವಿರಕ್ಕೂ ಹೆಚ್ಚು ಜನರು ಜಮಾಯಿಸಿದ್ದರು ಎಂದು ಪೊಲೀಸರು ಹೇಳಿದ್ದಾರೆ. ಇದು ಕಾಲ್ತುಳಿತಕ್ಕೆ ಕಾರಣವಾಯಿತು ಎಂದು ಅಧಿಕೃತ ಮಾಧ್ಯಮ ಸಂಸ್ಥೆ ವರದಿ ಮಾಡಿದೆ.

ಎರಡೂ ದುರಂತಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ ನೈಜೀರಿಯಾದ ಅಧ್ಯಕ್ಷ: ಈ 2 ದುರಂತಗಳಿಗೆ ಪ್ರತಿಕ್ರಿಯೆ ನೀಡಿರುವ ನೈಜೀರಿಯಾದ ಅಧ್ಯಕ್ಷ ಬೋಲಾ ಟಿನುಬು, ಘಟನೆಯಲ್ಲಿ ಮೃತಪಟ್ಟವರಿಗೆ ಸಂತಾಪ ಸೂಚಿಸಿದ್ದಾರೆ. ಘಟನೆ ಬಗ್ಗೆ ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಅಷ್ಟೇ ಅಲ್ಲ ಲಾಗೋಸ್‌ನಲ್ಲಿ ನಡೆದ ಬೋಟ್ ರೆಗಟ್ಟಾ ಹಬ್ಬದಲ್ಲಿ ಪಾಲ್ಗೊಳ್ಳುವ ಅವರ ಕಾರ್ಯಕ್ರಮವನ್ನೇ ರದ್ದುಗೊಳಿಸಿದರು. ಜತೆಗೆ ರಾಜ್ಯಗಳ ಅಧಿಕಾರಿಗಳಿಗೆ ಕಟ್ಟುನಿಟ್ಟಾದ ಜನಸಂದಣಿ ನಿಯಂತ್ರಣ ಕ್ರಮಗಳನ್ನು ತಕ್ಷಣ ಜಾರಿಗೊಳಿಸುವಂತೆ ಕರೆ ನೀಡಿದರು.

# 700 ಅಡಿ ಆಳದ ಕೊಳವೆಬಾವಿಗೆ ಬಿದ್ದ ಮಗು

ರಾಜಸ್ಥಾನ: ಮನೆಯ ಹೊರಗೆ ಆಟವಾಡುತ್ತಿದ್ದ ಮೂರು ವರ್ಷದ ಹೆಣ್ಣುಮಗು ಅಲ್ಲೇ ಇದ್ದ 700 ಅಡಿ ಆಳದ ಕೊಳವೆ ಬಾವಿಗೆ ಬಿದ್ದಿರುವ ಘಟನೆ ರಾಜಸ್ಥಾನದಲ್ಲಿ ನಡೆದಿದೆ.

ಮಾಹಿತಿ ಪಡೆದ ಅಧಿಕಾರಿಗಳು ತಕ್ಷಣ ರಕ್ಷಣಾ ಕಾರ್ಯಾಚರಣೆ ಆರಂಭಿಸಿದರು. ಚೇತನಾ ಎಂಬ ಮಗು ಆರಂಭದಲ್ಲಿ 15 ಅಡಿ ಆಳದಲ್ಲಿ ಸಿಲುಕಿಕೊಂಡಿದ್ದಳು ಆದರೆ ನಂತರ ಮತ್ತಷ್ಟು ಕೆಳಗೆ ಜಾರಿದ್ದಳು. ರಕ್ಷಣಾ ತಂಡವು ಪೈಪ್ ಮೂಲಕ ಆಕೆಗೆ ಆಮ್ಲಜನಕವನ್ನು ಒದಗಿಸಿತು ಮತ್ತು ಆಕೆಯ ಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲು ಕ್ಯಾಮರಾವನ್ನು ಅಳವಡಿಸಿದ್ದಾರೆ.

ಚೇತನಾಳ ಅಕ್ಕ ಕಾವ್ಯಾ ತಂಗಿ ಬಿದ್ದಿದ್ದನ್ನು ನೋಡಿ ತಕ್ಷಣವೇ ಪೋಷಕರಿಗೆ ವಿಚಾರ ತಿಳಿಸಿದ್ದಾಳೆ. ಕೂಡಲೇ ಕುಟುಂಬದವರು ಪೊಲೀಸರಿಗೆ ಮಾಹಿತಿ ನೀಡಿದ್ದರು.

ಮನೆಯ ಹೊರಗೆ ಆಟವಾಡುತ್ತಿದ್ದ ಮೂರು ವರ್ಷದ ಹೆಣ್ಣುಮಗು ಅಲ್ಲೇ ಇದ್ದ 700 ಅಡಿ ಆಳದ ಕೊಳವೆ ಬಾವಿಗೆ ಬಿದ್ದಿರುವ ಘಟನೆ ರಾಜಸ್ಥಾನದಲ್ಲಿ ನಡೆದಿದೆ. ಮಾಹಿತಿ ಪಡೆದ ಅಧಿಕಾರಿಗಳು ತಕ್ಷಣ ರಕ್ಷಣಾ ಕಾರ್ಯಾಚರಣೆ ಆರಂಭಿಸಿದರು. ಚೇತನಾ ಎಂಬ ಮಗು ಆರಂಭದಲ್ಲಿ 15 ಅಡಿ ಆಳದಲ್ಲಿ ಸಿಲುಕಿಕೊಂಡಿದ್ದಳು ಆದರೆ ನಂತರ ಮತ್ತಷ್ಟು ಕೆಳಗೆ ಜಾರಿದ್ದಳು.

ರಕ್ಷಣಾ ತಂಡವು ಪೈಪ್ ಮೂಲಕ ಆಕೆಗೆ ಆಮ್ಲಜನಕವನ್ನು ಒದಗಿಸಿತು ಮತ್ತು ಆಕೆಯ ಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲು ಕ್ಯಾಮರಾವನ್ನು ಅಳವಡಿಸಿದ್ದಾರೆ. ಚೇತನಾಳ ಅಕ್ಕ ಕಾವ್ಯಾ ತಂಗಿ ಬಿದ್ದಿದ್ದನ್ನು ನೋಡಿ ತಕ್ಷಣವೇ ಪೋಷಕರಿಗೆ ವಿಚಾರ ತಿಳಿಸಿದ್ದಾಳೆ. ಕೂಡಲೇ ಕುಟುಂಬದವರು ಪೊಲೀಸರಿಗೆ ಮಾಹಿತಿ ನೀಡಿದ್ದರು.

ಸ್ಥಳೀಯ ಆಡಳಿತದೊಂದಿಗೆ ಘಟನಾ ಸ್ಥಳಕ್ಕೆ ಆಗಮಿಸಿದ ಪೊಲೀಸರು ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದಾರೆ. ಜೆಸಿಬಿ ಯಂತ್ರದ ಸಹಾಯದಿಂದ ಬೋರ್‌ವೆಲ್ ಬಳಿ ಅಗೆಯುವ ಕಾರ್ಯ ಆರಂಭವಾಗಿದೆ. ಸಿಕ್ಕಿಬಿದ್ದ ಮಗುವಿಗೆ ಆಹಾರ ಪೂರೈಸುವ ಪ್ರಯತ್ನವೂ ನಡೆಯುತ್ತಿದೆ. ಘಟನೆ ವೇಳೆ ಕುಟುಂಬದ ಸದಸ್ಯರು ಮನೆಯೊಳಗಿದ್ದರು.

# ಬಾಂಗ್ಲಾ ಹಂಗಾಮಿ ಸರ್ಕಾರದ ಜತೆ ಅಮೆರಿಕದ ಮಾತುಕತೆ

ವಾಷಿಂಗ್ಟನ್, ಅಮೆರಿಕ: ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಿನ ದಾಳಿ ಹೆಚ್ಚುತ್ತಿರುವ ನಡುವೆ, ಬಾಂಗ್ಲಾದೇಶದ ಹಂಗಾಮಿ ಸರ್ಕಾರದ ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ಅವರೊಂದಿಗೆ ಅಮೆರಿಕದ ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವಾನ್ ಸೋಮವಾರ ಮಾತನಾಡಿದ್ದಾರೆ. ಈ ವೇಳೆ ಉಭಯ ನಾಯಕರು ಬಾಂಗ್ಲಾದೇಶದಲ್ಲಿನ ಎಲ್ಲರ ಮಾನವ ಹಕ್ಕುಗಳನ್ನು ಗೌರವಿಸುವ ಮತ್ತು ರಕ್ಷಿಸುವ ಬದ್ಧತೆಯನ್ನು ವ್ಯಕ್ತಪಡಿಸಿದರು.

ಸವಾಲಿನ ಅವಧಿಯಲ್ಲಿ ಬಾಂಗ್ಲಾದೇಶದ ನಾಯಕತ್ವ ವಹಿಸಿಕೊಂಡಿರುವುದಕ್ಕೆ ಯೂನಸ್‌ಗೆ ಅಮೆರಿಕದ ರಾಷ್ಟ್ರೀಯ ಭದ್ರತಾ ಸಲಹೆಗಾರ ಸುಲ್ಲಿವಾನ್ ಧನ್ಯವಾದ ಹೇಳಿದ್ದಾರೆ

ಮಾನವ ಹಕ್ಕುಗಳ ರಕ್ಷಣೆಯ ಬದ್ಧತೆ : ಧರ್ಮವನ್ನು ಲೆಕ್ಕಿಸದೆ ಎಲ್ಲಾ ಜನರ ಮಾನವ ಹಕ್ಕುಗಳನ್ನು ಗೌರವಿಸುವ ಮತ್ತು ರಕ್ಷಿಸುವ ಬದ್ಧತೆಯನ್ನು ಇಬ್ಬರೂ ನಾಯಕರು ವ್ಯಕ್ತಪಡಿಸಿದ್ದಾರೆ.

ಸುಲ್ಲಿವಾನ್ ಅವರು ಸಮೃದ್ಧ, ಸ್ಥಿರ ಮತ್ತು ಪ್ರಜಾಪ್ರಭುತ್ವ ಪರವಾದ ಬಾಂಗ್ಲಾದೇಶಕ್ಕಾಗಿ ಅಮೆರಿಕ ಬೆಂಬಲ ನೀಡಲಿದೆ



ಪುನರುಚ್ಚರಿಸಿದ್ದಾರೆ. ದಕ್ಷಿಣ ಏಷ್ಯಾದ ರಾಷ್ಟ್ರವು ಎದುರಿಸುತ್ತಿರುವ ಸವಾಲುಗಳನ್ನು ಮೆಟ್ಟಿ ನಿಲ್ಲಲು ತಮ್ಮ ದೇಶದ ನಿರಂತರ ಬೆಂಬಲ ನೀಡುವುದಾಗಿ ಇದೇ ವೇಳೆ ಸುಲ್ಲಿವಾನ್ ಭರವಸೆ ನೀಡಿದ್ದಾರೆ.

84 ವರ್ಷದ ಯೂನಸ್ ಅವರು ಆಗಸ್ಟ್ 8 ರಂದು ಬಾಂಗ್ಲಾದೇಶದ ಮುಖ್ಯ ಸಲಹೆಗಾರರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ದೇಶದಲ್ಲಿ ಉಂಟಾದ ಅತಿದೊಡ್ಡ ಪ್ರತಿಭಟನೆ ಹಿನ್ನೆಲೆಯಲ್ಲಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ ಶೇಖ್ ಹಸೀನಾ ಭಾರತಕ್ಕೆ ಪಲಾಯನ ಮಾಡಿದ್ದರು. ಹಸೀನಾ ಸರ್ಕಾರದ ಪತನದ ನಂತರ ಬಾಂಗ್ಲಾದೇಶದಲ್ಲಿ ಹಿಂದೂಗಳು ಮತ್ತು ಇತರ ಅಲ್ಪಸಂಖ್ಯಾತರ ಮೇಲೆ ನಿರಂತರ ದಾಳಿಗಳು ನಡೆಯುತ್ತಿದ್ದು, ಹಿಂಸಾಚಾರ ಹೆಚ್ಚುತ್ತಿದೆ. ದೇವಾಲಯಗಳ ಮೇಲೆ ದಾಳಿಗಳು ಕೂಡಾ ನಡೆಯುತ್ತಿವೆ.

ಎಚ್ಚರಿಕೆ ನೀಡಿದ್ದ ಅಮೆರಿಕ ಅಧ್ಯಕ್ಷ ಬೈಡನ್: ಬಾಂಗ್ಲಾದೇಶದ ಪರಿಸ್ಥಿತಿಯನ್ನು ಅಮೆರಿಕ ಸೂಕ್ಷ್ಮವಾಗಿ ಗಮನಿಸುತ್ತಿದ್ದು, ಧಾರ್ಮಿಕ ಮತ್ತು ಜನಾಂಗೀಯ ಅಲ್ಪಸಂಖ್ಯಾತರ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ದೇಶದ ಮಧ್ಯಂತರ ಸರ್ಕಾರ ಬದ್ಧವಾಗಿರಬೇಕು, ಅಲ್ಪಸಂಖ್ಯಾತರ ಮೇಲೆ ಆಗುವ ದಾಳಿಗೆ ನಿಮ್ಮ ಸರ್ಕಾರವನ್ನೇ ಹೊಣೆಗಾರರನ್ನಾಗಿ ಮಾಡುತ್ತದೆ ಎಂದು ಅಮೆರಿಕ ಅಧ್ಯಕ್ಷ ಜೋ ಬೈಡನ್ ಡಿಸೆಂಬರ್ 13 ರಂದು ಎಚ್ಚರಿಕೆ ನೀಡಿದ್ದರು. ಹಸೀನಾ ಅವರನ್ನು ಪದಚ್ಯುತಗೊಳಿಸಿದ ನಂತರ ಬಾಂಗ್ಲಾದೇಶದಲ್ಲಿ ಭದ್ರತಾ ಪರಿಸ್ಥಿತಿ ಕಷ್ಟಕರವಾಗಿದೆ ಎಂದು ಶ್ವೇತಭವನದ ರಾಷ್ಟ್ರೀಯ ಭದ್ರತಾ ಸಂವಹನ ಸಲಹೆಗಾರ ಜಾನ್ ಕಿರ್ಬಿ ಹೇಳಿದ್ದಾರೆ. ಏತನ್ಮಧ್ಯೆ, ಹಸೀನಾ ಅವರನ್ನು ಹಸ್ತಾಂತರಿಸುವಂತೆ ಕೋರಿ ನವದೆಹಲಿಗೆ ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ರಾಜತಾಂತ್ರಿಕ ಟಿಪ್ಪಣಿಯನ್ನು ಕಳುಹಿಸಿರುವುದಾಗಿ ಸೋಮವಾರ ಹೇಳಿದೆ. ಈ ಕ್ರಮವು ಉಭಯ ದೇಶಗಳ ನಡುವಿನ ಬಾಂಧವ್ಯವನ್ನು ಇನ್ನಷ್ಟು ಹದಗೆಡಿಸಬಹುದು ಎಂದು ವಿಶ್ಲೇಷಿಸಲಾಗುತ್ತಿದೆ.

# ಇಸ್ರೇಲ್ ತನ್ನ ಪೂರ್ಣ ಬಲ ಬಳಸಿ ಹೌತಿಗಳ ಮೇಲೆ ದಾಳಿ ಮಾಡಲಿದೆ: ನೆತನ್ಯಾಹು

ಜೆರುಸಲೇಂ: ಯೆಮೆನ್‌ನ ಹೌತಿ ಉಗ್ರರ ವಿರುದ್ಧ ಸಂಪೂರ್ಣ ಬಲದಿಂದ ದಾಳಿ ನಡೆಸುವುದಾಗಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಎಚ್ಚರಿಕೆ ನೀಡಿದ್ದಾರೆ. ಇಸ್ರೇಲ್‌ನ ಟೆಲ್ ಅವಿವ್ ಮೇಲೆ ಹೌತಿ ಉಗ್ರರು ಕ್ಷಿಪಣಿ ದಾಳಿ ನಡೆಸಿದ ಒಂದು ದಿನದ ನಂತರ ನೆತನ್ಯಾಹು ಈ ಹೇಳಿಕೆ ನೀಡಿದ್ದಾರೆ.

ಇರಾನ್ ಮತ್ತು ಅದರ ಮಿತ್ರರಾಷ್ಟ್ರಗಳ ವಿರುದ್ಧ ನಾವು ಪೂರ್ಣ ಬಲದಿಂದ ವರ್ತಿಸಿದಂತೆಯೇ ಹೌತಿಗಳ ವಿರುದ್ಧವೂ ಕ್ರಮ ಕೈಗೊಳ್ಳುತ್ತೇವೆ ಎಂದು ನೆತನ್ಯಾಹು ಭಾನುವಾರ ತಿಳಿಸಿದ್ದಾರೆ.

ಇಸ್ರೇಲ್ ಏಕಾಂಗಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಒತ್ತಿ ಹೇಳಿದ ಅವರು, ಹೌತಿಗಳು ಅಂತಾರಾಷ್ಟ್ರೀಯ ಹಡಗುಗಳಿಗೆ ಮಾತ್ರವಲ್ಲದೇ ಇಡೀ ಜಾಗತಿಕ ವ್ಯವಸ್ಥೆಗೆ ಬೆದರಿಕೆ ಒಡ್ಡುತ್ತಿದ್ದಾರೆ ಎಂಬುದು ಯುನೈಟೆಡ್ ಸ್ಟೇಟ್ಸ್ ಸೇರಿದಂತೆ ಇತರ ಅನೇಕ ರಾಷ್ಟ್ರಗಳ ಅಭಿಪ್ರಾಯವೂ ಆಗಿದೆ ಎಂದು ಹೇಳಿದರು.



ಜಾಣ್ಮೆಯಿಂದ ಹೌತಿಗಳ ವಿರುದ್ಧ ಕ್ರಮ: ಹೀಗಾಗಿ ನಾವು ಶಕ್ತಿ, ದೃಢನಿಶ್ಚಯ ಮತ್ತು ಜಾಣ್ಮೆಯಿಂದ ಹೌತಿಗಳ ವಿರುದ್ಧ ಕ್ರಮ ಕೈಗೊಳ್ಳಲಿದ್ದೇವೆ. ಈ ಕಾರ್ಯಾಚರಣೆ ಸಮಯ ತೆಗೆದುಕೊಂಡರೂ ಫಲಿತಾಂಶ ಮಾತ್ರ ಇತರ ಭಯೋತ್ಪಾದಕ ಗುಂಪುಗಳಿಗೆ ನಾವು ಮಾಡಿದಂತೆಯೇ ಇರುತ್ತದೆ ಎಂದು ನೆತನ್ಯಾಹು ಹೇಳಿದರು. ಇರಾನ್ ಬೆಂಬಲಿತ ಯೆಮೆನ್‌ನ ಹೌತಿ ಉಗ್ರರು ಶನಿವಾರ ಹಾರಿಸಿದ ಕ್ಷಿಪಣಿ ದಕ್ಷಿಣ ಟೆಲ್ ಅವಿವ್‌ನ ಆಟದ ಮೈದಾನದಲ್ಲಿ ಸ್ಫೋಟಗೊಂಡು 16 ಜನರು ಗಾಯಗೊಂಡಿದ್ದರು.

ಇಸ್ರೇಲ್ ಸರಣಿ ವೈಮಾನಿಕ ದಾಳಿ: ಯೆಮೆನ್ ರಾಜಧಾನಿ ಸನಾ ಮತ್ತು ಹೊದೈದಾ, ಅಸ್-ಸಾಲಿಫ್ ಮತ್ತು ರಾಸ್ ಇಸಾ ಬಂದರುಗಳನ್ನು ಗುರಿಯಾಗಿಸಿಕೊಂಡು ಇಸ್ರೇಲ್ ಗುರುವಾರ ಸರಣಿ ವೈಮಾನಿಕ ದಾಳಿ ನಡೆಸಿದ ನಂತರ ಹೌತಿ ಇಸ್ರೇಲ್ ಮೇಲೆ ದಾಳಿ ನಡೆಸಿದೆ. ಹೌತಿ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ನಡೆದ ಈ ದಾಳಿಯಲ್ಲಿ ಕನಿಷ್ಠ ಒಂಬತ್ತು ಜನರು ಸಾವನ್ನಪ್ಪಿದ್ದಾರೆ ಎಂದು ಇಸ್ರೇಲ್ ಮಿಲಿಟರಿ ಹೇಳಿದೆ.

ಯೆಮೆನ್‌ನ ಹೌತಿಗಳ ಮೇಲೆ ದಾಳಿ ಮಾಡುವ ಬದಲು ಅದಕ್ಕೆ ಬೆಂಬಲವಾಗಿ ನಿಂತಿರುವ ಇರಾನ್ ಮೇಲೆಯೇ ನೇರವಾಗಿ ದಾಳಿ ಆರಂಭಿಸುವುದು ಸೂಕ್ತ ಎಂದು ಮೊಸ್ಸಾದ್ ಗೂಢಚಾರ ಸಂಸ್ಥೆ ಹಾಗೂ ಇತರ ಭದ್ರತಾ ಪಡೆಗಳ ಹಿರಿಯ ಅಧಿಕಾರಿಗಳು ಅಭಿಪ್ರಾಯ ಪಟ್ಟಿದ್ದಾರೆ ಎಂದು ಇಸ್ರೇಲ್ ಮಾಧ್ಯಮಗಳು ವರದಿ ಮಾಡಿವೆ.


2023 ರ ಅಕ್ಟೋಬರ್ 7 ರಂದು ದಕ್ಷಿಣ ಇಸ್ರೇಲ್‌ನಲ್ಲಿ ಹಮಾಸ್ ನಡೆಸಿದ ದಾಳಿಗೆ ಬೆಂಬಲವಾಗಿ ಕಳೆದ ನವೆಂಬರ್‌ನಿಂದ ಹೌತಿಗಳು ಇಸ್ರೇಲ್ ಮೇಲೆ ಮತ್ತು ಕೆಂಪು ಸಮುದ್ರದಲ್ಲಿ ಜಾಗತಿಕ ಹಡಗು ಮಾರ್ಗಗಳ ಮೇಲೆ ದಾಳಿ ನಡೆಸುತ್ತಿದ್ದಾರೆ.

# ಸಣ್ಣ ವಿಮಾನ ಪತನ: ಕನಿಷ್ಠ 10 ಮಂದಿ ಸಾವು

ಬ್ರೆಜಿಲ್: ದಕ್ಷಿಣ ಬ್ರೆಜಿಲ್‌ನ ಗ್ರಾಮಡೊ ನಗರದಲ್ಲಿ ಭಾನುವಾರ ಸಣ್ಣ ವಿಮಾನವೊಂದು ನೆಲಕ್ಕೆ ಅಪ್ಪಳಿಸಿ ಕನಿಷ್ಠ 10 ಜನರು ಸಾವನ್ನಪ್ಪಿದ್ದಾರೆ ಎಂದು ಅಂತಾರಾಷ್ಟ್ರೀಯ ಮಾಧ್ಯಮವೊಂದು ವರದಿ ಮಾಡಿದೆ.

ನಿಯಂತ್ರಣ ಕಳೆದುಕೊಂಡ ವಿಮಾನವು ಹಲವಾರು ಕಟ್ಟಡಗಳಿಗೆ ಡಿಕ್ಕಿ ಹೊಡೆದು ವ್ಯಾಪಕ ಹಾನಿಯನ್ನುಂಟು ಮಾಡಿದೆ. ಈ ಘಟನೆಯಲ್ಲಿ 12 ಜನರು ಗಾಯಗೊಂಡಿದ್ದಾರೆ ಎಂದು ಬ್ರೆಜಿಲಿಯನ್ ಅಧಿಕಾರಿಗಳು ತಿಳಿಸಿದ್ದಾರೆ.

ಮತ್ತೊಂದು ಕಡೆ ಅಪಘಾತದಲ್ಲಿ ಕನಿಷ್ಠ 17 ಜನರು ಗಾಯಗೊಂಡಿದ್ದಾರೆ ಎಂದು ರಿಯೊ ಗ್ರಾಂಡೆ ಡೊ ಸುಲ್‌ನ ಸಿವಿಲ್ ಡಿಫೆನ್ಸ್ ದೃಢಪಡಿಸಿದೆ. ಘರ್ಷಣೆಯಿಂದ ಉಂಟಾದ ಬೆಂಕಿಯಿಂದಾಗಿ ಅನೇಕರು ಉಸಿರಾಟದ ಸಮಸ್ಯೆಯಿಂದ ಬಳಲಿದರು ಎಂದು ವರದಿಯಾಗಿದೆ. ವಿಮಾನ



ಕಟ್ಟಡಗಳಿಗೆ ಅಪ್ಪಳಿಸಿದ್ದರಿಂದ ಬೆಂಕಿ ಹೊತ್ತಿಕೊಂಡಿದೆ, ತೀವ್ರ ಸುಟ್ಟಗಾಯಗಳಿಂದ ಬಳಲುತ್ತಿರುವ ಇಬ್ಬರ ಸ್ಥಿತಿ ಗಂಭೀರವಾಗಿದೆ ಎಂದು ವರದಿಗಳು ತಿಳಿಸಿವೆ.

ವಿಮಾನವು ಸ್ಥಳೀಯ ವಿಮಾನ ನಿಲ್ದಾಣದಿಂದ ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ಅಪಘಾತ ಸಂಭವಿಸಿದೆ ಎಂದು ರಾಷ್ಟ್ರೀಯ ಸಿವಿಲ್ ಡಿಫೆನ್ಸ್ ಹೇಳಿದೆ. ವಿಮಾನವು ವಸತಿ ಗೃಹಕ್ಕೆ ಅಪ್ಪಳಿಸುವ ಮೊದಲು ಕಟ್ಟಡದ ಚಿಮಣಿಗೆ ಡಿಕ್ಕಿ ಹೊಡೆದು ನಂತರ ಪೀಠೋಪಕರಣ ಅಂಗಡಿಗೆ ಅಪ್ಪಳಿಸಿತು.

ಅಪಘಾತದ ಅವಶೇಷಗಳು ಸಹ ಹೋಟೆಲ್ ಅಪ್ಪಳಿಸಿವೆ ಎಂದು ಮಾಧ್ಯಮ ವರದಿ ಮಾಡಿದೆ.

ವಿಮಾನದಲ್ಲಿ ಯಾರೂ ಬದುಕುಳಿದಿರುವ ಸಾಧ್ಯತೆಗಳಿಲ್ಲ ಎಂದು ಸ್ಥಳೀಯ ಅಧಿಕಾರಿಗಳು ಕಳವಳ ವ್ಯಕ್ತಪಡಿಸಿದ್ದಾರೆ. ರಿಯೊ ಗ್ರಾಂಡೆ ಡೊ ಸುಲ್ ಗವರ್ನರ್ ಎಡ್ವರ್ಡೊ ಲೈಟ್ ಅವರು ವಿಮಾನದಲ್ಲಿದ್ದವರು ಯಾರು ಬದುಕಿ ಉಳಿದಿಲ್ಲ ಎಂದು ಹೇಳಿದ್ದಾರೆ. ಇನ್ನು ವಿಮಾನ 10 ಜನರನ್ನು ಹೊತ್ತೊಯ್ದಿದೆ ಎಂದು ಪ್ರಾಥಮಿಕ ಮಾಹಿತಿಗಳು ಹೇಳುತ್ತಿವೆ. ಮೃತಪಟ್ಟವರೆಲ್ಲ ವಿಮಾನದಲ್ಲಿದ್ದವರಾ, ಅಥವಾ ನೆಲದ ಮೇಲಿದ್ದವರಾ ಎಂಬುದು ಸ್ಪಷ್ಟವಾಗಿಲ್ಲ ಎಂದು ಅಂತಾರಾಷ್ಟ್ರೀಯ ಮಾಧ್ಯಮ ವರದಿಗಳು ಹೇಳುತ್ತಿವೆ.

ಅಪಘಾತದ ಕಾರಣಗಳನ್ನು ತಿಳಿದುಕೊಳ್ಳಲು ಅಧಿಕಾರಿಗಳು ತನಿಖೆ ಮುಂದುವರೆಸಿದ್ದಾರೆ. ಈ ದುರಂತ ದಕ್ಷಿಣ ಬ್ರೆಜಿಲ್‌ನ ಜನಪ್ರಿಯ ರೆಸಾರ್ಟ್ ಪಟ್ಟಣವಾದ ಗ್ರಾಮಡೊವನ್ನು ಬೆಚ್ಚಿಬೀಳಿಸಿದೆ. ಕ್ರಿಸ್ಮಸ್ ಋತುವಿನಲ್ಲಿ ರಜಾದಿನದ ಆಕರ್ಷಣೆ ಕೇಂದ್ರವಾಗಿ ಈ ನಗರ ಹೆಸರು ಮಾಡಿದೆ.

# ಆಂತರಿಕ ಕಲಹ: 11 ಶಂಕಿತ ಉಗ್ರರನ್ನು ಹೊಡೆದುರುಳಿಸಿದ ಸೇನೆ

ಪಾಕಿಸ್ತಾನ: ಪ್ರಕ್ಷುಬ್ಧ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಭಾನುವಾರ ನಡೆದ ಎರಡು ಪ್ರತ್ಯೇಕ ಕಾರ್ಯಾಚರಣೆಯಲ್ಲಿ ಭದ್ರತಾ ಪಡೆಗಳು ನಿಷೇಧಿತ ತೆಹ್ರಿಕ್-ಎ-ತಾಲಿಬಾನ್ ಪಾಕಿಸ್ತಾನದ (ಟಿಟಿಪಿ) ಕಮಾಂಡರ್ ಸೇರಿದಂತೆ 11 ಶಂಕಿತ ಭಯೋತ್ಪಾದಕರನ್ನು ಕೊಂದು ಹಾಕಿದೆ.

ಗುಪ್ತಚರ ಇಲಾಖೆಯ ಖಚಿತ ಮಾಹಿತಿ ಆಧರಿಸಿ ಪಾಕಿಸ್ತಾನದ ಸೇನೆ ಈ ಕಾರ್ಯಾಚರಣೆ ಕೈಗೊಂಡಿತ್ತು. ಉಗ್ರರು ಅಡಗಿರುವ ಮಾಹಿತಿ ಪಡೆದ ಭದ್ರತಾ ಪಡೆಗಳು ಖೈಬರ್ ಜಿಲ್ಲೆಯ ಬಾಷ್ಪಶೀಲ ತಿರಾಹ್ ಕಣಿವೆ ಮತ್ತು ಲಕ್ಕಿ ಮಾರ್ವತ್ ಜಿಲ್ಲೆಯಲ್ಲಿ ಕಾರ್ಯಾಚರಣೆ ನಡೆಸಿತು.

ಉಗ್ರರ ಗುಂಪು ಪಿರ್ ಮೇಲಾ ಮೂಲಕ ತಿರಾಹ್ ಕಣಿವೆಯ ಮಾರ್ಗವಾಗಿ ತೆರಳುತ್ತಿದ್ದಾಗ ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆದಿದೆ. ಈ ವೇಳೆ 10 ಉಗ್ರರು ಹತರಾಗಿ ನಾಲ್ವರು ಗಾಯಗೊಂಡಿದ್ದಾರೆ. ಹತ್ಯೆಗೀಡಾದ ಭಯೋತ್ಪಾದಕರಲ್ಲಿ ಪ್ರಮುಖವಾಗಿ ಈ ಗುಂಪನ್ನು ನಡೆಸುತ್ತಿದ್ದ ಕಮಾಂಡರ್ ಕೂಡ ಸೇರಿದ್ದಾರೆ ಎಂದು ಮೂಲಗಳು ತಿಳಿಸಿವೆ. ಹತರಾದ ಉಗ್ರರು ನಿಷೇಧಿತ ಉಗ್ರಗಾಮಿ ಸಂಘಟನೆಯ ಹಫೀಜ್ ಗುಲ್ ಬಹದ್ದೂರ್ ಗುಂಪಿಗೆ ಸೇರಿದವರು ಎಂದು ಗೊತ್ತಾಗಿದೆ.

ಲಕ್ಕಿ ಮಾರ್ವತ್ ಜಿಲ್ಲೆಯಲ್ಲಿ ಪ್ರತ್ಯೇಕವಾಗಿ, ಪೊಲೀಸರು ಮತ್ತು ಭಯೋತ್ಪಾದನಾ ನಿಗ್ರಹ ಇಲಾಖೆ ಶಾಗೈ ಪ್ರದೇಶದಲ್ಲೂ ಖಚಿತ ಮಾಹಿತಿ ಆಧರಿಸಿ ಅಲ್ಲಿನ ಸೇನೆ ಕಾರ್ಯಾಚರಣೆ ನಡೆಸಿದೆ. ಇಲ್ಲಿ ನಡೆದ ಗುಂಡಿನ ಚಕಮಕಿಯಲ್ಲಿ ಒಬ್ಬ ಭಯೋತ್ಪಾದಕನನ್ನು ಹತ್ಯೆ ಮಾಡಲಾಗಿದೆ. ಉಗ್ರರಿಂದ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಮೃತ ಭಯೋತ್ಪಾದಕನನ್ನು ಆಸಿಫ್ ಅಲಿ ಎಂದು ಗುರುತಿಸಲಾಗಿದೆ. ಈತ ಕುಖ್ಯಾತ ಕಾನೂನುಬಾಹಿರ ಕಮಾಂಡರ್ ಇನಾಮುಲ್ಲಾ ಅವರ ನಿಕಟ ಸಹಚರರಾಗಿದ್ದ. ಈ ಹತ ಉಗ್ರ ಬಹು ಬಾಂಬ್ ಸ್ಫೋಟಗಳಲ್ಲಿ ಭಾಗಿಯಾಗಿದ್ದಾರೆಂದು ಹೇಳಲಾದ ಹೈ ಪ್ರೊಫೈಲ್ ಭಯೋತ್ಪಾದಕ ಎಂದು ತಿಳಿಸಿದೆ.

# ಇಂಡಿಯನ್ ಓವರ್‌ಸೀಸ್ ಬ್ಯಾಂಕ್ ದರೋಡೆ ಪ್ರಕರಣ: ಇಬ್ಬರು ಆರೋಪಿಗಳನ್ನು ಎನ್‌ಕೌಂಟರ್ ಮಾಡಿದ ಯುಪಿ ಪೊಲೀಸರು

ಲಖನೌ: ಲಖನೌದ ಚಿನ್‌ಹಾಟ್‌ನಲ್ಲಿರುವ ಇಂಡಿಯನ್ ಓವರ್‌ಸೀಸ್ ಬ್ಯಾಂಕ್‌ನಲ್ಲಿ ಕಳ್ಳತನ ಮಾಡಿದ್ದ ಗ್ಯಾಂಗ್‌ನ ಇಬ್ಬರು ಆರೋಪಿಗಳನ್ನು ಉತ್ತರಪ್ರದೇಶ ಪೊಲೀಸರು ಎನ್‌ಕೌಂಟರ್ ಮಾಡಿದ್ದಾರೆ. ಇವರನ್ನು ಸೋಬಿಂದ್ ಕುಮಾರ್ ಮತ್ತು ಸನ್ನಿ ದಯಾಲ್ ಎಂದು ಗುರುತಿಸಲಾಗಿದೆ.

ಲಖನೌ ಮತ್ತು ಘಾಜಿಪುರದಲ್ಲಿ ಈ ಎನ್‌ಕೌಂಟರ್ ನಡೆದಿದೆ. ಇಬ್ಬರೂ ದುಷ್ಕರ್ಮಿಗಳು ಬಿಹಾರದ ಮುಂಗೇರ್ ನಿವಾಸಿಗಳು ಎಂದು ಉತ್ತರಪ್ರದೇಶ ಪೊಲೀಸರು ತಿಳಿಸಿದ್ದಾರೆ.

ಲಖನೌ ಬ್ಯಾಂಕ್ ಕಳ್ಳತನದಲ್ಲಿ ಭಾಗಿಯಾಗಿರುವ ಆರೋಪಿಗಳು ಕಿಸಾನ್ ಪಥ್ ಮೂಲಕ ಸಾಗುತ್ತಿರುವ ಬಗ್ಗೆ ಯುಪಿ ಪೊಲೀಸರಿಗೆ ಖಚಿತ ಮಾಹಿತಿ ಬಂದಿತ್ತು. ಸೋಮವಾರ ರಾತ್ರಿ, ಚಿನ್ಹತ್ ಪೊಲೀಸ್ ಮತ್ತು ಅಪರಾಧ ವಿಭಾಗದ ತಂಡವು ಮುತ್ತಿಗೆ ಹಾಕಿ ದುಷ್ಕರ್ಮಿಗಳನ್ನು ಬಂಧಿಸಲು ಪ್ರಯತ್ನಿಸಿತು. ಆದರೆ, ಆರೋಪಿಗಳು ಪೊಲೀಸರ ಮೇಲೆ ಗುಂಡು ಹಾರಿಸಿದ್ದರು. ಇದಕ್ಕೆ ಪ್ರತೀಕಾರವಾಗಿ ಪೊಲೀಸರು ಹಾರಿಸಿದ ಗುಂಡಿಗೆ ದುಷ್ಕರ್ಮಿಯೊಬ್ಬ ಗಾಯಗೊಂಡಿದ್ದು, ಅವರನ್ನು ಲೋಹಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಆತ ಮೃತಪಟ್ಟಿರುವುದಾಗಿ ವೈದ್ಯರು ಘೋಷಿಸಿದರು. ಆರೋಪಿಯನ್ನು ಸೋಬಿಂದ್ ಕುಮಾರ್ ಎಂದು ಗುರುತಿಸಲಾಗಿದೆ. ಈತನಿಂದ 25,000 ರೂ. ಹಾಗೂ ಅಪಾರ ಪ್ರಮಾಣದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಸೋಬಿಂದ್ ಬಿಹಾರದ ಮುಂಗೇರ್ ನಿವಾಸಿ ಎಂದು ಪೊಲೀಸರು ತಿಳಿಸಿದ್ದಾರೆ.



ಘಾಜಿಪುರದಲ್ಲಿ ಮತ್ತೊಬ್ಬ ಆರೋಪಿ ಎನ್‌ಕೌಂಟರ್; ಮತ್ತೊಂದು ಕಡೆ ಬ್ಯಾಂಕ್ ಕಳ್ಳತನದಲ್ಲಿ ಭಾಗಿಯಾಗಿದ್ದ ಸನ್ನಿ ದಯಾಳ್ ನನ್ನು ಮಂಗಳವಾರ ಮುಂಜಾನೆ ಗಾಜಿಪುರ ಪೊಲೀಸರು ಎನ್ ಕೌಂಟರ್ ಮಾಡಿದ್ದಾರೆ. ತಪಾಸಣೆ ವೇಳೆ ಇಬ್ಬರು ಶಂಕಿತರು ಬೈಕ್‌ನಲ್ಲಿ ಮುಖವನ್ನು ಮರೆ ಮಾಚಿಕೊಂಡು ತೆರಳುತ್ತಿರುವುದು ಬಾರಾ ಔಟ್‌ಪೋಸ್ಟ್ ಬಳಿ ಕಂಡುಬಂದಿತ್ತು. ಈ ವೇಳೆ, ಶಂಕಿತರನ್ನು ತಡೆಯಲು ಪ್ರಯತ್ನಿಸಲಾಗಿತ್ತು. ಆದರೆ, ಇಬ್ಬರೂ ಪೊಲೀಸರ ಮೇಲೆಯೇ ಬೈಕ್ ಹತ್ತಿಸಲು ನೋಡಿದ್ದರು. ಆ ಬಳಿಕ ಅವರು ಬಿಹಾರ ಗಡಿಯತ್ತ ಅತಿವೇಗದಲ್ಲಿ ಎಸ್ಕೇಪ್ ಆಗುತ್ತಿದ್ದರು. ಈ ವೇಳೆ ಪೊಲೀಸರು ಅವರನ್ನು ಚೇಸ್ ಮಾಡಿದರು, ಆಗ ಇಬ್ಬರೂ ಪೊಲೀಸ್ ತಂಡದ ಮೇಲೆ ಗುಂಡು ಹಾರಿಸಿದ್ದಾರೆ. ಪ್ರತಿಯಾಗಿ ಪೊಲೀಸರು ನಡೆಸಿದ ಗುಂಡಿನ ದಾಳಿಯಲ್ಲಿ ಸನ್ನಿ ದಯಾಳ್ ಮೃತಪಟ್ಟಿದ್ದಾನೆ. ಈ ವೇಳೆ ಸನ್ನಿ ದಯಾಳ್ ನಿಂದ ಚಿನ್ನಾಭರಣ ಹಾಗೂ ನಗದು ವಶಪಡಿಸಿಕೊಳ್ಳಲಾಗಿದೆ.

ಬ್ಯಾಂಕ್ ನಲ್ಲಿ ಕಳ್ಳತನ ಮಾಡಿರುವ ಎಲ್ಲ ಆರೋಪಿಗಳ ಪತ್ತೆಗೆ ತೀವ್ರ ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ಕಾನೂನು ಮತ್ತು ಸುವ್ಯವಸ್ಥೆ ಎಡಿಜಿ ಅಮಿತಾಬ್ ಯಶ್ ತಿಳಿಸಿದ್ದಾರೆ.

ಇಂಡಿಯನ್ ಓವರ್‌ಸೀಸ್ ಬ್ಯಾಂಕ್ ನಲ್ಲಿ ಲಾಕರ್‌ಗಳ ಕಳ್ಳತನ: ಶನಿವಾರ ಲಖನೌದ ಚಿನ್‌ಹತ್‌ನಲ್ಲಿರುವ ಇಂಡಿಯನ್ ಓವರ್‌ಸೀಸ್ ಬ್ಯಾಂಕ್‌ಗೆ ನುಗ್ಗಿ 42 ಲಾಕರ್‌ಗಳನ್ನು ಲೂಟಿ ಮಾಡಲಾಗಿತ್ತು. ಬ್ಯಾಂಕ್ ನಲ್ಲಿ ನಡೆದ ಕಳ್ಳರ ಕೃತ್ಯ ಸಿಸಿಟಿವಿಯಲ್ಲಿ ಸೆರೆಯಾಗಿತ್ತು. ಒಂದು ಗಂಟೆಗೂ ಹೆಚ್ಚು ಕಾಲ ದುಷ್ಕರ್ಮಿಗಳು ಬ್ಯಾಂಕ್ ಒಳಗೆ ಇದ್ದು ಕಳ್ಳತನ ಮಾಡಿರುವುದು ಬಯಲಾಗಿತ್ತು. ಭಾನುವಾರ ಬೆಳಗ್ಗೆ ಬ್ಯಾಂಕ್ ಗೆ ರಜೆ ಇದ್ದುದರಿಂದ ಯಾವುದೇ ಮಾಹಿತಿ ಸಿಕ್ಕಿರಲಿಲ್ಲ. ಮಧ್ಯಾಹ್ನದ ವೇಳೆಗೆ ಅಕ್ಕಪಕ್ಕದ ಜನರು ಬ್ಯಾಂಕಿನ ಹಿಂಭಾಗದ ಗೋಡೆ ಕೊರೆದಿರುವುದನ್ನು ನೋಡಿ ಪೊಲೀಸರಿಗೆ ಮಾಹಿತಿ ನೀಡಿದ್ದರು.

ಭಾನುವಾರ ತಡರಾತ್ರಿ ಪೊಲೀಸರು ಚಿನ್ಹತ್‌ನ ಲೌಲೈ ಗ್ರಾಮದ ಬಳಿ ಕಳ್ಳತನದಲ್ಲಿ ಭಾಗಿಯಾಗಿದ್ದ ಮೂವರು ಅಪರಾಧಿಗಳನ್ನು ಬಂಧಿಸಿದ್ದರು. ಈ ವೇಳೆ ಕ್ರಿಮಿನಲ್ ಅರವಿಂದ್ ನನ್ನು ಪೊಲೀಸರು ಎನ್ ಕೌಂಟರ್ ಮಾಡಿದ್ದರು. ಮತ್ತೊಬ್ಬ ಆರೋಪಿ ಗಾಯಗೊಂಡಿದ್ದ. ಈ ಸಂದರ್ಭದಲ್ಲಿ ಬಿಹಾರದ ಮುಂಗೇರ್ ನಿವಾಸಿಗಳಾದ ಅರವಿಂದ್, ಬಲರಾಮ್ ಮತ್ತು ಕೈಲಾಶ್ ಬಿಂದ್ ಎಂಬುವರನ್ನು ಪೊಲೀಸರು ಬಂಧಿಸಿದ್ದು, ಸುಮಾರು ಒಂದು ಕಿಲೋಗ್ರಾಂ ಚಿನ್ನವನ್ನು ವಶಪಡಿಸಿಕೊಂಡಿದ್ದಾರೆ. ಮತ್ತೊಂದು ಕಡೆ ಅರವಿಂದ್ ಸಹಚರರು ಹಾಗೂ ಇನ್ನೊಂದು ಕಾರಿನಲ್ಲಿ ತೆರಳುತ್ತಿದ್ದ ದುಷ್ಕರ್ಮಿಗಳು ಪರಾರಿಯಾಗಿದ್ದರು.

# ದೇಶದ ಮೊದಲ ವಂದೇ ಭಾರತ ಸ್ಲೀಪರ್ ಕೋಚ್ ರೈಲಿನ ಟ್ರಯಲ್ ರನ್ ಯಶಸ್ವಿ

ಮಧ್ಯಪ್ರದೇಶ: ಸುದೀರ್ಘ ಕಾಯುವಿಕೆಯ ನಂತರ ದೇಶದ ಮೊದಲ ವಂದೇ ಭಾರತ್ ಸ್ಲೀಪರ್ ಕೋಚ್ ರೈಲು ಹಳಿಗಳ ಮೇಲೆ ಓಡಿದೆ. ಪ್ರಯಾಣಿಕರ ಬಹು ನಿರೀಕ್ಷಿತ ರೈಲು ಮಧ್ಯಪ್ರದೇಶದ ಖಜುರಾಹೊ ರೈಲು ವಿಭಾಗ ಮತ್ತು ಉತ್ತರ ಪ್ರದೇಶದ ಮಹೋಬಾ ರೈಲು ವಿಭಾಗಗಳ ನಡುವೆ ಶನಿವಾರ ಮತ್ತು ಭಾನುವಾರ ಎರಡು ದಿನಗಳ ಕಾಲ ಪರೀಕ್ಷಾರ್ಥವಾಗಿ ಯಶಸ್ವಿ ಸಂಚಾರ ನಡೆಸಿತು. ದೇಶದ ಮೊದಲ ವಂದೇ ಭಾರತ್ ಸ್ಲೀಪರ್ ಕೋಚ್ ರೈಲು ಪ್ರಯಾಣವನ್ನು ಫೀಲ್ಡ್ ಟ್ರಯಲ್ ರನ್ ಆಗಿ ಪೂರ್ಣಗೊಳಿಸಿದೆ.

**ಕಾರ್ಯಕ್ಷಮತೆ ಟೆಸ್ಟ್:** ಶುಕ್ರವಾರ ಸ್ಲೀಪರ್ ವಂದೇ ಭಾರತ್ ಎಕ್ಸ್‌ಪ್ರೆಸ್‌ನ ಮೊದಲ ರೇಕ್ ಮಹೋಬಾವನ್ನು ತಲುಪಿತು. ಶನಿವಾರ ಮೊದಲ ಬಾರಿಗೆ ಟ್ರಯಲ್ ರನ್ ನಡೆಸಿ, ಕಾರ್ಯಕ್ಷಮತೆಯ ಪರೀಕ್ಷೆ ನಡೆಸಲಾಯಿತು. ಮಹೋಬಾ ಮತ್ತು ಖಜುರಾಹೊ ರೈಲು ವಿಭಾಗದ ನಡುವೆ ಈ ಪರೀಕ್ಷಾರ್ಥ ಸಂಚಾರ ಕೈಗೊಳ್ಳಲಾಗಿತ್ತು. ಸ್ಲೀಪರ್ ಕೋಚ್‌ರೈಲಿನ ಯಶಸ್ವಿ ಪ್ರಯೋಗವನ್ನು ಭಾನುವಾರ ಮತ್ತೊಮ್ಮೆ ನಡೆಸಲಾಯಿತು.





**ಗಂಟೆಗೆ 160–200 ಕಿಮೀ ವೇಗ:** ಟ್ರಯಲ್ ರನ್ ಸಮಯದಲ್ಲಿ ಎಸ್‌ಆರ್‌ಡಿಒ ಜೊತೆಗೆ, ರೈಲ್ವೇಸ್ ಮತ್ತು ಐಸಿಎಫ್ ಚೆನ್ನೈನ ತಾಂತ್ರಿಕ ತಂಡವೂ ಉಪಸ್ಥಿತವಿತ್ತು.

ಸ್ಲೀಪರ್ ವಂದೇ ಭಾರತ್ ಎಕ್ಸ್‌ಪ್ರೆಸ್‌ನ ತಾಂತ್ರಿಕ ಅಂಶಗಳ ಜತೆ ಜತೆಗೆ, ಅದರ ವೇಗ, ಉಪಕರಣಗಳ ತಾಂತ್ರಿಕ ಕಾರ್ಯಕ್ಷಮತೆಗಳ ಬಗ್ಗೆ ಕೂಲಂಕಷವಾಗಿ ಪರಿಶೀಲನೆ ನಡೆಸಲಾಯಿತು. ಇದೇ ವೇಳೆ, ರಕ್ಷಾಕವಚ ರಕ್ಷಣಾ ವ್ಯವಸ್ಥೆಯ ಪ್ರಾತ್ಯಕ್ಷಿಕೆಯೂ ನಡೆಯಿತು. ಶನಿವಾರದ ಟ್ರಯಲ್ ರನ್ ವೇಳೆ ವಂದೇ ಭಾರತ ಸ್ಲೀಪರ್ ಕೋಚ್ ಗಂಟೆಗೆ 115 ಕಿಲೋಮೀಟರ್ ವೇಗದಲ್ಲಿ ಹಳಿ ಮೇಲೆ ಓಡಿದರೆ, ಭಾನುವಾರದ ಪ್ರಯೋಗದ ವೇಳೆ, ಗಂಟೆಗೆ 130 ಕಿಲೋಮೀಟರ್ ವೇಗದಲ್ಲಿ ಪರೀಕ್ಷೆ ಕೈಗೊಳ್ಳಲಾಗಿದೆ.

ಸಾಮಾನ್ಯವಾಗಿ ಸ್ಲೀಪರ್ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಗಂಟೆಗೆ 160 ರಿಂದ 200 ಕಿಮೀ ವೇಗದಲ್ಲಿ ಸಂಚರಿಸಲಿದೆ ಎಂದು ನಂಬಲಾಗಿದೆ.



ಸಿದ್ಧಗೊಳ್ಳುತ್ತಿವೆ 10 ವಂದೇ ಭಾರತ್ ಸ್ಲೀಪರ್ ರೈಲು: ಪ್ರಸ್ತುತ ರೈಲ್ವೆಯಿಂದ 10 ವಂದೇ ಭಾರತ್ ಸ್ಲೀಪರ್ ರೈಲುಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. ರೈಲ್ವೆ ಇಲಾಖೆ ಮುಂಬರುವ ಸಮಯದಲ್ಲಿ ಭಾರತದಲ್ಲಿ 200 ವಂದೇ ಭಾರತ್ ಸ್ಲೀಪರ್ ರೈಲುಗಳನ್ನು ಪ್ರಾರಂಭಿಸಲು ಯೋಜಿಸಿದೆ. ಈ ರೈಲುಗಳು ದೀರ್ಘ ಮತ್ತು ಮಧ್ಯಮ ದೂರದ ಮಾರ್ಗಗಳಲ್ಲಿ ಕಾರ್ಯನಿರ್ವಹಿಸುತ್ತವೆ. ಇದು ಪ್ರಯಾಣಿಕರಿಗೆ ಆರಾಮದಾಯಕ ಪ್ರಯಾಣದ ಅನುಭವ ನೀಡುತ್ತದೆ.




## ಟೀಂ ಇಂಡಿಯಾಗೆ ಎಂಟ್ರಿಕೊಟ್ಟ ಕನ್ನಡಿಗ!


ಭಾರತದ ಆಟಗಾರ ಅಶ್ವಿನ್ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತರಾದ ಹಿನ್ನೆಲೆಯಲ್ಲಿ, ಅವರ ಸ್ಥಾನಕ್ಕೆ ಉಡುಪಿ ಮೂಲದ ಕನ್ನಡಿಗ ಯುವ ಆಟಗಾರ ತನುಷ್ ಕೋಟ್ಯಾನ್ ಅವರನ್ನು ತಂಡಕ್ಕೆ ಸೇರಿಸಲಾಗಿದೆ.



ಅಶ್ವಿನ್ ಸ್ಥಾನದಲ್ಲಿ ಯಜುವೇಂದ್ರ ಚಾಹಲ್ ಅಥವಾ ಅಕ್ಷರ್ ಪಟೇಲ್ ಆಡಬಹುದು ಎಂದು ನಿರೀಕ್ಷಿಸಲಾಗಿತ್ತು, ಆದರೆ ಎಲ್ಲರಿಗೂ ಅಚ್ಚರಿ ಮೂಡಿಸುವಂತೆ ತನುಷ್ ಕೋಟ್ಯಾನ್ ಸ್ಥಾನ ಪಡೆದಿದ್ದಾರೆ. 26 ವರ್ಷದ ತನುಷ್ ಕೋಟ್ಯಾನ್ ರಣಜಿ ಟ್ರೋಫಿ ಮತ್ತು ದುಲೀಪ್ ಟ್ರೋಫಿಯಲ್ಲಿ ಉತ್ತಮ ಪ್ರದರ್ಶನ ನೀಡಿದ್ದಾರೆ. 2023–24 ರ ರಣಜಿ ಟ್ರೋಫಿಯಲ್ಲಿ ಅವರು ಮುಂಬೈ ತಂಡದ ಪರ ಆಡಿದ್ದರು ಮತ್ತು ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ಗೆದ್ದಿದ್ದಾರೆ. ತನುಷ್ ಕೋಟ್ಯಾನ್ ಮೂಲತಃ ಉಡುಪಿ ಜಿಲ್ಲೆಯ ಪಾಂಗಳದವರು ನವೆಂಬರ್‌ನಲ್ಲಿ ನಡೆದ ಆಸ್ಟ್ರೇಲಿಯಾ 'ಎ' ತಂಡದ ವಿರುದ್ಧದ ಟೆಸ್ಟ್ ಪಂದ್ಯದಲ್ಲಿ 1 ವಿಕೆಟ್ ಪಡೆದಿದ್ದಲ್ಲದೆ 44 ರನ್ ಗಳಿಸಿದ್ದರು. ಬಲಗೈ ಸ್ಪಿನ್ ಬೌಲಿಂಗ್ ಮಾಡುವುದರ ಜೊತೆಗೆ ಬ್ಯಾಟಿಂಗ್‌ನಲ್ಲೂ ಉತ್ತಮ ಪ್ರದರ್ಶನ ನೀಡುವುದರಿಂದ ತನುಷ್ ಕೋಟ್ಯಾನ್‌ಗೆ ತಂಡದಲ್ಲಿ ಸ್ಥಾನ ಸಿಕ್ಕಿದೆ. ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಉತ್ತಮವಾಗಿ ಆಡಿರುವ ಇವರು 33 ಪಂದ್ಯಗಳಲ್ಲಿ 25.70 ಸರಾಸರಿಯಲ್ಲಿ 101 ವಿಕೆಟ್‌ಗಳನ್ನು ಪಡೆದಿದ್ದಾರೆ. ಬ್ಯಾಟಿಂಗ್‌ನಲ್ಲಿ 41.21 ಸರಾಸರಿ ಹೊಂದಿದ್ದಾರೆ. ವಾಷಿಂಗ್ಟನ್ ಸುಂದರ್, ಜಡೇಜಾ ತಂಡದಲ್ಲಿದ್ದಾರೆ. ಈ ಇಬ್ಬರು ಗಾಯ ಅಥವಾ ಇತರೆ ಕಾರಣಗಳಿಂದ ಆಡಲು ಸಾಧ್ಯವಾಗದಿದ್ದರೆ ತನುಷ್ ಕೋಟ್ಯಾನ್‌ಗೆ ಪ್ಲೇಯಿಂಗ್ ಇಲೆವೆನ್‌ನಲ್ಲಿ ಸ್ಥಾನ ಸಿಗಲಿದೆ.

## ಕ್ರೀಡಾ ರಾಯಭಾರಿಯಾಗಿ ನೀವು ಇಡೀ ದೇಶಕ್ಕೆ ಹೆಮ್ಮೆ ತಂದಿದ್ದೀರಿ

**ನವದೆಹಲಿ:** ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ ಭಾರತದ ಆರ್.ಅಶ್ವಿನ್‌ಗೆ ಪ್ರಧಾನಿ ನರೇಂದ್ರ ಮೋದಿ ಸುದೀರ್ಘ ಪತ್ರ ಬರೆದು, ಶುಭ ಹಾರೈಸಿದ್ದಾರೆ. ಅಶ್ವಿನ್‌ರನ್ನು ಕ್ರೀಡೆಯ ರಾಯಭಾರಿ ಎಂದು ಬಣ್ಣಿಸಿರುವ ಪ್ರಧಾನಿ, ನೀವು ಕುಟುಂಬ ಹಾಗೂ ದೇಶಕ್ಕೆ ಹೆಮ್ಮೆ ತಂದಿದ್ದೀರಿ ಎಂದು ಶ್ಲಾಘಿಸಿದ್ದಾರೆ.



ಪತ್ರದಲ್ಲಿ ಅಶ್ವಿನ್‌ರ 14 ವರ್ಷಗಳ ಕ್ರಿಕೆಟ್ ಬದುಕಿನ ಪ್ರಮುಖ ಕ್ಷಣ, ಸಾಧನೆಗಳನ್ನು ಮೆಲುಕು ಹಾಕಿದ್ದಾರೆ. ತಮ್ಮ ತಾಯಿ ಅನಾರೋಗ್ಯದಿಂದ ಆಸ್ಪತ್ರೆಗೆ ದಾಖಲಾಗಿದ್ದಾಗಲೂ ಅಶ್ವಿನ್ ಕ್ರಿಕೆಟ್ ಆಡಿದ್ದ ಘಟನೆಯನ್ನು ಉಲ್ಲೇಖಿಸಿ ಅವರ ತ್ಯಾಗ ಮತ್ತು ಬದ್ಧತೆ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

'ಕ್ರಿಕೆಟ್‌ನಿಂದ ನಿವೃತ್ತರಾಗುವ ದಿಢೀರ್ ನಿರ್ಧಾರ ಜಗತ್ತಿನೆಲ್ಲೆಡೆಯ ನಿಮ್ಮ ಅಭಿಮಾನಿಗಳಿ ಅಚ್ಚರಿ ತಂದಿದೆ. ನಿಮ್ಮಿಂದ ಎಲ್ಲರೂ ಮತ್ತಷ್ಟು ಆಫ್ ಬ್ರೇಕ್ ಬೌಲಿಂಗ್ ನಿರೀಕ್ಷೆಯಲ್ಲಿದ್ದಾಗ, ನೀವು ನಿವೃತ್ತಿಯ ಕೇರಮ್ ಬಾಲ್ ಎಸೆದು ಎಲ್ಲರನ್ನೂ ಚಕಿತಗೊಳಿಸಿದ್ದೀರಿ. ಭಾರತಕ್ಕೆ ಇಷ್ಟು ವರ್ಷಗಳ ಕಾಲ ಅದ್ಭುತ ಪ್ರದರ್ಶನ ನೀಡಿದ್ದೀರಿ. ಇದೀಗ ಈ ನಿರ್ಧಾರ ತಳೆಯುವುದು ಬಹಳ ಕಠಿಣ ಎಂಬುದು ಎಲ್ಲರಿಗೂ ತಿಳಿದಿದೆ' ಎಂದಿದ್ದಾರೆ. ಈ ಸಂದರ್ಭ ನಾನು ನಿಮ್ಮ ಹೆತ್ತವರು, ನಿಮ್ಮ ಪತ್ನಿ ಪ್ರೀತಿ ಮತ್ತು ಪುತ್ರಿಗೂ ಶುಭಾಶಯ ತಿಳಿಸುತ್ತೇನೆ. ಅವರ ಪ್ರೋತ್ಸಾಹ ಮತ್ತು ತ್ಯಾಗ ನಿಮ್ಮನ್ನು ಒಬ್ಬ ಉತ್ತಮ ಕ್ರಿಕೆಟರ್ ಮತ್ತು ವ್ಯಕ್ತಿಯನ್ನಾಗಿ ಬೆಳೆಸಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

# ಮೇಕಪ್ ಇಲ್ಲದೆ ನಟಿಸಿದ್ದ ಐಶ್ವರ್ಯಾ

> ನನ್ನ ನಾಯಕಿಯರಿಗೆ ಮೇಕಪ್ ಬಳಕೆಯನ್ನು ಮಿತಿಗೊಳಿಸುವಂತೆ ನಾನು ಯಾವಾಗಲೂ ಕೇಳಿಕೊಳ್ಳುತ್ತೇನೆ. ಏಕೆಂದರೆ ಅದು ನಿಜವಾದ ಭಾವನೆಗಳನ್ನು ತರುತ್ತದೆ.



## ಆ ಸಿನಿಮಾ ಸೂಪರ್ ಹಿಟ್

ಐಶ್ವರ್ಯಾ ರೈ ಅವರ ಸೌಂದರ್ಯಕ್ಕೆ ಯಾರೂ ಸಾಟಿ ಇಲ್ಲ. ಬಾಲಿವುಡ್‌ನಲ್ಲಿ ಅವರು ಮಾಡಿರೋ ಹೆಸರು ತುಂಬಾನೇ ದೊಡ್ಡದು. ಅವರಿಗೆ ವಿಶ್ವ ಮಟ್ಟದಲ್ಲಿ ಖ್ಯಾತಿ ಸಿಕ್ಕಿದೆ. ಅವರು ಇತ್ತೀಚೆಗೆ ಸಿನಿಮಾ ಮಾಡೋದು ಕಡಿಮೆ ಆಗಿದೆ. ಆದರೆ, ಮೊದಲು ಈ ರೀತಿ ಇರಲಿಲ್ಲ. ಅವರು ಹಲವು ಸೂಪರ್ ಹಿಟ್ ಚಿತ್ರಗಳನ್ನು ನೀಡಿದ್ದಾರೆ.



ಈ ಪೈಕಿ 'ತಾಲ್' ಚಿತ್ರ ಕೂಡ ಒಂದು. ಅನಿಲ್ ಕಪೂರ್, ಅಕ್ಷಯ್ ಖನ್ನಾ, ಐಶ್ವರ್ಯಾ ರೈ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡರೆ, ಅಮ್ರೀಶ್ ಪುರಿ, ಅಲೋಕ್ ನಾಥ್ ಪೋಷಕ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು.

1999ರ ಆಗಸ್ಟ್ 13ರಂದು 'ತಾಲ್' ರಿಲೀಸ್ ಆಯಿತು. ಸಂಗೀತ ಕೂಡ ಪ್ರಾಮುಖ್ಯತೆ ಪಡೆದಿತ್ತು. 11 ಕೋಟಿ ರೂಪಾಯಿ ಬಜೆಟ್‌ನ ಈ ಚಿತ್ರ ಆಗಿನ ಕಾಲದಲ್ಲೇ 51 ಕೋಟಿ ರೂಪಾಯಿ ಬಾಚಿಕೊಂಡಿತ್ತು. ಸಿನಿಮಾ ಉದ್ದಕ್ಕೂ ಐಶ್ವರ್ಯಾ ಅವರು ಎಲ್ಲಿಯೂ ಮೇಕಪ್ ಮಾಡಿಕೊಂಡಿರಲಿಲ್ಲ.

ಚಿತ್ರದ ನಿರ್ದೇಶಕ ಸುಭಾಷ್ ಘಾಯ್ ಅವರೇ ಈ ಚಿತ್ರ ನಿರ್ಮಾಣ ಮಾಡಿದ್ದರು. 'ನನ್ನ ನಾಯಕಿಯರಿಗೆ ಮೇಕಪ್ ಬಳಕೆಯನ್ನು ಮಿತಿಗೊಳಿಸುವಂತೆ ನಾನು ಯಾವಾಗಲೂ ಕೇಳಿಕೊಳ್ಳುತ್ತೇನೆ. ಏಕೆಂದರೆ ಅದು ನಿಜವಾದ ಭಾವನೆಗಳನ್ನು ತರುತ್ತದೆ. ತಾಲ್ ಚಿತ್ರದಲ್ಲಿ ಐಶ್ವರ್ಯ ಅವರಿಗೇ ಮೇಕಪ್ ಮಾಡೋದು ಬೇಡ ಎಂದಿದ್ದೆ. ಅವರು ಎಲ್ಲಿಯೂ ಮೇಕಪ್ ಹಾಕಿರಲಿಲ್ಲ' ಎಂದಿದ್ದಾರೆ ಅವರು. 'ಐಶ್ವರ್ಯಾ ಬಳಿ ಸ್ವಲ್ಪವೂ ಮೇಕಪ್ ಮಾಡದಂತೆ ನಾನು ಕೋರಿದ್ದೆ' ಎಂದಿದ್ದಾರೆ ಸುಭಾಷ್. ಕೊನೆಗೂ ನಿರ್ದೇಶಕರ ಕೋರಿಕೆ ಈಡೇರಿತು. ಐಶ್ವರ್ಯಾ ಅವರು ಮೇಕಪ್ ಇಲ್ಲದೆ ಮತ್ತಷ್ಟು ಸುಂದರವಾಗಿ ಕಾಣಿಸಿದರು. ಸಿನಿಮಾ ಸೂಪರ್ ಹಿಟ್ ಆಯಿತು. ನಿರ್ದೇಶಕರಿಗೂ ಈ ವಿಚಾರ ಸಾಕಷ್ಟು ಅಚ್ಚರಿ ತಂದಿತ್ತು. ಜನರು ಸಿನಿಮಾ ನೋಡಿ ಮೆಚ್ಚಿಕೊಂಡರು. ಈ ಚಿತ್ರ ಐಶ್ವರ್ಯಾ ವೃತ್ತಿ ಜೀವನದಲ್ಲಿ ವಿಶೇಷ ಸಿನಿಮಾ ಎನಿಸಿಕೊಂಡಿದೆ.ಐಶ್ವರ್ಯಾ ರೈ ಅವರು ಕುಟುಂಬದ ಜೊತೆ ಹಾಯಾಗಿ ಸಮಯ ಕಳೆಯುತ್ತಿದ್ದಾರೆ. ಅವರು ಅಭಿಷೇಕ್ ಬಚ್ಚನ್ ಜೊತೆ ಇತ್ತೀಚೆಗೆ ಕಾಣಿಸಿಕೊಂಡಿದ್ದರು. ಈ ಫೋಟೋ ಹಾಗೂ ವಿಡಿಯೋಗಳು ಸೋಶಿಯಲ್

# ಸಾವಿನ ಕದ ತಟ್ಟಿದ್ದ ಹೃತಿಕ್



ಹೃತಿಕ್ ರೋಷನ್ ಅವರು ಬಾಲಿವುಡ್‌ನ ಬೇಡಿಕೆಯ ಹೀರೋ. ಹಲವು ಸೂಪರ್ ಹಿಟ್ ಚಿತ್ರಗಳನ್ನು ಅವರು ನೀಡಿದ್ದಾರೆ. ಈ ಪೈಕಿ 'ಕ್ರಿಶ್' ಚಿತ್ರ ಕೂಡ ಒಂದು. 'ಕೊಯಿ ಮಿಲ್ ಗಯಾ' ಚಿತ್ರದ ಮುಂದುವರಿದ ಭಾಗವಾಗಿ ಈ ಸಿನಿಮಾ ಮೂಡಿ ಬಂದಿತ್ತು. ಈ ಚಿತ್ರದ ಶೂಟ್ ವೇಳೆ ಹೃತಿಕ್ ರೋಷನ್ ಅವರು ಸಾವಿನ ಕದ ತಟ್ಟಿ ಬಂದಿದ್ದರು. ಅದೃಷ್ಟವಶಾತ್ ಅವರು ಬಚಾವ್ ಆಗಿದ್ದರು.

'ಕ್ರಿಶ್' ಚಿತ್ರವನ್ನು ಹೃತಿಕ್ ತಂದೆ ರಾಕೇಶ್ ರೋಷನ್ ನಿರ್ದೇಶನ ಮಾಡಿದ್ದರು. ಇದು ಸೂಪರ್ ಹಿಟ್ ಆಯಿತು. ಈ ಚಿತ್ರದಲ್ಲಿ ಸಾಕಷ್ಟು ಆಕ್ಷನ್ ದೃಶ್ಯ ಇತ್ತು. ಈ ಚಿತ್ರದ ಶೂಟ್ ಮಾಡುವಾಗ 2005ರಲ್ಲಿ ಒಂದು ದುರಂತ ನಡೆಯುವುದರಲ್ಲಿ ಇತ್ತು. ಅದರಿಂದ ಹೃತಿಕ್ ಬಚಾವ್ ಆಗಿದ್ದರು.

'ಕ್ರಿಶ್' ಸಿನಿಮಾ ಶೂಟ್ ಮಾಡುವಾಗ 50 ಅಡಿ ಕಟ್ಟಡದಿಂದ ಕೆಳಕ್ಕೆ ಬೀಳುವವರಾಗಿದ್ದರು. ಅದೃಷ್ಟವಶಾತ್ ಇದರಿಂದ ಅವರು ಬಚಾವ್ ಆದರು. ಒಂದು ಕಟ್ಟಡದಿಂದ ಮತ್ತೊಂದು ಕಟ್ಟಡಕ್ಕೆ ಜಿಗಿಯುವ ದೃಶ್ಯ ಇತ್ತು. ಈ ವೇಳೆ ಸೇಫ್ ಕೇಬಲ್ ಧರಿಸಿದ್ದರು. ಆದರೆ, ಕೇಬಲ್ ಕಟ್ ಆಗಿತ್ತು. ಅದೃಷ್ಟವಶಾತ್ ಮುಂಜಾಗ್ರತ ಕ್ರಮವಾಗಿ ಹಾಕಿದ್ದ ನೆಟ್ ಮೇಲೆ ಹೃತಿಕ್ ಬಿದ್ದರು. ಅದು ಇಲ್ಲದಿದ್ದರೆ ಹೃತಿಕ್ ಸಾವಿನ ದಡ ಸೇರುತ್ತಿದ್ದರು.

ಈ ಘಟನೆ ವೇಳೆ ಹೃತಿಕ್ ಬೆನ್ನಿನ ಭಾಗಕ್ಕೆ ಪೆಟ್ಟಾಗಿತ್ತು. ಕೆಲವು ದಿನಗಳ ಕಾಲ ಅವರು ವಿಶ್ರಾಂತಿ ಪಡೆದರು. ನಂತರ ಅವರು ನಟನಗೆ ಮರಿದರು. ಈ ಸಿನಿಮಾ ರಿಲೀಸ್ ಆಗಿ ಯಶಸ್ಸು ಕಂಡಿತ್ತು. ಸದ್ಯ ಹೃತಿಕ್ ರೋಷನ್ ಅವರು 'ಕ್ರಿಶ್ 4' ಸಿನಿಮಾದಲ್ಲಿ ನಟಿಸಬೇಕಿದೆ. 'ಕ್ರಿಶ್ 4' ಸಿನಿಮಾದ ನಿರ್ದೇಶನವನ್ನು ರಾಕೇಶ್ ಮಾಡಬೇಕಿತ್ತು. ಆದರೆ, ಅವರಿಗೆ ವಯಸ್ಸಾಗಿರುವುದರಿಂದ ಈಗಾಗಲೇ ನಿರ್ದೇಶನಕ್ಕೆ ಬ್ರೇಕ್ ಹಾಕಿದ್ದಾರೆ. 'ಕ್ರಿಶ್ 4' ಚಿತ್ರವನ್ನು ಅವರೇ ನಿರ್ಮಾಣ ಮಾಡಲಿದ್ದಾರೆ. ಆದರೆ, ಈ ಚಿತ್ರವನ್ನು ಯಾರು ನಿರ್ದೇಶನ ಮಾಡುತ್ತಾರೆ ಎಂಬುದು ಇನ್ನೂ ನಿರ್ಧಾರ ಆಗಿಲ್ಲ. ಸದ್ಯ ಅವರು 'ವಾರ್ 2' ಸಿನಿಮಾ ಕೆಲಸಗಳಲ್ಲಿ ಬ್ಯುಸಿ ಇದೆ.



# ರಶ್ಮಿಕಾ 'ಆ ಸೀನ್ ಕಂಫರ್ಟ್ ಅನಿಸಲಿಲ್ಲ'


ಟಾಲಿವುಡ್ ಐಕಾನ್ ಸ್ಟಾರ್ ಅಲ್ಲು ಅರ್ಜುನ್ ಮತ್ತು ರಶ್ಮಿಕಾ ಮಂದಣ್ಣ ಅಭಿನಯದ 'ಪುಷ್ಪ 2: ದಿ ರೂಲ್' ಸಿನಿಮಾ ಸುತ್ತಲಿರುವ ಸದ್ದು ಮುಂದುವರಿದಿದೆ. ಪ್ರಮುಖ ಪಾತ್ರಗಳ ಅಮೋಘ ಅಭಿನಯದಿಂದ ಹಿಡಿದುಆ್ಯಕ್ಷನ್ ಸೀಕ್ವೆನ್ಸ್, ಜಾತ್ರಾ ದೃಶ್ಯ ಮತ್ತು ಆಕರ್ಷಕ ಹಾಡುಗಳಿಂದ ಪುಷ್ಪ 2 ಪ್ರೇಕ್ಷಕರ ಚರ್ಚೆಯ ವಿಷಯವಾಗಿದೆ.

ಹೆಚ್ಚು ಸದ್ದು ಮಾಡಿದ ಸಿನಿಮಾದ ಕಂಟೆಂಟ್ ಅಂದ್ರೆ ಅದು ಪೀಲಿಂಗ್ಸ್ ಹಾಡು. ಕೊನೆಗೆ ಚಿತ್ರೀಕರಿಸಲ್ಪಟ್ಟ ಮತ್ತು ಸಿನಿಮಾ ಬಿಗ್ ಸ್ಕ್ರೀನ್‌ಗೆ ಎಂಟ್ರಿಕೊಡುವ ಕೆಲವೇ ದಿನಗಳ ಮುನ್ನ ಬಿಡುಗಡೆಯಾದ ಹಾಡಿದು. ಶೀರ್ಷಿಕೆಯೇ ಸೂಚಿಸುವಂತೆ, ಈ ಹಾಡು ಭಾವನೆಗಳ ಬಗ್ಗೆಯಾಗಿದೆ.

ಶ್ರೀವಲ್ಲಿ ಪಾತ್ರದಲ್ಲಿ ರಶ್ಮಿಕಾ ಅವರು ಅಲ್ಲು ಅರ್ಜುನ್ ಅವರ ಜೊತೆ ಸಖತ್ ರೊಮ್ಯಾಂಟಿಕ್ ಆಗಿ ಕಾಣಿಸಿಕೊಂಡಿದ್ದಾರೆ. ಇತ್ತೀಚಿನ ಸಂದರ್ಶನವೊಂದರಲ್ಲಿ, ಲೈಟ್ ಸೆನ್ಸುವಲ್ ಟೋನ್ ಹೊಂದಿರುವ ಹಾಡಿಗೆ ನೃತ್ಯ ಮಾಡೋದು ಸುಲಭದ ಕೆಲಸವಲ್ಲ ಎಂಬುದನ್ನು ನಟಿ ಒಪ್ಪಿಕೊಂಡಿದ್ದಾರೆ.

ಹಾಡಿನ ರಿಹರ್ಸಲ್ ಮತ್ತು ತಮ್ಮ ಕಂಫರ್ಟ್ ಝೋನ್‌ನಿಂದ ಹೊರಬಂದ ಅನುಭವದ ಬಗ್ಗೆ ನಟಿಗೆ ಪ್ರಶ್ನೆ ಎದುರಾಯಿತು. ಪ್ರತಿಕ್ರಿಯಿಸಿದ ಅವರು, ಸಿನಿಮಾ ಬಿಡುಗಡೆಗೆ ಕೆಲವೇ ದಿನಗಳ ಮೊದಲು ಈ ಹಾಡನ್ನು ಚಿತ್ರೀಕರಿಸಲಾಗಿತ್ತು ಎಂಬುದನ್ನು ಬಹಿರಂಗಪಡಿಸಿದರು. ಜೊತೆಗೆ, ಈ ಹಾಡಿನ ಚಿತ್ರೀಕರಣ ನಾಲ್ಕೈದು ದಿನಗಳಲ್ಲಿ ನಡೆದಿದೆ ಎಂದು ತಿಳಿಸಿದರು.

"ಇದು ಆಶ್ಚರ್ಯಕರವಾಗಿತ್ತು. ಏಕೆಂದರೆ, ನಾನು ರಿಹರ್ಸಲ್ ವಿಡಿಯೋವನ್ನು ನೋಡಿದ ಕ್ಷಣ, 'ಭೂಮಿಯ ಮೇಲೆ ಏನಾಗುತ್ತಿದೆ? ಏನು ನಡೆಯುತ್ತಿದೆ?' ಎಂದು ನಾನು ಭಾವಿಸಿದೆ" ಎಂದು ನಟಿ ನಗುತ್ತಾ ತಿಳಿಸಿದರು. ಹೆಚ್ಚಿನ ಭಾಗದಲ್ಲಿ ಅಲ್ಲು ಅರ್ಜುನ್ ಅವರ ಮೇಲೆ (ಮೇಲೇರಿ) ಡ್ಯಾನ್ಸ್ ಮಾಡಿದ್ದೇನೆ, ಅದು ಇನ್ನಷ್ಟು ಸವಾಲಾಗಿ ಪರಿಣಮಿಸಿತು ಎಂದು ವಿವರಿಸಿದರು.



ಜನಪ್ರಿಯ ನಟಿ ತಮಗಿದ್ದ ಬಾಲ್ಯದ ಫೋಬಿಯಾ ಬಗ್ಗೆಯೂ ಬಹಿರಂಗಪಡಿಸಿದರು. "ನನ್ನನ್ನು ಎತ್ತುವುದು ನನಗೆ ಕಂಫರ್ಟ್ ಆಗೋದಿಲ್ಲ. ಇಲ್ಲಿ, ಈ ಹಾಡಿನಲ್ಲಿ ನನ್ನನ್ನು ಎತ್ತಲಾಗಿದೆ ಎಂದು ತಿಳಿಸಿದರು. ಇದನ್ನು ಹೇಗೆ ನಿರ್ವಹಿಸುತ್ತೇನೆ ಎಂಬುದರ ಕುರಿತು ಅನುಮಾನವಿತ್ತು ಎಂಬುದನ್ನು ಸಹ ಒಪ್ಪಿಕೊಂಡರು. ಆದರೆ, ಒಮ್ಮೆ ಮನಸ್ಸು ಮಾಡಿದರೆ, ನಿರ್ದೇಶಕರು ಮತ್ತು ಸಹ–ನಟನಿಗೆ ಸಂಪೂರ್ಣವಾಗಿ ಶರಣಾಗುತ್ತೇನೆ ಅನ್ನೋದನ್ನು ಒಪ್ಪಿಕೊಂಡರು. "ನಾನು ಶಕ್ತಿಯನ್ನು ಓದುತ್ತೇನೆ ಮತ್ತು ಅದಕ್ಕೆ ಅನುಗುಣವಾಗಿ ತಲುಪಿಸುತ್ತೇನೆ. ನನ್ನಲ್ಲಿ ಒಂದು ರೀತಿಯ ಬದಲಾವಣೆ ಆಗಿದೆ ಎಂದು ಭಾವಿಸುತ್ತೇನೆ" ಎಂದು ತಿಳಿಸಿದರು.

ತಮ್ಮ ಬಾಲ್ಯದ ಫೋಬಿಯಾವನ್ನು ಹೋಗಲಾಡಿಸಲು ಮತ್ತು ತನ್ನ ಮಿತಿಗಳನ್ನು ಮೀರಿ ನಟಿಸಲು ಸಹಾಯ ಮಾಡಿದ್ದಕ್ಕಾಗಿ ಅಲ್ಲು ಅರ್ಜುನ್ ಮತ್ತು ನಿರ್ದೇಶಕ ಸುಕುಮಾರ್ ಅವರಿಗೆ ಕ್ರೆಡಿಟ್ ನೀಡಿದ್ದಾರೆ. ಜೊತೆಗೆ ಧನ್ಯವಾದ ಅರ್ಪಿಸಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-32 Email-mussanje2010@gmail.com, Phone: **9448074878**